
RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 78 ಪುಟ: 06 ಸೋಮವಾರ 17-02-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)    Executive Editor: L P Babu    Honourary Editor: Venkatesh



**ಅಭಿಮಾನಿಗಳ ಪ್ರೀತಿಗೆ ಬೆಲೆ ಕಟ್ಟಲು ಸಾಧ್ಯವಿಲ್ಲ**

**ಮುತ್ತು ಕೊಟ್ಟಿದ್ರು ಪ್ರಧಾನಿ ಇಂದಿರಾ ಗಾಂಧಿ**

**ದಿ ಡೆವಿಲ್ ಟೀಸರ್ ಬಿಡುಗಡೆ** ಪುಟ 6

# ನಮ್ಮದು ರೈತ ಪರ ಸರ್ಕಾರ

## ಅನ್ನದಾತರ ಬೇಡಿಕೆಗಳನ್ನು ಹಂತ-ಹಂತವಾಗಿ ಈಡೇರಿಸಲಾಗುವುದು: ಸಿದ್ದರಾಮಯ್ಯ

**ಬೆಂಗಳೂರು:** ನಮ್ಮದು ರೈತ ಪರ ಸರ್ಕಾರವಾಗಿದ್ದು, ದೇಶದ ಬೆನ್ನೆಲುಬಾಗಿರುವ ಅನ್ನದಾತರ ಎಲ್ಲ ಸಮಸ್ಯೆಗಳನ್ನು ಹಂತ-ಹಂತವಾಗಿ ಈಡೇರಿಸಲಾಗುವುದುಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ತಿಳಿಸಿದ್ದಾರೆ.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರೈತ ಸಂಘದ ಮುಖಂಡರುಗಳೊಂದಿಗೆ 2025-26ನೇ ಸಾಲಿನ ಆಯವ್ಯಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ನಾನು ಕೂಡ ರೈತ ಕುಟುಂಬದಿಂದ ಬಂದವನೇ ಆಗಿದ್ದು, ನನಗೆ ರೈತರ ಎಲ್ಲಾ ಕಷ್ಟ ಸುಖಗಳು ತಿಳಿದಿವೆ. ಕಾಲ ಕಾಲಕ್ಕೆ ರೈತರಿಗೆ ಏನು ಬೇಕಾಗುತ್ತದೆ ಎಂದು ಕೂಡ ಸರ್ಕಾರ ಅರಿತಿದೆ. ಹಾಗಾಗಿ ರೈತರ ಎಲ್ಲಾ ಸಮಸ್ಯೆಗಳನ್ನು ಈಡೇರಿಸುವ ಇಚ್ಛಾಶಕ್ತಿಯನ್ನು ನಾವು ಹೊಂದಿದ್ದೇವೆ ಎಂದು ಹೇಳಿದರು.

ಬಜೆಟ್‌ನಲ್ಲಿ ರೈತ ಸಮುದಾಯಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಕೃಷಿ, ತೋಟಗಾರಿಕೆ, ಹೈನುಗಾರಿಕೆ ಸೇರಿದಂತೆ ರೈತ ಸಮುದಾಯ ಅವಲಂಬಿತವಾಗಿರುವ ಎಲ್ಲಾ ವಿಭಾಗಗಳಿಗೂ ಆದ್ಯತೆ ಮೇರೆಗೆ ನೆರವು ನೀಡಲಾಗುವುದು ಎಂದು ತಿಳಿಸಿದರು.

ದೇಶಕ್ಕೆ ಅನ್ನ ನೀಡುವ ರೈತನ ಬದುಕು ಹಸನಾಗಿರಬೇಕು. ರೈತರು ಎಂತಹ ಸಂದರ್ಭದಲ್ಲೂ ಧೃತಿಗೆಡದಂತಹ ಸನ್ನಿವೇಶ ನಿರ್ಮಾಣವಾಗಬೇಕು ಆನಿಟ್ಟಿನಲ್ಲಿ ಸರ್ಕಾರ ಯೋಜನೆ ರೂಪಿಸಲಿದೆ ಎಂದರು. ರೈತರ ಹಿತದೃಷ್ಟಿ ಕಾಯುವ ಉದ್ದೇಶದಿಂದಲೇ ಮೈಕ್ರೋಫೈನಾನ್ಸ್ ಹಾವಳಿಗೆ ಕಡಿವಾಣ ಹಾಕುವ ಸಂಬಂಧ ಸರ್ಕಾರ ಸುಗ್ರೀವಾಜ್ಞೆ ಜಾರಿಗೆ ತಂದಿದೆ. ಬಲವಂತವಾಗಿ ಸಾಲ



ವಸೂಲಿಗೆ ಮುಂದಾಗುವವರನ್ನು ಜೈಲಿಗೆ ಕಳುಹಿಸುವ ಕಾಯ್ದೆ ರೂಪಿಸಲಾಗಿದೆ ಎಂದು ಸಿಎಂ ತಿಳಿಸಿದರು. ರೈತರು ಹೆಚ್ಚಾಗಿ ಕಷ್ಟಬಂದಾಗ ಇಂತಹ ಸಣ್ಣಪುಟ್ಟ ಫೈನಾನ್ಸ್ ಸಂಸ್ಥೆಗಳನ್ನೇ ಅವಲಂಬಿಸುತ್ತಾರೆ.ನಂತರ ಸಾಲ ತೀರಿಸಲಾಗದೇ ಬಸವಳಿಯುತ್ತಾರೆ. ಇನ್ನು ಮುಂದೆ ಇಂತಹ ಸಮಸ್ಯೆಗಳು ರೈತರನ್ನು ಕಾಡುವುದಿಲ್ಲ ಎಂದು ಸಿದ್ದರಾಮಯ್ಯ ಹೇಳಿದರು.

ಅತಿ ಹೆಚ್ಚು ಉದ್ಯೋಗ ಅವಲಂಬನೆ ಇರುವುದು ಕೃಷಿಯಲ್ಲೇ. ಆದ್ದರಿಂದ ರೈತರ ಬೇಡಿಕೆಗಳಿಗೆ ನಮ್ಮದು ಪ್ರಥಮ ಆದ್ಯತೆ ಎಂದರು.

ಸಭೆಯು ಪ್ರಾರಂಭಕ್ಕೂ ಮುನ್ನ ಸಭೆಯಲ್ಲಿ ಭಾಗವಹಿಸಿದ್ದ ವಿವಿಧ ರೈತ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿದರು.



ಬೆಂಗಳೂರಿನ ಆರ್.ಟಿ.ನಗರ ಮುಖ್ಯರಸ್ತೆಯಲ್ಲಿ ನಡೆಸಲಾಗುತ್ತಿರುವ ವೈಟ್ ಟಾಪಿಂಗ್ ಕಾಮಗಾರಿಯನ್ನು ಸಚಿವ ಬೈರತಿ ಸುರೇಶ್ ಅವರೊಂದಿಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಪರಿಶೀಲನೆ ನಡೆಸಿದರು.

## ಮುಡಾ: ವಿಚಾರಣೆ ಫೆ.24ಕ್ಕೆ ಮುಂದೂಡಿಕೆ

**ಬೆಂಗಳೂರು:** ಸಿಎಂ ಸಿದ್ದರಾಮಯ್ಯ ವಿರುದ್ಧದ ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ವಿಚಾರಣೆಯನ್ನು ಫೆಬ್ರವರಿ 24ಕ್ಕೆ ಮುಂದೂಡಿಕೆ ಮಾಡಿದೆ.



ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಅಂತಿಮ ವರದಿಯನ್ನು ಸಲ್ಲಿಸಲು ಎರಡರಿಂದ ಮೂರು ದಿನಗಳ ಕಾಲಾವಧಿ ನೀಡುವಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಲೋಕಾಯುಕ್ತ ಎಸ್ ಪಿಪಿ ವೆಂಕಟೇಶ್ ಮನವಿ ಮಾಡಿದರು.

ಈ ಹಿನ್ನೆಲೆಯಲ್ಲಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ನ್ಯಾಯಾಧೀಶರಾದ ಸಂತೋಷ್ ಗಜಾನನ ಭಟ್ ಅವರು ಅಂತಿಮ ವರದಿ ಸಲ್ಲಿಕೆಗೆ ಕಾಲಾವಕಾಶ ನೀಡಿ ವಿಚಾರಣೆಯನ್ನು ಫೆಬ್ರವರಿ 24ಕ್ಕೆ ಮುಂದೂಡಿಕೆ ಮಾಡಿದ್ದಾರೆ.

## ಎಐಸಿಸಿ ಹೆಸರು ದುರ್ಬಳಕೆ ಮಾಡುವುದು ಬೇಡ: ಕೆಎನ್ ರಾಜಣ್ಣ

**ಬೆಂಗಳೂರು:** ಸಿಎಂ ಸಿದ್ದರಾಮಯ್ಯ ಹೆಸರನ್ನು ದುರ್ಬಳಕೆ ಮಾಡಿಕೊಳ್ಳುವುದು ಬೇಡ ಎಂದ ಡಿಸಿಎಂ ಡಿಕೆ ಶಿವಕುಮಾರ್‌ಗೆ ಸಹಕಾರ ಸಚಿವ ಕೆಎನ್ ರಾಜಣ್ಣ ಖಡಕ್ ತಿರುಗೇಟು ನೀಡಿದ್ದಾರೆ.



ಬೆಂಗಳೂರಿನಲ್ಲಿ ಮಾತನಾಡಿದ ಅವರು, ನಾವು ಯಾರ ಹೆಸರನ್ನೂ ದುರ್ಬಳಕೆ ಮಾಡಿಕೊಂಡಿಲ್ಲ. ಅವರು (ಡಿಕೆ ಶಿವಕುಮಾರ್) ಎಐಸಿಸಿ ಹೆಸರನ್ನು ದುರ್ಬಳಕೆ ಮಾಡಿಕೊಳ್ಳುವುದು ಬೇಡ ಎಂದು ಹೇಳಿದ್ದಾರೆ. ಈ ಮೂಲಕ ಕರ್ನಾಟಕ ಕಾಂಗ್ರೆಸ್ ಆಂತರಿಕ ಸಂಘರ್ಷ ಮತ್ತಷ್ಟು ಹೆಚ್ಚಾಗುವ ಸುಳಿವು ದೊರೆತಿದೆ.

ಎಲ್ಲದಕ್ಕೂ ಎಐಸಿಸಿ ಹೇಳಿದೆ ಎಂದು ಎಐಸಿಸಿ ಹೆಸರನ್ನ ಅವರು ದುರ್ಬಳಕೆ ಮಾಡಿಕೊಳ್ಳಬಾರದು. ಅವರು ಎಐಸಿಸಿ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ ಎಂಬುದು ಅದು ಆರೋಪ ಅಲ್ಲ, ವಾಸ್ತವ. ನಾನು ಯಾರಿಂದಲೂ ಶಿಸ್ತಿನ ಪಾಠ ಮಾಡಿಸಿಕೊಳ್ಳಬೇಕಿಲ್ಲ ಎಂದು ರಾಜಣ್ಣ ಖಡಕ್ ಆಗಿ ಹೇಳಿದರು.

50 ವರ್ಷಗಳಿಂದ ಪಕ್ಷಕ್ಕಾಗಿ ಕೆಲಸ ಮಾಡಿದ್ದೇನೆ. ನಾನು ಸತ್ಪರಿಣಾಮ ಬೀರುವಂಥ ಮಾತನಾಡುತ್ತೇನೆಯೇ ಹೊರತು ದುಷ್ಪರಿಣಾಮ ಬೀರುವಂತಹ ಮಾತುಗಳನ್ನು ಆಡುವುದಿಲ್ಲ. ನನಗೂ ಡಿಕೆ ಶಿವಕುಮಾರ್‌ಗೂ ವೈಯುಕ್ತಿಕವಾಗಿ ಏನೂ ಇಲ್ಲ. ವಿಚಾರ ಬೇಧ ಇರಬಹುದು ಅಷ್ಟೆ. ವಿಧಾನಸೌಧಕ್ಕೆ ನಾನು ಒಂದು ರಸ್ತೆಯಲ್ಲಿ ಹೋಗೋಣ ಅಂದರೆ, ಅವರು ಮತ್ತೊಂದು ರಸ್ತೆಯಲ್ಲಿ ಹೋಗೋಣ ಎನ್ನಬಹುದು.

ನಾನು ಅವರು ಸಾಕಷ್ಟು ವರ್ಷದ ಸ್ನೇಹಿತರು. ಒಟ್ಟಿಗೆ ವಿದೇಶ ಪ್ರವಾಸ ಎಲ್ಲ ಮಾಡಿದ್ದೇವೆ. ವಿಚಾರ ಭೇದ ಅಷ್ಟೆ, ವೈಯುಕ್ತಿಕವಾಗಿ ಏನೂ ಇಲ್ಲ. ಅವರನ್ನು ಮನೆಗೆ ಒಂದು ದಿನ ಊಟಕ್ಕೆ ಕರೆಯುತ್ತೇನೆ ಎಂದು ರಾಜಣ್ಣ ಹೇಳಿದರು. ಪುಟ 2

## 4.0 ತೀವ್ರತೆಯ ಭೂಕಂಪನ

**ನವದೆಹಲಿ:** ರಾಷ್ಟ್ರ ರಾಜಧಾನಿ ದೆಹಲಿ-ಎನ್‌ಸಿಆರ್ ಸುತ್ತಮುತ್ತಲ ಪ್ರದೇಶದಲ್ಲಿ ಇಂದು ಬೆಳಗ್ಗೆ ರಿಕ್ಟರ್ ಮಾಪಕದಲ್ಲಿ 4.0 ತೀವ್ರತೆಯ ಭೂಕಂಪನ ಸಂಭವಿಸಿದೆ ಎಂದು ರಾಷ್ಟ್ರೀಯ ಭೂಕಂಪನಶಾಸ್ತ್ರ ಕೇಂದ್ರ ಎಕ್ಸ್ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದೆ. ದಿಢೀರ್ ಕಂಪನದಿಂದ ಆತಂಕಗೊಂಡ ದೆಹಲಿ, ನೋಯ್ಡಾ, ಗ್ರೇಟರ್ ನೋಯ್ಡಾ ಮತ್ತು ಘಾಜಿಯಾ ಬಾದ್‌ನ ಬಹುಮಹಡಿ ಕಟ್ಟಡಗಳ ನಿವಾಸಿಗಳು ಹೊರಗೆ ಓಡಿ ಬಂದಿದ್ದಾರೆ. "ಕಂಪನ ಸಂಭವಿಸಿದ ಪ್ರದೇಶ ನವದೆಹಲಿಯ ಪುಟ 2

## ಒಂದೇ ಕುಟುಂಬದ 4 ಶವವಾಗಿ ಪತ್ತೆ



**ಮೈಸೂರು:** ಇಲ್ಲಿನ ವಿಶ್ವೇಶ್ವರಯ್ಯ ನಗರದ ಅಪಾರ್ಟ್ಮೆಂಟ್‌ನಲ್ಲಿ ಇಂದು ಒಂದೇ ಕುಟುಂಬದ ನಾಲ್ವರು ಶವವಾಗಿ ಪತ್ತೆಯಾಗಿದ್ದಾರೆ.

ಚೇತನ (45), ಇವರ ಪತ್ನಿ ರೂಪಾಲಿ (43), ತಾಯಿ ಪ್ರಿಯಂವಧ (62) ಮತ್ತು ಮಗ ಕುಶಾಲ್ (15) ಮೃತಪಟ್ಟವರು.

ಚೇತನ್ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ. ತನ್ನ ತಾಯಿ, ಪತ್ನಿ ಮತ್ತು ಮಗನಿಗೆ ವಿಷ ಉಣಿಸಿದ ಬಳಿಕ ಚೇತನ್ ಆತ್ಮಹತ್ಯೆ ಮಾಡಿಕೊಂಡಿರುವ ಬಗ್ಗೆ ಶಂಕಿಸಲಾಗಿದೆ. ಚೇತನ್ ಮೂಲತಃ ಹಾಸನ ಜಿಲ್ಲೆಯವರು. ಪುಟ 2

## ಬಿಜೆಪಿ ಮುಖ್ಯಮಂತ್ರಿಗಳು ಸಿಟಿ ರೌಂಡ್ಸ್ ಮಾಡಿದ್ದು ಫೋಟೋಶೂಟ್‌ಗಾಗ?

**ಬೆಂಗಳೂರು:** "ಈ ಹಿಂದೆ ಬಿಜೆಪಿಯ ಮುಖ್ಯಮಂತ್ರಿಗಳು ಬೆಂಗಳೂರು ಪ್ರದರ್ಶನ ಹಾಕಿದ್ದು, ಫೋಟೋ ಶೂಟ್ ಮಾಡಲಿಕ್ಕಾ? ಆಗ ಅಶೋಕ್ ಅವರು ಅವರ ಕಾರಿನಲ್ಲಿ ಕೂತು ಹೋಗುತ್ತಿದ್ದರಲ್ಲ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿರುಗೇಟು ನೀಡಿದರು.

ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಸೋಮವಾರ ಪ್ರತಿಕ್ರಿಯೆ ನೀಡಿದರು.

ನಿಮ್ಮ ಬೆಂಗಳೂರು ಸಿಟಿ ರೌಂಡ್ ಅನ್ನು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಫೋಟೋ ಶೂಟ್ ಎಂದು ಟೀಕಿಸಿರುವ ಬಗ್ಗೆ ಕೇಳಿದಾಗ, "ಬಿಜೆಪಿವರು ಇರುವುದೇ ಟೀಕೆ ಮಾಡಲು. ಬಿಜೆಪಿಗೆ ಬೇರೆ ಏನು ಕೆಲಸ ಇದೆ. ನಾವು ನಮ್ಮ ಕರ್ತವ್ಯ ಮಾಡುತ್ತಿದ್ದೇವೆ.

ಇದು ದೊಡ್ಡ ಮೊತ್ತದ ಯೋಜನೆ, ಇದರ ಗುಣಮಟ್ಟ ಸರಿಯಾಗಿದೆಯೇ? ಸಧ್ಯ 150 ಕಿ.ಮೀ ಉದ್ದದ ರಸ್ತೆ ಕಾಮಗಾರಿ ನಡೆಯುತ್ತಿದೆ. 1,700 ಕೋಟಿ ಮೊತ್ತದ ಯೋಜನೆ. ಇದನ್ನು



ಕಾಲಮಿತಿಯೊಳಗೆ ಮುಗಿಸುವ ಗುರಿ ಹೊಂದಿದ್ದೇವೆ.

ಮುಂದೆಯೂ ಇಂತಹ ಯೋಜನೆ ಕೈಗೆತ್ತಿಕೊಳ್ಳುವ ಉದ್ದೇಶವಿದೆ. ಈ ವಿಚಾರವಾಗಿ ಸ್ಥಳೀಯ ಶಾಸಕರ ಅಭಿಪ್ರಾಯ ಏನಿದೆ ಎಂದು ಚರ್ಚೆ ಮಾಡಿದ್ದೇನೆ. ಮತ್ತೆ ಕೆಲವು ಯೋಜನೆ ಕಾಮಗಾರಿ ಆದೇಶ ಆಗಿಲ್ಲ. ಬೆಂಗಳೂರಿನ ರಸ್ತೆಗಳನ್ನು ಸುಧಾರಿಸಲು 600 ಕೋಟಿ ಮೊತ್ತದ ಯೋಜನೆ ಹಮ್ಮಿಕೊಂಡಿದ್ದೇವೆ.

ಕೇಂದ್ರ ಸಚಿವ ಅಶ್ವಿನ್ ವೈಷ್ಣವ್ ಅವರು ಬೆಂಗಳೂರಿನ ಕೆಲವು ಸಂಚಾರಿ ಯೋಜನೆಗಳ ಬಗ್ಗೆ ಎತ್ತಿರುವ ಪ್ರಶ್ನೆ ಬಗ್ಗೆ ಕೇಳಿದಾಗ, "ಅವರು ಏನು ಹೇಳಿದ್ದಾರೆ ಹೆಚ್ಚಿನ ಮಾಹಿತಿ ಇಲ್ಲ. ಅವರು ಒಳ್ಳೆಯ ಸಲಹೆ ಕೊಟ್ಟಿದ್ದರೆ ತೆಗೆದುಕೊಳ್ಳುತ್ತೇವೆ. ರಾಜಕಾರಣ ಇದ್ದರೆ ನಾವು ಅದನ್ನು ನಿಭಾಯಿಸುತ್ತೇವೆ"

ಕೆಲವು ತಿಂಗಳಿಂದ ಅನ್ನಭಾಗ್ಯ ಅಕ್ಕಿ ಹಣ ಹಾಗೂ ಗೃಹಲಕ್ಷ್ಮಿ ಹಣ ಬಂದಿಲ್ಲ ಎಂದು ಕೇಳಿದಾಗ, "ಮೂರು ತಿಂಗಳಿಂದ ಬಂದಿಲ್ಲ. ಈ ಹಣವನ್ನು ನಾವು ಹಾಕುತ್ತೇವೆ. ನಾವು ಕೊಟ್ಟ ಮಾತಿನಂತೆ ನಡೆಯುತ್ತೇವೆ" ಎಂದು ತಿಳಿಸಿದರು.

ಎಐಸಿಸಿಯನ್ನು ನೀವು ದುರ್ಬಳಕೆ ಮಾಡಿಕೊಳ್ಳುತ್ತಿದ್ದೀರಿ ಎಂದು ರಾಜಣ್ಣ ಹೇಳಿದ್ದಾರೆ ಎಂದು ಕೇಳಿದಾಗ, "ಈಗ ಚರ್ಚೆ ಬೇಡ, ನಾನು ಪಕ್ಷದ ಕಾರ್ಯಕ್ರಮ ಹಿನ್ನೆಲೆಯಲ್ಲಿ ಕೇರಳಕ್ಕೆ ಹೋಗುತ್ತಿದ್ದೇನೆ. ನಂತರ ರಾಜಸ್ಥಾನದಲ್ಲಿ ಸಚಿವರುಗಳ ಸಭೆ ಇದ್ದು, ಅಧಿಕಾರಿಗಳ ಸಮೇತ ಪ್ರಯಾಣ ಮಾಡುತ್ತಿದ್ದೇನೆ. ಅಲ್ಲಿಂದ ಬಂದ ನಂತರ ಮಾತನಾಡುತ್ತೇನೆ" ಎಂದು ತಿಳಿಸಿದರು.

## ಇಂದು ಚುನಾವಣಾ ಆಯುಕ್ತರ ಆಯ್ಕೆಗೆ ಸಭೆ

**ನವದೆಹಲಿ:** ಭಾರತೀಯ ಚುನಾವಣಾ ಆಯೋಗದ ಮುಖ್ಯ ಆಯುಕ್ತ (ಸಿಇಸಿ) ರಾಜೀವ್ ಕುಮಾರ್ ಅವರು ನಾಳೆ (ಫೆ.18) ನಿವೃತ್ತಿಯಾಗಲಿದ್ದಾರೆ. ಈ ಹಿನ್ನೆಲೆಯಲ್ಲಿ ಪ್ರಧಾನ ಮಂತ್ರಿಗಳ ನೇತೃತ್ವದ ತ್ರಿಸದಸ್ಯ ಸಮಿತಿ ನೂತನ ಆಯುಕ್ತರ ಆಯ್ಕೆಗೆ ಇಂದು ಸಭೆ ಸೇರಲಿದೆ.




ಪ್ರಧಾನಿ ನರೇಂದ್ರ ಮೋದಿ, ಲೋಕಸಭೆಯ ವಿಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಪ್ರಧಾನಿ ಅವರಿಂದ ನಾಮ ನಿರ್ದೇಶನಗೊಂಡ ಕೇಂದ್ರ ಸಚಿವರು ಆಯ್ಕೆ ಸಮಿತಿ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಮೂಲಗಳ ಪ್ರಕಾರ, ಕಾನೂನು ಸಚಿವ ಅರ್ಜುನ್ ಮೇಘವಾಲ್ ಕೂಡ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ.2023ರ ಡಿಸೆಂಬರ್‌ನಲ್ಲಿ ಜಾರಿಗೆ ತಂದ ಮುಖ್ಯ ಚುನಾವಣಾ ಆಯುಕ್ತ ಮತ್ತು ಇತರ ಚುನಾವಣಾ ಆಯುಕ್ತರ ಕಾಯ್ದೆ-2023ರ ಅಡಿಯಲ್ಲಿ ಪುಟ 2 ಇದೇ ಮೊದಲ ಬಾರಿಗೆ ಮುಖ್ಯ ಚುನಾವಣಾ ಆಯುಕ್ತರ ನೇಮಕಾತಿ ನಡೆಯಲಿದೆ. ಇದೇ ಕಾನೂನಿನಂತೆ ಎಸ್.ಎಸ್.ಸಂಧು ಮತ್ತು ಜ್ಞಾನೇಶ್ ಕುಮಾರ್ ಅವರನ್ನು 2024ರ ಮಾರ್ಚ್‌ನಲ್ಲಿ ಚುನಾವಣಾ ಆಯುಕ್ತರನ್ನಾಗಿ ನೇಮಿಸಲಾಗಿತ್ತು. ಈ ಕಾಯ್ದೆಗೆ ಮೊದಲು ಚುನಾವಣಾ ಆಯುಕ್ತರ ನೇಮಕಾತಿಯಲ್ಲಿ ಜ್ಯೇಷ್ಠತೆ ಆಧಾರವನ್ನು ಪರಿಗಣಿಸಲಾಗುತ್ತಿತ್ತು. ಪುಟ 2

## ನಟ ದರ್ಶನ್ ಪರ ಕಪಿಲ್ ಸಿಬಲ್ ವಾದ

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದ ಸಂಬಂಧ ಸುಪ್ರೀಂ ಕೋರ್ಟ್‌ನಲ್ಲಿ ನಟ ದರ್ಶನ್ ಪರ ಹಿರಿಯ ವಕೀಲ ಕಪಿಲ್ ಸಿಬಲ್ ವಾದ ಮಂಡನೆ ಮಾಡುವ ಸಾಧ್ಯತೆಯಿದೆ.



ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧ ಹೈಕೋರ್ಟ್ ದರ್ಶನ್ ಇನ್ನಿತರರಿಗೆ ನೀಡಿರುವ ಜಾಮೀನು ಪ್ರಶ್ನಿಸಿ ನಗರ ಪೊಲೀಸರು ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಅರ್ಜಿ ಸಲ್ಲಿಸಿದ್ದಾರೆ.

ಈ ಅರ್ಜಿಯ ವಿಚಾರಣೆ ಮಾರ್ಚ್‌ನಲ್ಲಿ ನಡೆಯ ಲಿರುವ ಹಿನ್ನೆಲೆಯಲ್ಲಿ ದರ್ಶನ್ ಅವರ ಕಾನೂನು ತಂಡ ಕಪಿಲ್ ಸಿಬಲ್ ಅವರನ್ನು ಸಂಪರ್ಕಿಸಿದೆ.

ಈಗಾಗಲೇ ಕಪಿಲ್ ಸಿಬಲ್‌ರನ್ನು ಭೇಟಿಯಾಗಿ ಹೈಕೋರ್ಟ್‌ನ ವಾದ ಪ್ರತಿವಾದ, ಕೇಸ್ ಹಿಸ್ಟರಿಯನ್ನು ನೀಡಿ ಶುಲ್ಕದ ಬಗ್ಗೆಯೂ ಚರ್ಚೆ ನಡೆದಿದೆ. ದರ್ಶನ್ ಪರ ವಾದಕ್ಕೆ ಒಪ್ಪಿಗೆ ನೀಡಿದರೆ ಮಾ.18 ರಂದು ಕಪಿಲ್ ಸಿಬಲ್ ನ್ಯಾಯಾಲಯಕ್ಕೆ ಹಾಜರಾಗುವ ಸಾಧ್ಯತೆಯಿದೆ. ಕರ್ನಾಟಕ ಹೈಕೋರ್ಟ್‌ನಲ್ಲಿ ದರ್ಶನ್ ಪರ ಹಿರಿಯ ವಕೀಲ ಸಿವಿ ನಾಗೇಶ್ ವಾದ ಮಂಡಿಸಿದ್ದರು.

ನಟ ದರ್ಶನ್, ಅವರ ಆಪ್ತೆ ಪವಿತ್ರಾ ಗೌಡ ಮತ್ತು ಇತರೆ ಆರೋಪಿಗಳಿಗೆ ಕಳೆದ ಡಿ.13 ರಂದು ಪೂರ್ಣಾವಧಿಗೆ ಜಾಮೀನು ಮಂಜೂರಾಗಿತ್ತು. ಹೈಕೋರ್ಟ್ ತೀರ್ಪು ಪ್ರಶ್ನಿಸಿ ಮಾಡಿ ಡಿಸೆಂಬರ್ ಅಂತ್ಯದಲ್ಲಿ ಬೆಂಗಳೂರು ಪೊಲೀಸರು ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿಯನ್ನು ಸಲ್ಲಿಸಿದ್ದಾರೆ. ವಕೀಲ ಅನಿಲ್ ನಿಶಾನಿ ಮುಖಾಂತರ ಮೇಲ್ಮನವಿ ಸಲ್ಲಿಸಿರುವ ಪುಟ 2

## ಜವಳಿ ಕ್ಷೇತ್ರಕ್ಕೆ 9 ಲಕ್ಷ ಕೋಟಿ ರೂ ಟಾರ್ಗೆಟ್

**ನವದೆಹಲಿ:** ಭಾರತದಿಂದ ಜವಳಿ ರಫ್ತು ಮೂರು ಲಕ್ಷ ಕೋಟಿ ರೂ ಮಟ್ಟ ಮುಟ್ಟಿದೆ. 2030ರೊಳಗೆ ಈ ಕ್ಷೇತ್ರದಿಂದ ಜವಳಿ ರಫ್ತು ಪ್ರಮಾಣ 9 ಲಕ್ಷ ಕೋಟಿ ರೂ ತಲುಪಬೇಕೆನ್ನುವುದು ಗುರಿ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.



ರಾಷ್ಟ್ರ ರಾಜಧಾನಿ ನಗರಿಯಲ್ಲಿ ನಡೆದ ಭಾರತ್ ಜವಳಿ ಮೇಳದಲ್ಲಿ ಮಾತನಾಡಿದ ಅವರು, 'ಇವತ್ತು ಭಾರತ ವಿಶ್ವದ ಆರನೇ ಅತಿದೊಡ್ಡ ಜವಳಿ ರಫ್ತುದಾರ ದೇಶ. ನಮ್ಮ ಜವಳಿ ರಫ್ತು ಈಗ ಮೂರು ಲಕ್ಷ ಕೋಟಿ ರೂ ಮುಟ್ಟಿದೆ. 2030ರೊಳಗೆ ಇದು ಒಂಬತ್ತು ಲಕ್ಷ ಕೋಟಿ ರೂ ಮುಟ್ಟಬೇಕು ಎನ್ನುವುದು ನಮ್ಮ ಗುರಿ. ಇವತ್ತಿ ಕಂಡು ಬರುತ್ತಿರುವ ಉತ್ಸಾಹ ನೋಡಿದರೆ ನಾವು ನಿರೀಕ್ಷಿಸಿದುದಕ್ಕಿಂತಲೂ ಬೇಗನೇ ಗುರಿ ಮುಟ್ಟಬಹುದು ಎನಿಸುತ್ತಿದೆ' ಎಂದು ಅಭಿಪ್ರಾಯಪಟ್ಟಿದ್ದಾರೆ.

'ನಾವು ನೆಟ್ಟ ಬೀಜ ಇವತ್ತು ವೇಗವಾಗಿ ಬೆಳವಣಿಗೆ ಕಾಣುತ್ತಿದ್ದು, ದೊಡ್ಡ ಆಲದ ಮರವಾಗಿ ಬೆಳೆಯುತ್ತಿದೆ. ಭಾರತ್ ಟೆಕ್ಸ್ ಈಗ ಬೃಹತ್ ಜಾಗತಿಕ ಜವಳಿ ಕಾರ್ಯಕ್ರಮವಾಗುತ್ತಿದೆ. ಇದರಲ್ಲಿ ಭಾಗಿಯಾಗಿರುವ ಎಲ್ಲರ ಪ್ರಯತ್ನಗಳೂ ಶ್ಲಾಘನೀಯ' ಎಂದು ಅವರು ಹೇಳಿದ್ದಾರೆ.

'ಇವತ್ತು 120ಕ್ಕೂ ಹೆಚ್ಚು ದೇಶಗಳು ಭಾರತ್ ಟೆಕ್ಸ್‌ನಲ್ಲಿ ಪಾಲ್ಗೊಂಡಿವೆ. ಇಲ್ಲಿಗೆ ಬಂದಿರುವ ಉದ್ದಿಮೆದಾರರಿಗೆ 120 ದೇಶಗಳ ಸಂಸ್ಕೃತಿ ಮತ್ತು ಸಾಂಸ್ಕೃತಿಕ ಅಗತ್ಯಗಳೇನು ಎಂಬುದರ ಅರಿವು ಸಿಗಲಿದೆ. ಲೋಕಲ್‌ನಿಂದ ಪುಟ 2

ಮೊದಲ ಪುಟದಿಂದ

## ಮಾಡುವುದು ಬೇಡ:

ಹೈಕಮಾಂಡ್ ಎಲ್ಲರ ಅಭಿಪ್ರಾಯ ಸಂಗ್ರಹಿಸಲಿ: ರಾಜಣ್ಣ ಆಗ್ರಹ

ಕರ್ನಾಟಕದಲ್ಲಿ ಮುಖ್ಯಮಂತ್ರಿ ಬದಲಾವಣೆ ಬಗ್ಗೆ ಚರ್ಚೆ ವಿಚಾರವಾಗಿ ಪ್ರತಿಕ್ರಿಯಿಸಿದ ರಾಜಣ್ಣ, ಹೈಕಮಾಂಡ್ ಏಕಪಕ್ಷೀಯವಾಗಿ ನಿರ್ಧಾರವೇನೂ ಮಾಡಲ್ಲ. ಎಲ್ಲರ ಅಭಿಪ್ರಾಯ ಸಂಗ್ರಹ ಮಾಡಲೇಬೇಕು ಎಂದು ಆಗ್ರಹಿಸಿದರು. ನಾವು ತಪ್ಪು ಮಾಡಿದ್ರೆ ಮಾತ್ರ ಎಚ್ಚರಿಕೆ ಕೊಡಬೇಕು. ನಾವೇನೂ ತಪ್ಪು ಮಾಡಿಲ್ಲ. ಯಾರು ಕೂಡ ಹೈಕಮಾಂಡ್ ವಿರುದ್ಧ ಇಲ್ಲ ಎಂದರು.

ಜಿಸಿ ಚಂದ್ರಶೇಖರ್ ಯಾರು, ಅವರ ಮಾತಿಗೆ ಯಾಕೆ ಇಷ್ಟು ಮನ್ನಣೆ? ಕೆಪಿಸಿಸಿ ಕಾರ್ಯಾಧ್ಯಕ್ಷ ಅಂದರೆ ಎರಡು ಕೊಂಬು ಇದೆಯಾ? ಶಿಶುಪಾಲ ಅವರೇ, ನಾನು ಶ್ರೀಕೃಷ್ಣ ಎಂದು ರಾಜಣ್ಣ ಹೇಳಿದರು.

## ಶವವಾಗಿ ಪತ್ತೆ

ಬೇರೆ ರಾಷ್ಟ್ರದಲ್ಲಿ ಕೆಲಸ ಮಾಡಲು ಇವರು ಕೆಲಸಗಾರರನ್ನು ನೇಮಕ ಮಾಡಿ ಕಳುಹಿಸುತ್ತಿದ್ದರು. ಸಾಲ ಹೆಚ್ಚಾಗಿ ಆತ್ಮಹತ್ಯೆ ಮಾಡಿಕೊಂಡಿರುವ ಸಾಧ್ಯತೆ ಇದೆ ಎಂದು ಅನುಮಾನ ವ್ಯಕ್ತಪಡಿಸಲಾಗಿದೆ. ಆದರೆ ನಿಖರ ಕಾರಣ ಗೊತ್ತಾಗಿಲ್ಲ. ಪೊಲೀಸ್ ಕಮಿಷನರ್ ಸೀಮಾ ಲಾಟ್ಕರ್, ಡಿಸಿಪಿ ಜಾನ್ಹವಿ ಮತ್ತು ವಿದ್ಯಾರಣ್ಯಪುರಂ ಇನ್ಸ್‌ಪೆಕ್ಟರ್ ಮೋಹಿತ್ ಸೇರಿ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂಬಂಧ ಪ್ರತಿಕ್ರಿಯೆ ನೀಡಿದ ಅವರು, ಹಾಸನದ ಚೇತನ ಮೆಕ್ಯಾನಿಕಲ್ ಇಂಜಿನಿಯರ್ ಆಗಿದ್ದು ದುಬೈನಲ್ಲಿ ಕೆಲಸ ಮಾಡುತ್ತಿದ್ದರು. 2019ರಲ್ಲಿ ಮೈಸೂರಿಗೆ ಶಿಫ್ಟ್ ಆಗಿದ್ದರು. ಸದ್ಯ ಲೇಬರ್ ಕಂಟ್ರಾಕ್ಟರ್ ಆಗಿ ಸೌಧಿಗೆ ಕೆಲಸಗಾರರನ್ನು ಕಳುಹಿಸುತ್ತಿದ್ದರು. ಇವರ ಪತ್ನಿ ರೂಪಾಲಿ ಮೈಸೂರಿನವರು. ಕುಟುಂಬಸ್ಥರು ಗೊರೂರುಗೆ ತೆರಳಿ ದೇವರ ದರ್ಶನ ಪಡೆದು ಬಂದಿದ್ದರು. ಜೊತೆಗೆ ಮೈಸೂರಲ್ಲಿರುವ ರೂಪಾಲಿ ಅವರ ತವರು ಮನೆಯಲ್ಲಿ ಊಟ ಮಾಡಿ ಬಂದಿದ್ದರು. ಬಳಿಕ ಅಮೆರಿಕದಲ್ಲಿರುವ ಸಹೋದರ ಭರತ್‌ಗೆ ಚೇತನ್ ಕರೆ ಮಾಡಿದ್ದರು. ನಂತರ ಭರತ್ ತಮ್ಮ ಸಂಬಂಧಿಕರಿಗೆ ಕರೆ ಮಾಡಿ ಅಪಾರ್ಟ್‌ಮೆಂಟ್ ಬಳಿ ತೆರಳುವಂತೆ ಹೇಳಿದ್ದರು. ಅದರಂತೆ ಸಂಬಂಧಿಕರು ಅಪಾರ್ಟ್‌ಮೆಂಟ್ ಬಳಿ ಬಂದಾಗ ಘಟನೆ ಬೆಳಕಿಗೆ ಬಂದಿದೆ.

ಇನ್ನು ಅಪಾರ್ಟ್‌ಮೆಂಟ್‌ನಲ್ಲಿ ಇವರ ಎರಡು ಪ್ಲ್ಯಾಟ್‌ಗಳಿದ್ದು ಒಂದರಲ್ಲಿ ಚೇತನ, ಪತ್ನಿ ರೂಪಾಲಿ ಮತ್ತು ಮಗ ವಾಸಿಸುತ್ತಿದ್ದರು. ಇನ್ನೊಂದರಲ್ಲಿ ಚೇತನ್ ತಾಯಿ ವಾಸವಾಗಿದ್ದರು. ಪ್ರಾಥಮಿಕ ಹಂತದಲ್ಲಿ ಸಾವು ಯಾಕಾಗಿದೆ ಎಂಬುದು ಗೊತ್ತಿಲ್ಲ. ಮರಣೋತ್ತರ ಪರೀಕ್ಷೆ ಮತ್ತು ಎಫ್‌ಎಸ್‌ಎಲ್ ವರದಿ ಬಂದ ಬಳಿಕ ಹೆಚ್ಚಿನ ಮಾಹಿತಿ ಲಭ್ಯವಾಗಲಿದೆ.

ವಿದ್ಯಾರಣ್ಯಪುರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## 4.0 ತೀವ್ರತೆಯ ಭೂಕಂಪನ

ಸುಮಾರು 4 ಕಿ.ಮೀ ಆಳದಲ್ಲಿತ್ತು. ಇದರ ಕೇಂದ್ರಬಿಂದು ದೌಲಾಕೌನ್ ಪ್ರದೇಶದ ದುರ್ಗಾಬಾಯಿ ದೇಶ್‌ಮುಖ್ ವಿಶೇಷ ಶಿಕ್ಷಣ ಕಾಲೇಜು ಸಮೀಪ ದಾಖಲಾಗಿದೆ.

ಭಾರೀ ಶಬ್ದ ಕೇಳಿಸಿತು. ಈ ಪ್ರದೇಶದ ಸಮೀಪ ಸರೋವರವಿದೆ. ಇಲ್ಲಿ ಪ್ರತೀ 2–3 ವರ್ಷಗಳಿಗೊಮ್ಮೆ ಕಡಿಮೆ ತೀವ್ರತೆಯ ಲಘು ಭೂಕಂಪನಗಳು ಆಗುತ್ತಿರುತ್ತವೆ. 2015ರಲ್ಲೂ 3.3 ತೀವ್ರತೆಯ ಕಂಪನ ಸಂಭವಿಸಿತ್ತು" ಎಂದು ಕೇಂದ್ರದ ಅಧಿಕಾರಿ ಹೇಳಿದರು.

ನೊಯ್ಡಾ ಸೆಕ್ಟರ್ ಇ ಬ್ಲಾಕ್‌ನಲ್ಲಿ 50 ವರ್ಷದ ಆಸುಪಾಸಿನ ಮಹಿಳೆಯೊಬ್ಬರು ಬೆಳಗಿನ ವಾಕ್‌ಗೆ ಬಂದವರು ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿ, "ನಾವು ಬೆಳಗಿನ ವಾಕ್‌ಗೆಂದು ಪಾರ್ಕ್‌ಗೆ ಬಂದಿದ್ದೆವು. ಹಾಗಾಗಿ ನಮಗೆ ಅಷ್ಟು ತೀವ್ರ ಸ್ವರೂಪದ ಕಂಪನದ ಅನುಭವವಾಗಿಲ್ಲ. ಆದರೆ ಕಂಪನ ಸ್ವಲ್ಪ ಪ್ರಬಲವಾಗಿಯೇ ಇತ್ತು. ಜನರು ಕಟ್ಟಡಗಳಿಂದ ಹೊರ ಬಂದಿದ್ದನ್ನು ಕಂಡೆ" ಎಂದು ತಿಳಿಸಿದ್ದಾರೆ.

ಪ್ರಧಾನಿ ಮೋದಿ ಮನವಿ: ದೆಹಲಿ ಮತ್ತು ಸುತ್ತಮುತ್ತ ಭೂಕಂಪನವಾಗಿದೆ. ಸುರಕ್ಷತಾ ಮುನ್ನೆಚ್ಚರಿಕೆಗಳೊಂದಿಗೆ ಎಲ್ಲರೂ ಶಾಂತವಾಗಿ ಮತ್ತು ಜಾಗೃತರಾಗಿರಬೇಕು. ಭೂಕಂಪನದ ಬಗ್ಗೆ ಅಧಿಕಾರಿಗಳು ತೀವ್ರ ನಿಗಾವಹಿಸಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

"ದೆಹಲಿ, ನೀವೆಲ್ಲರೂ ಸುರಕ್ಷಿತವಾಗಿದ್ದೀರಿ ಎಂದು ನಾವು ನಂಬಿದ್ದೇವೆ" ಎಂದು ದೆಹಲಿ ಪೊಲೀಸರು ತಿಳಿಸಿದ್ದು, ತುರ್ತು ಸಂದರ್ಭಗಳಲ್ಲಿ 112 ದೂರವಾಣಿ ಸಂಖ್ಯೆಗೆ ಕರೆ ಮಾಡುವಂತೆಯೂ ಸಲಹೆ ನೀಡದ್ದಾರೆ.

## ಆಯುಕ್ತರ ಆಯ್ಕೆಗೆ ಸಭೆ

ಮುಖ್ಯ ಆಯುಕ್ತರ ನಂತರದಲ್ಲಿ ಇಬ್ಬರು ಚುನಾವಣಾ ಆಯುಕ್ತರಲ್ಲಿ ಒಬ್ಬರನ್ನು ಈ ಉನ್ನತ ಹುದ್ದೆಗೆ ಪರಿಗಣಿಸಲಾಗುತ್ತಿತ್ತು. ಇದೀಗ ಪರಿಷ್ಕೃತ ಆಯ್ಕೆ ಪ್ರಕ್ರಿಯೆಯ ಅಡಿಯಲ್ಲಿ ಬಹುಮತ ಅಥವಾ ಆಯ್ಕೆ ಸಮಿತಿಯೊಳಗಿನ ಒಮ್ಮತದ ನಿರ್ಧಾರವನ್ನು ಪರಿಗಣಿಸಲಾಗುವುದು.

ನೇಮಕಾತಿ ಪ್ರಕ್ರಿಯೆಯನ್ನು ಪ್ರಶ್ನಿಸಿರುವ ಅನೇಕ ಪಿಐಎಲ್‌ಗಳು ಸುಪ್ರೀಂ ಕೋರ್ಟ್‌ನಲ್ಲಿವೆ. ಈ ಕುರಿತ ಅರ್ಜಿ ವಿಚಾರಣೆಯನ್ನು ಕೋರ್ಟ್ ಫೆ.19ರಂದು ನಡೆಸಲಿದೆ.

ಇಂದು ನೇಮಕಾತಿ ಪ್ರಕ್ರಿಯೆ ನಡೆಸಲಿರುವ ತ್ರಿ ಸದಸ್ಯರ ಸಮಿತಿ ಹೊಸ ಸಿಇಸಿಯನ್ನು ಆಯ್ಕೆ ಮಾಡುತ್ತದೆಯೇ ಅಥವಾ ಹಾಲಿ ಚುನಾವಣಾ ಆಯುಕ್ತರಲ್ಲಿ ಒಬ್ಬರನ್ನು ಹುದ್ದೆಗೆ ಪರಿಗಣಿಸುತ್ತದಯೇ ಎಂಬುದನ್ನು ಕಾದು ನೋಡಬೇಕಿದೆ.

## ಜವಳಿ ಕ್ಷೇತ್ರಕ್ಕೆ 9 ಲಕ್ಷ ಕೋಟಿ ರೂ ಟಾರ್ಗೆಟ್

ಗ್ಲೋಬಲ್ ಮಟ್ಟಕ್ಕೆ ಬಿಸಿನೆಸ್ ಬೆಳೆಸುವ ಅವಕಾಶ ಸಿಕ್ಕಿದೆ. ಭಾರತ್ ಟೆಕ್ಸ್‌ನಲ್ಲಿ ನಮ್ಮ ಸಂಸ್ಕೃತಿಯ ಹೂರಣ ಮಾತ್ರವಲ್ಲ, ವಿಕಸಿತ ಭಾರತ ನಿರ್ಮಾಣದ ಕುರುಹೂ ಕಾಣುತ್ತಿದೆ' ಎಂದು ನರೇಂದ್ರ ಮೋದಿ ತಿಳಿಸಿದರು.

'ಫಾರ್ಮ್, ಫೈಬರ್, ಫ್ಯಾಬ್ರಿಕ್, ಫ್ಯಾಷನ್ ಮತ್ತು ಫಾರೀನ್‌ನ ತತ್ವವು ಭಾರತಕ್ಕೆ ಒಂದು ಮಿಷನ್ ಆಗಿ ಬದಲಾಗಿದೆ. ರೈತರು, ನೇಕಾರರು, ವಿನ್ಯಾಸಗಾರರು ಮತ್ತು ವ್ಯಾಪಾರಸ್ಥರಿಗೆ ಹೊಸ ಅವಕಾಶಗಳು ನಿರ್ಮಿತವಾಗುತ್ತಿದೆ. ಕಳೆದ ವರ್ಷ ಭಾರತದ ಜವಳಿ ಮತ್ತು ಉಡುಪು ರಫ್ತು ಶೇ.7ರಷ್ಟು ಬೆಳವಣಿಗೆ ಕಂಡಿದೆ' ಎಂದು ಹೇಳಿದ್ದಾರೆ.

## ನಟ ದರ್ಶನ್ ಪರ ಕಪಿಲ್ ಸಿಬಲ್ ವಾದ

ರಾಜ್ಯ ಸರ್ಕಾರ ಬರೋಬ್ಬರಿ 1,492 ಪುಟಗಳ ಕಡತಗಳನ್ನು ಸಲ್ಲಿಕೆ ಮಾಡಿತ್ತು.

**ಕಡತದಲ್ಲಿ ಏನಿದೆ:** ಹೈಕೋರ್ಟ್ ಜಾಮೀನು ಆದೇಶ, ಕಾಮಾಕ್ಷಿಪಾಳ್ಯ ಠಾಣೆಯಲ್ಲಿ ದಾಖಲಾದ ಎಫ್‌ಐಆರ್ ಮತ್ತು ದೂರಿನ ಪ್ರತಿ, ಮರಣೋತ್ತರ ಪರೀಕ್ಷೆಯ ವರದಿ, ಆರೋಪಿಗಳ ಗ್ರೌಂಡ್ಸ್ ಆಫ್ ಅರೆಸ್ಟ್, ನ್ಯಾಯಾಲಯಕ್ಕೆ ಸಲ್ಲಿಸಿರುವ ಅಂತಿಮ ವರದಿಯ ತರ್ಜುಮೆ ಪ್ರತಿಯಿದೆ.

ಪ್ರತ್ಯಕ್ಷ ದರ್ಶಿಗಳ ಹೇಳಿಕೆಯ ತರ್ಜುಮೆ ಕಾಪಿ, ಮರಣೋತ್ತರ ಪರೀಕ್ಷೆಯ ವರದಿ, ವಿಧಿ ವಿಜ್ಞಾನ ಪ್ರಯೋಗಾಲಯದ ವರದಿ, ಸಿಡಿಆರ್, ಪಂಚನಾಮೆ ವರದಿ, ಆರೋಪಿಗಳ ಬಳಿ ವಶಪಡಿಸಿಕೊಂಡ ಡಿಜಿಟಲ್ ವಸ್ತುಗಳ ವಿಶ್ಲೇಷಣೆಯಿದೆ.

ಸೆಷನ್ಸ್ ನ್ಯಾಯಾಲಯದಲ್ಲಿ ಜಾಮೀನು ಅರ್ಜಿ ವಜಾ ಆದೇಶ ಪ್ರತಿ, ದರ್ಶನ್‌ಗೆ ನೀಡಿದ್ದ ಮಧ್ಯಂತರ ಜಾಮೀನು ಅದೇಶ ಪ್ರತಿ, ಜೈಲಿನಿಂದ ದರ್ಶನ್ ಬಗ್ಗೆ ಸಲ್ಲಿಕೆಯಾದ ವೈದ್ಯಕೀಯ ವರದಿ, ಬಿಜಿಎಸ್ ಆಸ್ಪತ್ರೆ ವೈದ್ಯರ ವರದಿ ಸೇರಿದಂತೆ ಒಟ್ಟು 15 ಅಂಶಗಳಿಗೆ ಸಂಬಂಧಿಸಿ ಒಟ್ಟು 1492 ಪುಟಗಳ ಕಡತವನ್ನು ಕೋರ್ಟ್‌ಗೆ ನೀಡಿದೆ.

# ಶಿಸ್ತು, ಸೇವಾ ಮನೋಭಾವ ಮೂಡಿಸುವಲ್ಲಿ ರೋಟರಿ ಮಹತ್ತರ ಪಾತ್ರ




**ಶಿವಮೊಗ್ಗ:** ಫಲಾಪೇಕ್ಷೆ ಇಲ್ಲದೆ ಸೇವಾ ಮನೋಭಾವನೆ ಹಾಗೂ ನಾಯಕತ್ವದ ಗುಣಗಳನ್ನು ವೃದ್ಧಿಸುವಲ್ಲಿ ರೋಟರಿ ಸಂಸ್ಥೆ ಪ್ರಮುಖ ಪಾತ್ರ ವಹಿಸಿದೆ ಎಂದು ವಿಧಾನ ಪರಿಷತ್ ಸದಸ್ಯ ಡಿ.ಎಸ್.ಅರುಣ್ ಹೇಳಿದರು.

ನಗರದ ಕಾಸ್ಮೋ ಕ್ಲಬ್‌ನಲ್ಲಿ ರೋಟರಿ ಕ್ಲಬ್ ಶಿವಮೊಗ್ಗ ಸೆಂಟ್ರಲ್ ವತಿಯಿಂದ ಆಯೋಜಿಸಿದ್ದ ರೋಟರಿ ನಾಯಕತ್ವ ಪ್ರಶಸ್ತಿ ಪ್ರಧಾನ, ರೋಟರಿ ಅಕಾಡೆಮಿ ಫಾರ್ ಹೈಯರ್ ಲೀಡರ್‌ಶಿಪ್ ಅವಾರ್ಡ್ (ರಹಲಾ) ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರತಿಯೊಂದು ಕ್ಷೇತ್ರದಲ್ಲಿ ಯಶಸ್ಸು ಗಳಿಸಲು, ಸಾಧನೆ ಮಾಡಲು ನಾಯಕತ್ವ ಗುಣ ಬಹಳ ಮುಖ್ಯ. ರಾಜಕಾರಣದಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡಲು ರೋಟರಿ ಸಂಸ್ಥೆಯಲ್ಲಿ ಕಲಿತ ಸೇವಾ ಮನೋಭಾವ, ನಾಯಕತ್ವದ ಗುಣ ತುಂಬಾ ಸಹಕಾರಿಯಾಗಿದೆ ಎಂದು ತಿಳಿಸಿದರು.

ಎಲ್ಲ ಸಂಘ ಸಂಸ್ಥೆಗಳಿಂದ ರೋಟರಿ ಸಂಸ್ಥೆ ತುಂಬಾ ಭಿನ್ನವಾಗಿದೆ. ಸ್ನೇಹ, ಸೇವೆ ಹಾಗೂ ಒಡನಾಟಕ್ಕಾಗಿ ಸ್ಥಾಪಿತವಾದ ರೋಟರಿ ಸಂಸ್ಥೆ ಪ್ರಪಂಚಾದ್ಯಂತ ನೂರಾರು ದೇಶಗಳಲ್ಲಿ ಅತ್ಯಂತ ಪ್ರಮುಖವಾದ ಸೇವೆಯ ಮುಖಾಂತರ ಜನ ಮಾನಸ ತಲುಪಿದೆ ಎಂದು ನುಡಿದರು.

ರೋಟರಿ ಮಾಜಿ ಜಿಲ್ಲಾ ಗವರ್ನರ್ ಅಭಿನಂದನ್ ಶೆಟ್ಟಿ ಮಾತನಾಡಿ, ಸಂಘ ಸಂಸ್ಥೆಗಳು ಯಶಸ್ವಿಯಾಗಿ, ಭದ್ರವಾಗಿ ನೂರಾರು ವರ್ಷಗಳ ಕಾಲ ನಡೆಯಬೇಕಾದರೆ ಒಳ್ಳೆಯ ನಾಯಕತ್ವದ ಗುಣ ಇರಬೇಕು. ಈ ನಿಟ್ಟಿನಲ್ಲಿ ಇಂತಹ ತರಬೇತಿಗಳು ರೋಟರಿ ಸದಸ್ಯರಲ್ಲಿ ಬೆಳಕು ಚೆಲ್ಲಿ ಅವರನ್ನು ರೋಟೆರಿಯನ್ ಆಗಿ ಪರಿವರ್ತನೆ ಮಾಡಲು ಸಹಕಾರಿಯಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಗವರ್ನರ್ ಸಿ.ಎ.ದೇವಾನಂದ್ ಮಾತನಾಡಿ, ಬಹಳ ವರ್ಷಗಳ ನಂತರ ರಹಲ ಕಾರ್ಯಕ್ರಮ ಅತ್ಯಂತ ಹೆಚ್ಚು ಜನ ಸದಸ್ಯರ ನೋಂದಣಿಯೊಂದಿಗೆ ಶಿವಮೊಗ್ಗದಲ್ಲಿ ದಾಖಲೆ ಮಾಡಿದೆ. ಶಿವಮೊಗ್ಗ ಸೆಂಟ್ರಲ್ ಕ್ಲಬ್ ಪದಾಧಿಕಾರಿಗಳು ಹಾಗೂ ಅಧ್ಯಕ್ಷರ ಪರಿಶ್ರಮದಿಂದ ಕಾರ್ಯಕ್ರಮ ಯಶಸ್ವಿಗೊಂಡಿವೆ ಎಂದು ಹೇಳಿದರು.

ಕಾರ್ಯಕ್ರಮಕ್ಕೆ ಸಂಘಟನೆ ಹಾಗೂ ಬದ್ಧತೆ ಮುಖ್ಯ. ಸದಸ್ಯರ ಪ್ರಾಮಾಣಿಕ ಸಹಕಾರವು ಸಹ ಸಹಕಾರಿಯಾಗಿದೆ. ಆದ್ದರಿಂದ ಹೆಚ್ಚು ಹೆಚ್ಚು ಜನರು ರೋಟರಿ ಸಂಸ್ಥೆ ಸೇರಿಕೊಳ್ಳುವುದರ ಮುಖಾಂತರ ಸೇವೆ ಮಾಡುವ ಕೈಗಳನ್ನು ಬಲಪಡಿಸಬೇಕು ಮತ್ತು ನಾಯಕತ್ವ ಹಾಗೂ ಸಂಸ್ಕಾರದ ಗುಣಗಳನ್ನು ವೃದ್ಧಿಸಿಕೊಳ್ಳಬೇಕು ಎಂದರು.

ರೋಟರಿ ಕ್ಲಬ್ ಶಿವಮೊಗ್ಗ ಸೆಂಟ್ರಲ್ ಅಧ್ಯಕ್ಷ ಕಿರಣ್ ಕುಮಾರ್ ಜಿ ಮಾತನಾಡಿ, ಕ್ಲಬ್ ಮಾಜಿ ಅಧ್ಯಕ್ಷರು, ಪಿಡಿಜಿ ಹಾಗೂ ವಲಯದ ಸಹಾಯಕ ಗವರ್ನರ್‌ಗಳ ಸಹಕಾರ ಕಾರ್ಯಕ್ರಮದ ಯಶಸ್ಸಿಗೆ ಕಾರಣ ಎಂದು ತಿಳಿಸಿದರು.

ಜಿಲ್ಲಾ ಮಾಜಿ ಗವರ್ನರ್ ರಾಜಾರಾಮ್ ಭಟ್, ನಿಯೋಜಿತ ಜಿಲ್ಲಾ ಗವರ್ನರ್ ವಸಂತ್ ಹೋಬಳಿದಾರ್, ರಹಲಾ ಚೇರ್ಮನ್ ಚಂದ್ರಶೇಖರ್ ಮೆಂಡನ್, ವೈಸ್ ಚೇರ್ಮನ್ ಸಿಸಿ ಸಾವಿನ್, ವಲಯ ಹನ್ನೊಂದರ ಸಹಾಯಕ ಗವರ್ನರ್ ಸುರೇಶ್ ಎಚ್.ಎಂ., ಇವೆಂಟ್ ಚೇರ್ಮನ್ ರವಿ ಕೋಟೋಜಿ, ಜಿ.ಎನ್.ಪ್ರಕಾಶ್, ಈಶ್ವರ್, ಇವೆಂಟ್ ಕಾರ್ಯದರ್ಶಿ ರಮೇಶ್, ಮಾಜಿ ಸಹಾಯಕ ಗವರ್ನರ್ ಜಿ.ವಿಜಯಕುಮಾರ್ ಹಾಗೂ ಕ್ಲಬ್ಬಿನ ಸದಸ್ಯರು ಉಪಸ್ಥಿತರಿದ್ದರು.

ಮುಖ್ಯ ಪ್ರಧಾನ ಭಾಷಣಕಾರರಾಗಿ ಸಿಸಿ ಪಾವಟೇ, ಡಾ ಕೆ ಶ್ರೀಪತಿ ಹಲಗುಂದ, ಎನ್.ಜಿ.ಉಷಾ, ನಾಯಕತ್ವ ಸಾಮರಸ್ಯ ಹಾಗೂ ಸಂಘ ಸಂಸ್ಥೆಗಳ ಒಡನಾಟ ಅಭಿವೃದ್ಧಿ ಬಗ್ಗೆ ಸವಿಸ್ತಾರವಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಚಿಕ್ಕಮಗಳೂರು, ಹಾಸನ, ಉಡುಪಿ ಹಾಗು ಶಿವಮೊಗ್ಗದಿಂದ 450ಕ್ಕೂ ಹೆಚ್ಚು ಸದಸ್ಯರು ಪಾಲ್ಗೊಂಡಿದ್ದರು.

## ದೇಶದಲ್ಲಿ ಪ್ರಧಾನಿ ಬದಲಾಗ್ತಾರೆ: ಲಾಡ್

**ಬೆಳಗಾವಿ:** ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ಬದಲಾವಣೆಯಾಗುತ್ತಾರೆ ಎಂದು ಹೇಳಿಕೆ ನೀಡುತ್ತಿರುವ ಬಿಜೆಪಿ ನಾಯಕರಿಗೆ ಕೌಂಟರ್ ಕೊಟ್ಟಿರುವ ಕಾರ್ಮಿಕ ಸಚಿವ ಸಂತೋಷ್ ಲಾಡ್, ದೇಶದಲ್ಲಿ ಪ್ರಧಾನಿ ಬದಲಾಗ್ತಾರೆ ಎಂಬ ಮಾಹಿತಿ ಇದೆ ಎಂದು ಹೇಳಿದ್ದಾರೆ.

ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಸಚಿವ ಸಂತೋಷ್ ಲಾಡ್, ಪ್ರಧಾನಿ ಹುದ್ದೆಯಿಂದ ಮೋದಿ ಅವರನ್ನ ಕೆಳಗಿಳಿಸಿ ಬೇರೆಯವರನ್ನ ಪಿಎಂ ಮಾಡಿ. ನಿತಿನ್ ಗಡ್ಕರಿ ಅವರನ್ನೇ ಪಿಎಂ ಮಾಡಿ ಎಂದಿದ್ದಾರೆ. ಎನ್‌ಡಿಎ ಸರ್ಕಾರದಲ್ಲಿ ಪ್ರಧಾನಿ ನರೇಂದ್ರ

ಮೋದಿ ವಿರುದ್ಧ ಬಿಜೆಪಿ ಸಚಿವರು ಅಸಮಾಧಾನಗೊಂಡಿದ್ದಾರೆ. ಹಾಗಾಗಿ ಪ್ರಧಾನಿ ಮೋದಿ ಬದಲಾಗಬಹುದು. 'ಬಿಜೆಪಿ ನಾಯಕರು ಮೋದಿ ಸಾಧನೆ ಬಗ್ಗೆ ಮಾತ್ರ ಮಾತನಾಡುತ್ತಾರೆ. ಆದರೆ, ಯಾರೂ ಉಳಿದ ನಾಯಕರ ಸಾಧನೆ ಬಗ್ಗೆ ಮಾತನಾಡುತ್ತಿಲ್ಲ. ಕೇಂದ್ರದಲ್ಲಿ ಬಿಜೆಪಿಗೆ ಬಹುಮತ ಇಲ್ಲ. ಹಾಗಾಗಿ ಪ್ರಧಾನಿ ಮೋದಿ ಬದಲಾವಣೆ ಆಗಬಹುದು ಎಂಬ ಚರ್ಚೆ ಇದೆ ಎಂದು ಟಾಂಗ್ ಕೊಟ್ಟಿದ್ದಾರೆ.

## ಮದುವೆ ಆಗಿಲ್ಲವೆಂದು ಆತ್ಮಹತ್ಯೆ.!

**ಕೊಡಗು:** ಮದುವೆ ಆಗಲಿಲ್ಲ ಎಂದು ಮನನೊಂದು ಗುಂಡು ಹಾರಿಸಿಕೊಂಡು ವ್ಯಕ್ತಿ ಆತ್ಮಹತ್ಯೆಗೆ ಶರಣಾಗಿರುವ ಘಟನೆ ಕೊಡಗು ಜಿಲ್ಲೆಯ ವಿರಾಜಪೇಟೆ ತಾಲೂಕಿನ ಬೋಯಿಕೇರಿ ಗ್ರಾಮದಲ್ಲಿ ನಡೆದಿದೆ. ದಿಲೀಪ್ ಅಲಿಯಾಸ್ ಅನಿ (40) ಮೃತಪಟ್ಟ ವ್ಯಕ್ತಿ. ವಯಸ್ಸು 40 ವರ್ಷ ವಯಸ್ಸಾದರೂ ಇನ್ನೂ ಮದುವೆಯಾಗಿಲ್ಲ ಎಂದು ಮನನೊಂದು ದಿಲೀಪ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ

# ಅಕ್ಷರ ಜ್ಞಾನವನ್ನು ಪಡೆದು ಜಗತ್ತಿಗೆ ದಾರಿದೀಪವಾಗಿ: ತಹಸಿಲ್ದಾರ್ ಎಚ್.ಬಾಲಕೃಷ್ಣ



**ದೇವನಹಳ್ಳಿ:** ಶಿಕ್ಷಣದ ಮಹತ್ವವನ್ನು ಸಾರುವ ಮೂಲಕ ಎಲ್ಲರೂ ಶಿಕ್ಷಿತರಾಗಿ ಅಕ್ಷರ ಜ್ಞಾನವನ್ನು ಪಡೆದು ಜಗತ್ತಿಗೆ ದಾರಿದೀಪವಾಗಿ. ಸೇವಾ ಲಾಲರು ತಮ್ಮ ತತ್ವಗಳ ಮೂಲಕ ಲೋಕಕ್ಕೆ ಜ್ಞಾನದ ಮೂಲಕ ಮುಕ್ತಿ ಮಾರ್ಗ ತೋರಿಸಿದರು. ಸರ್ವರನ್ನು ಒಳಗೊಂಡ ಸಮ ಸಮಾಜದ ನಿರ್ಮಾಣ ಹಾಗೂ ಸರ್ವರಲ್ಲೂ ಸೋದರತೆಯ ಭಾವನೆಯನ್ನು ಮೂಡಲು ಪ್ರೇರೇಪಿಸಿದರು ಎಂದು ದೇವನಹಳ್ಳಿ ತಾಲೂಕು ತಹಸಿಲ್ದಾರ್ ಎಚ್ .ಬಾಲಕೃಷ್ಣ ತಿಳಿಸಿದರು.

ಪಟ್ಟಣದ ಆಡಳಿತ ಸೌಧದ ಸಭಾಂಗಣದಲ್ಲಿ ಶ್ರೀ ಸದ್ಗುರು ಸೇವಾಲಾಲ್ ಜಿಲ್ಲಾ ಬಂಜಾರ ನೌಕರರ ಸಾಂಸ್ಕೃತಿಕ ಕ್ಷೇಮಾಭಿವೃದ್ಧಿ ಸಂಘದ ಸಹಯೋಗದಲ್ಲಿ ನಡೆದ ಶ್ರೀ ಸಂತ ಸೇವಾಲಾಲ್ ಮಹಾರಾಜರ 286 ನೇ ಜಯಂತೋತ್ಸವವದಲ್ಲಿ ಮಾತನಾಡಿದರು. ಸೇವಾಲಾಲ್ ಅವರು ದನಗಾಯಿ ಗೋಪಾಲಕನಾಗಿ ತಮ್ಮ ಜೀವನದ ಅನುಭವವನ್ನು ತಮ್ಮ ತತ್ವದ ಮೂಲಕ ಜನರಲ್ಲಿನ ಅಜ್ಞಾನವನ್ನು ದೂರ ಮಾಡಿದರು.

ಸತ್ಯ, ಅಹಿಂಸೆ, ದಯೆ, ಕರುಣೆಗಳನ್ನು ಪಾಲಿಸುವ ಮೂಲಕ ಧರ್ಮಾತೀತರಾಗಿ ಎಂದು ಸಾರಿದರು. ಇದಲ್ಲದೆ ಮಾನವ ಜನ್ಮ ಪವಿತ್ರವಾದದ್ದು ಇದನ್ನು ಹಾಳು ಮಾಡಿಕೊಳ್ಳಬೇಡಿ, ವ್ಯಸನಗಳಿಂದ ದೂರವಿರಿ (ದಾರು, ಗಾಂಜಾ ಮತ್ ಪೀವೋ) ಅರಿಷಡ್ ವರ್ಗಗಳನ್ನು ಸುಟ್ಟು ಹಾಕಿ (ಕಾಮ ಕ್ರೋಧೇರಿ ಧೂಣಿ ಬಾಳೋ), ಪ್ರಾಮಾಣಿಕರಾಗಿ ಜೀವಿಸಿ, ಕಷ್ಟದಲ್ಲಿ ಇರುವವರಿಗೆ ಸಹಾಯ ಮಾಡಿರಿ ಎಂದು ತಿಳಿಸಿದರು.

ನಿವೃತ್ತರಾದ ಪಶುವೈದ್ಯ ಇಲಾಖೆಯ ಅಧಿಕಾರಿಮತ್ತು ಶ್ರೀ ಸದ್ಗುರು ಸೇವಾಲಾಲ್ ಜಿಲ್ಲಾ ಬಂಜಾರ ನೌಕರರ ಸಾಂಸ್ಕೃತಿಕ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾಧ್ಯಕ್ಷರು ಡಾ.ಶಿವಾಜಿ ನಾಯಕ್ ಮಾತನಾಡಿ, ಈ ನಮ್ಮ ದೇಶದ ನೆಲ ಸಾಂಸ್ಕೃತಿಕ ವೈವಿಧ್ಯತೆಯಲ್ಲಿ ಏಕತೆಯನ್ನು ಹೊಂದಿದ್ದು ಈ ವೈವಿಧ್ಯತಾ ಸಂಸ್ಕೃತಿಗೆ ಹಲವಾರು ಸಾಂಸ್ಕೃತಿಕ ರಾಯಭಾರಿಗಳು ಕಾರಣೀಭೂತರು,

ಭಾರತ ನೆಲದಲ್ಲಿ ಹಲವು ಸಂತರು, ಧರ್ಮ ಸುಧಾರಕರು, ತತ್ವಜ್ಞಾನಿಗಳು ಜನ್ಮ ತಾಳಿ ಜನರಲ್ಲಿನ ಮೂಢನಂಭಿಕೆಯನ್ನು ಹೋಗಲಾಡಿಸಿದ್ದಾರೆ. ಇಂತಹ ಮಹಾನ್ ಸಂತರುಗಳಲ್ಲಿ ಲಂಬಾಣಿ ಸಮುದಾಯದ ಆರಾಧ್ಯ ದೈವ ಸದ್ಗುರು ಸಂತ ಸೇವಾಲಾಲ್ ಮಹಾರಾಜರು ಒಬ್ಬರು ಎಂದರು.

ಇದೇ ವೇಳೆ ಜನವರಿ 31 ರಂದು ನಿವೃತ್ತರಾದ ಪಶುವೈದ್ಯ ಇಲಾಖೆಯ ಅಧಿಕಾರಿ ಡಾ. ಶಿವಾಜಿ ನಾಯಕ್, ಹಾಗೂ ಶಿಕ್ಷಕಿ ನಾಗಿಬಾಯಿಯವರನ್ನ ಬಂಜಾರ ಸಂಘದಿಂದ ಸಂತಸೇವಾಲಾಲರ ಜಯಂತಿ ವೇಳೆ ಸನ್ಮಾನಿಸಲಾಯಿತು. ಈ ಕಾರ್ಯಕ್ರಮದಲ್ಲಿ ಬಂಜಾರ ಸಂಘದ ಕಾರ್ಯದರ್ಶಿ ರವಿನಾಯಕ್, ಸರ್ವೆಯರ್ ಜಿ.ಗಿರೀಶ್, ಖಜಾಂಚಿ ಪ್ರೇಮಸಿಂಗ್‌ರಾಥೋಡ್, ನಿರ್ದೇಶಕರುಗಳಾದ ಜಯಾನಾಯಕ್, ಜಿ.ಪಂ. ಪಶುವೈದ್ಯ ನಿವೃತ್ತ ಅಧಿಕಾರಿ ಶಿವಕುಮಾರ್, ಮಂಜುನಾಯಕ್, ರಮೇಶನಾಯಕ್, ಸಂಚಾರ ವಿಭಾಗದ ಎ.ಎಸ್ಐ ಗಿರೀಶ್ ನಾಯಕ್,ನಾಗಪ್ಪ, ಭಾರತಿ, ಶೋಭಾಬಾಯಿ ಗೀತಾಬಾಯಿ, ನಾಗೀಬಾಯಿ, ರಾಧ , ಪುರಸಭಾ ಮ್ಯಾನೇಜರ್ ಸರಸ್ವತಿ , ಶಿಕ್ಷಕ ರಮೇಶ್, ಮಂಜುನಾಥ್, ಇಂಜಿನಿಯರ್ ಬೀರೇಶ್, ರೇಷ್ಮೇ ಇಲಾಖೆಯ ರಾಜೇಶ್ , ನಾಗೇಶ್, ಮುಂತಾದವರಿದ್ದರು.

## ಕಳ್ಳ–ಪೊಲೀಸ್ ಆಟ: ಅಸಲಿ ಗನ್‌ನಿಂದಲೇ ಶೂಟ್

**ಮಂಡ್ಯ:** ಹದಿಮೂರು ವರ್ಷದ ಬಾಲಕನೊಬ್ಬ ಆಟವಾಡುತ್ತಿದ್ದಾಗ ಆಕಸ್ಮಿಕವಾಗಿ ತನ್ನ ಮೂರು ವರ್ಷದ ತಮ್ಮನ ಮೇಲೆ ಕೋವಿಯಿಂದ ಗುಂಡು ಹಾರಿಸಿದ ಘಟನೆ ಜಿಲ್ಲೆಯ ನಾಗಮಂಗಲ ತಾಲೂಕಿನಲ್ಲಿ ಭಾನುವಾರ ನಡೆದಿದೆ.

ಗುಂಡು ತಗುಲಿ ತೀವ್ರ ರಕ್ತಸ್ರಾವವಾಗಿ ಬಾಲಕ ಮೃತಪಟ್ಟಿದ್ದಾನೆ. ನಾಗಮಂಗಲದ ದೊಂದೇಮಾದಿಹಳ್ಳಿಯಲ್ಲಿ ಕಾಂಗ್ರೆಸ್ ಮುಖಂಡ ನರಸಿಂಹಮೂರ್ತಿ ಎಂಬವರಿಗೆ ಸೇರಿದ ಕೋಳಿ ಫಾರಂನಲ್ಲಿ ಈ ಘಟನೆ ನಡೆದಿದ್ದು, ಮಕ್ಕಳಿಬ್ಬರು ಕಳ್ಳ–ಪೊಲೀಸ್ ಆಟ ಆಡುತ್ತಿದ್ದಾಗ ಬಾಲಕ ತಿಳಿಯದೆ ಅಸಲಿ ಗನ್‌ನಿಂದಲೇ ಶೂಟ್ ಮಾಡಿದ್ದಾನೆ.

ಕೋಳಿ ಫಾರಂನಲ್ಲಿ ಭದ್ರತೆಗಾಗಿ ಒಂದು ಅಸಲಿ ಕೋವಿ (ಗನ್) ಇಡಲಾಗಿತ್ತು. ಅದು ಸಜೀವ ಗುಂಡುಗಳಿಂದ ಲೋಡೆಡ್ ಆಗಿತ್ತು.

ಪಶ್ಚಿಮ ಬಂಗಾಳದ ಶಶಾಂಕ್ ಹಾಗೂ ಲಿಪಿಕಾ ದಂಪತಿ ಇಲ್ಲಿ ಕೂಲಿ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದಾರೆ. ಇವರ ಇಬ್ಬರು ಗಂಡು ಮಕ್ಕಳು ಆಟವಾಡುತ್ತಿದ್ದರು. ಈ ವೇಳೆ 13 ವರ್ಷದ ಬಾಲಕ (ಅಣ್ಣ) ಮೇಲಿದ್ದ ಗನ್ ತೆಗೆದುಕೊಂಡು ಕಳ್ಳ–ಪೊಲೀಸ್ ಆಟ ಆಡೋಣ ಎನ್ನುತ್ತಲೇ ತನ್ನ ತಮ್ಮನ ಮೇಲೆ ಶೂಟ್ ಮಾಡಿದ್ದಾನೆ. ಆಕಸ್ಮಿಕ ಫೈರಿಂಗ್ ಮಗುವಿನ ಹೊಟ್ಟೆ ಸೀಳಿದೆ. ಈ ವೇಳೆ ತಾಯಿ ಲಿಪಿಕಾ ಅವರಿಗೂ ಗಾಯವಾಗಿದೆ.

ಗುಂಡು ಮಗುವಿನ ಹೊಟ್ಟೆ ಸೀಳಿದ್ದರಿಂದ ಕರುಳು ಹೊರಬಂದಿತ್ತು. ಆದರೂ ಉಸಿರಾಡುತ್ತಿದ್ದ ಮಗುವಿನ ಕರುಳುಗಳನ್ನು ಹೊಟ್ಟೆಯ ಮೇಲೆ ಟವೆಲ್‌ನಿಂದ ಕಟ್ಟಿಕೊಂಡು ನಾಗಮಂಗಲ ಆಸ್ಪತ್ರೆಗೆ ದಾಖಲಿಸಲಾಯಿತು. ಆದರೆ ತೀವ್ರ ರಕ್ತಸ್ರಾವವಾಗಿದ್ದರಿಂದ ಮಗು ಚಿಕಿತ್ಸೆ ಫಲಿಸದೇ ಆಸ್ಪತ್ರೆಯಲ್ಲಿ ಸಾವನ್ನಪ್ಪಿದೆ. ಘಟನಾ ಸ್ಥಳಕ್ಕೆ ಮಂಡ್ಯ ಎಸ್‌ಪಿ ಮಲ್ಲಿಕಾರ್ಜುನ ಬಾಲದಂಡಿ ಭೇಟಿ ನೀಡಿ ಪರಿಶೀಲಿಸಿದರು. ನಾಗಮಂಗಲ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಗನ್ ವಶಕ್ಕೆ ಪಡೆದು ತನಿಖೆ ನಡೆಸಲಾಗುತ್ತಿದೆ.

## ಫಾಸ್ಟ್‌ಟ್ಯಾಗ್ ಹೊಸ ನಿಯಮ ಜಾರಿ

**ಬೆಂಗಳೂರು:** ಹೆದ್ದಾರಿಯಲ್ಲಿ ಟೋಲ್ ಸಂಗ್ರಹವನ್ನು ಹೆಚ್ಚು ಪಾರದರ್ಶಕ ಮತ್ತು ಸುಗಮವಾಗಿಸುವುದು ಇಂದಿನಿಂದ ಹೊಸ ನಿಯಮ ಜಾರಿಗೆ ಬಂದಿದೆ. ಟೋಲ್ ಪ್ಲಾಜಾದಲ್ಲಿ ವಾಹನಗಳ ದಟ್ಟಣೆ ತಗ್ಗಿಸಲು ಕೆಲ ಬದಲಾವಣೆ ತರಲಾಗಿದೆ. ಪ್ರಸ್ತುತ ಎಲ್ಲಾ ವಾಹನ ಮಾಲೀಕರು ತಮ್ಮ ಫಾಸ್ಟ್ ಟ್ಯಾಗ್ ಅನ್ನು ಸರಿಯಾಗಿ ನಿರ್ವಹಿಸುವುದು ಮುಖ್ಯ, ಇಲ್ಲದಿದ್ದರೆ ಹೆಚ್ಚುವರಿ ಶುಲ್ಕಗಳನ್ನು ಪಾವತಿಸಬೇಕಾಗಬಹುದು.

ಕಡಿಮೆ ಬ್ಯಾಲೆನ್ಸ್ ಪಾವತಿ ವಿಳಂಬ ಅಥವಾ ಫಾಸ್ಟ್ ಟ್ಯಾಗ್ ಅನ್ನು ಕಪ್ಪುಪಟ್ಟಿ ಅಥವಾ ಬ್ಯಾಕ್ ಲಿಸ್ಟ್‌ಗೆ ಸೇರಿಸಿದರೆ ಹೆಚ್ಚುವರಿ ದಂಡವನ್ನು ವಿಧಿಸಲಾಗುತ್ತದೆ. ಫಾಸ್ಟ್‌ಟ್ಯಾಗ್‌ನಲ್ಲಿನ ಸಮಸ್ಯೆಗಳಿಂದಾಗಿ ಟೋಲ್ ಪ್ಲಾಜಾಗಳಲ್ಲಿ ವಾಹನಗಳ ದೀರ್ಘ ಸರತಿ ಸಾಲುಗಳನ್ನು ಕಡಿಮೆ ಮಾಡುವುದು ಇದರ ಉದ್ದೇಶವಾಗಿದೆ.

ಹೊಸ ನಿಯಮ ಏನು?:ನಿಮ್ಮ ವಾಹನದ ಫಾಸ್ಟ್ ಟ್ಯಾಗ್‌ನಲ್ಲಿ ಹಣ ಇರಬೇಕು, ಇಲ್ಲದಿದ್ದರೆ ಟೋಲ್ ಪ್ರವೇಶಕ್ಕೆ ಒಂದು ಗಂಟೆ ಮೊದಲು ಹಣ ಜಮೆ ಮಾಡಿರಬೇಕು. ಟೋಲ್ ಹತ್ತಿರ ಬಂದ ಮೇಲೆ ರಿಚಾರ್ಜ್ ಮಾಡಿದರೆ ಸಮಸ್ಯೆ ಆಗಲಿದೆ. ಟೋಲ್ ದಾಟುವ 60 ನಿಮಿಷ ಮೊದಲು ಹಾಗೂ ದಾಟಿದ 10 ನಿಮಿಷಗಳ ಕಾಲ ಫಾಸ್ಟ್ ಟ್ಯಾಗ್ ಆಕ್ಟಿವ್ ಇರಬೇಕು. ಒಂದು ವೇಳೆ ಈ ನಿಯಮ ಪಾಲನೆ ಮಾಡದಿದ್ದರೆ, ಟೋಲ್ ಸಿಸ್ಟಮ್ ನಲ್ಲಿ ಎರರ್ ಕೋಡ್ 176 ಎಂದು ತೋರಿಸಲಾಗುತ್ತದೆ. ಈ ವೇಳೆ ಪ್ರಯಾಣಿಕರು ದುಪ್ಪಟ್ಟು ಹಣ ಪಾವತಿ ಮಾಡಬೇಕಾಗುತ್ತದೆ ಕೆವೈಸಿ ಮಾಡಿಲ್ಲ ಎಂದಾದರೆ ನಿಮ್ಮ ಫಾಸ್ಟ್ ಟ್ಯಾಗ್ ಅನ್ನು ಕಪ್ಪುಪಟ್ಟಿಗೆ ಸೇರಿಸಲಾಗುತ್ತದೆ. ಅಂತಹ ಟ್ಯಾಗ್‌ನೊಂದಿಗೆ ಬರುವ ವಾಹನಕ್ಕೆ ದುಪ್ಪಟ್ಟು ಸುಂಕು ವಿಧಿಸಲಾಗುತ್ತದೆ.

ಒಂದು ವೇಳೆ ವಾಹನ ಟೋಲ್ ಗೇಟ್ ದಾಟಿದ 15 ನಿಮಿಷಗಳ ನಂತರ ಫಾಸ್ಟ್ ಟ್ಯಾಗ್ ಖಾತೆಯಿಂದ ಹಣ ಕಡಿತವಾದರೆ ಅದಕ್ಕೆ ವಾಹನ ಸವಾರರು ಹೆಚ್ಚಿನ ಶುಲ್ಕವನ್ನು ವಿಧಿಸಬೇಕಾಗುತ್ತದೆ.ಇನ್ನು ಟೋಲ್‌ಗೇಟ್‌ನಲ್ಲಿ ಹಣ ಕಡಿತ ವಿಳಂಬವಾದರೆ ಅದಕ್ಕೆ ಟೋಲ್ ಆಪರೇಟರ್ ಅನ್ನೇ ಹೊಣೆಯನ್ನಾಗಿ ಮಾಡಲಾಗುತ್ತದೆ. ತಪ್ಪು ಶುಲ್ಕ ಮತ್ತು ಹೆಚ್ಚುವರಿ ಹಣ ಕಡಿತಕ್ಕೆ ಸಂಬಂಧಿಸಿ ವಾಹನ ಬಳಕೆದಾರರು 15 ದಿನಗಳ ಬಳಿಕವಷ್ಟೇ ದೂರು ಸಲ್ಲಿಸಬಹುದು.

## ವಿದೇಶಾಂಗ ನೀತಿ ಬದಲಿಸುವಂತೆ ಆಗ್ರಹ



ಬೆಂಗಳೂರು: ಅಮೇರಿಕವು ವಲಸಿಗ ಭಾರತೀಯರನ್ನು ಕಳಿಸುವ ಸಂದರ್ಭದಲ್ಲಿ ಅಮಾನವೀಯವಾಗಿ ವರ್ತಿಸಿರುವ ಆರೋಪದ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ಇನ್ನಾದರೂ ಅಮೇರಿಕದ ಜೊತೆಗಿನ ವಿದೇಶಾಂಗ ನೀತಿ ಬದಲಾಯಿಸುವತ್ತ ಚಿತ್ತ ಹರಿಸಲಿ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಆಗ್ರಹಿಸಿದ್ದಾರೆ.

ಈ ಸಂಬಂಧ ಸಾಮಾಜಿಕ ಮಾಧ್ಯಮ ದಲ್ಲಿ ಪೋಸ್ಟ್ ಮಾಡಿರುವ ಅವರು, ಸ್ವಯಂ ಘೋಷಿತ ವಿಶ್ವಗುರು ಮೋದಿಯವರು ಅಮೆರಿಕ ಪ್ರವಾಸದಲ್ಲಿದ್ದಾಗಲೇ 116 ವಲಸಿಗ ಭಾರತೀಯರನ್ನು ಅಮೆರಿಕ ಕೋಳ ಹಾಕಿ ಭಾರತಕ್ಕೆ ಕಳಿಸಿದೆ. ಇದಕ್ಕಿಂತ ನಾಚಿಕೆಗೇಡಿನ ಸಂಗತಿ ಇನ್ನಾವುದಿದೆ? ಎಂದು ಪ್ರಶ್ನಿಸಿದ್ದಾರೆ.

ಕಳೆದ ವಾರ 104 ವಲಸಿಗ ಭಾರತೀಯರನ್ನು ಅಮೆರಿಕವು ಕೋಳ– ಸರಪಳಿ ಹಾಕಿ ಕಳಿಸುವ ಮೂಲಕ ಅಮಾನವೀಯವಾಗಿ ವರ್ತಿಸಿತ್ತು. ಈಗ ಮೋದಿಯವರು ಅಮೆರಿಕ ಪ್ರವಾಸದಲ್ಲಿದ್ದ ಸಂದರ್ಭದಲ್ಲೇ ಮತ್ತದೇ ಧಾರ್ಷ್ಟ್ಯ ತೋರಿದೆ. ಇಷ್ಟಾದರೂ ಮೋದಿ ಬಾಬಾ ಮೌನಕ್ಕೆ ಶರಣಾಗಿದ್ದಾರೆ ಎಂದು ಟೀಕಿಸಿದ್ದಾರೆ.

ಮೋದಿಯವರು ಅಮೆರಿಕದಲ್ಲಿರುವಾಗಲೇ ಆ ದೇಶ ಭಾರತೀಯ ನಾಗರಿಕರನ್ನು ತುಚ್ಛವಾಗಿ ನಡೆಸಿಕೊಂಡಿದೆ. ಇದರರ್ಥ ಮೋದಿಯವರನ್ನು ಅಮೆರಿಕ ಲೆಕ್ಕಕ್ಕೇ ಇಟ್ಟಿಲ್ಲ ಎಂದು ಭಾಸವಾಗುತ್ತಿದೆ.

ಮೋದಿಯವರು ಮನೆಯಲ್ಲಿ ಹುಲಿ, ಬೀದಿಯಲ್ಲಿ ಇಲಿಯಂತಾದರೆ ಏನು ಪ್ರಯೋಜನ? ಎಂದು ಪ್ರಶ್ನಿಸಿರುವ ಅವರು, ಸ್ವಾಭಿಮಾನ ಬಿಟ್ಟು ವರ್ತಿಸಿದರೆ ಅಮೆರಿಕ ಮೋದಿಯವರನ್ನು ಹಾಕು ಮಣೆ–ನೂಕು ಮಣೆ–ಯಾಕೆ ಮಣೆ? ಎಂಬಂತೆ ಸತ್ಕಾರ ಮಾಡುತ್ತದೆ ಎಂದು ವಾಗ್ದಾಳಿ ನಡೆಸಿದ್ದಾರೆ.

# ಚಾಮರಾಜನಗರ ಜಿಲ್ಲೆಯಲ್ಲೊಂದು ಲವ್, ಸೆಕ್ಸ್ ದೋಖಾ!

## ಔಷದ ನಿಯಂತ್ರಕರ ತಪಾಷಣೆ ಕಾರ್ಯ, ಎಲ್ಲಿಗೆ ಬಂತು!?

**ವರದಿ: ರಾಮಸಮುದ್ರ ಎಸ್.ವೀರಭದ್ರಸ್ವಾಮಿ**

**ಚಾಮರಾಜನಗರ:** ಗಡಿ ನಾಡು ಚಾಮರಾಜನಗರ ಜಿಲ್ಲೆಯಲ್ಲೊಂದು ಲವ್ ಸೆಕ್ಸ್ ದೋಖಾ ಪ್ರಕರಣ ನಡೆದಿದ್ದು ಇದೀಗ ಪ್ರೇಯಸಿ ಬದುಕು ಬೀದಿಗೆ ಬಿದ್ದಿರುವ ಘಟನೆ ರಾಮಾಪುರ ವಲಯದಲ್ಲಿ ನಡೆದಿದೆ.. ಮಿಗಿಲಾಗಿ ಔಷದ ನಿಯಂತ್ರಕರ ಸಮರ್ಪಕ ತಪಾಸಣೆ ಇಲ್ಲದೆ ಇರೊ ಆಗಂತಕಾರಿ ವಿಚಾರನ್ನೂ ಕೂಲಂಕುಶವಾಗಿ ಜಿಲ್ಲಾಡಳಿತ ಅರಿಯಬೇಕಾಗಿದೆ.

2021ರಲ್ಲಿ ನರ್ಸಿಂಗ್ ಕೋರ್ಸ್ ಮಾಡುವ ವೇಳೆ ಜಾನ್ ಪ್ರೆಸಿಲ್ಲಾ ಎನ್ನುವ ಹುಡುಗಿಗೆ ಕ್ಲಿಂಟನ್ ಎಂಬಾತನ ಪರಿಚಯವಾಗಿತ್ತು. ಇಬ್ಬರೂ ಮೇಡ್ ಫಾರ್ ಈಚ್ ಅದರ್ಸ್ ಎಂಬಂತೆ ಸುತ್ತಾಟ ಕೂಡ ಮಾಡಿದ್ದರು. ಇವರಿಬ್ಬರ ಪ್ರೀತಿ ಪ್ರೇಮ ಪ್ರಯಣದ ವಿಚಾರ ಇಬ್ಬರ ಮನೆಯವರಿಗೂ ಗೊತ್ತಾಗಿತ್ತು. ವಿಚಾರ ತಿಳಿದ ಪ್ರೇಯಸಿ ಜಾನ್ ಪ್ರೆಸಿಲ್ಲಾಳ ಕುಟುಂಬಸ್ಥರು ಕ್ಲಿಂಟನ್ ನ ಮನೆಯವರಿಗೆ ವಿಚಾರ ತಿಳಿಸಿದ್ದರು. ಆದರೆ, ಕ್ಲಿಂಟನ್ ಗೆ ಸಹೋದರಿ ಇದ್ದ ಕಾರಣ ಆಕೆಯ ವಿವಾಹ ಆಗುವವರೆಗೂ ಕ್ಲಿಂಟನ್ ಮದುವಗೆ ಕುಟುಂಬಸ್ಥರು ನಿರಾಕರಿಸಿದ್ದರು.

ಕ್ಲಿಂಟನ್ ಕುಟುಂಬಸ್ಥರು ವಿವಾಹಕ್ಕೆ ನಿರಾಕರಿಸಿದ್ದ ಕಾರಣ 2022 ರಲ್ಲಿ ತಮಿಳುನಾಡು ಮೂಲದ ಸ್ಟೀಫನ್ ರಾಜ್ ಎಂಬಾತನೊಂದಿಗೆ ಪ್ರೆಸಿಲ್ಲಾಳ ವಿವಾಹ ನಡೆದಿತ್ತು. ವಿವಾಹದ ಬಳಿಕ ಮಾಜಿ ಪ್ರಿಯಕರ ಕ್ಲಿಂಟನ್, ಪ್ರೆಸಿಲ್ಲಾಳ ಪ್ರೈವೇಟ್ ಫೋಟೊ ಹಿಡಿದು ಬ್ಲಾಕ್ ಮೇಲ್ ಮಾಡಲು ಆರಂಭಿಸಿದ್ದ. ಪತಿ ಸ್ಟೀಫನ್ ರಾಜ್ ಗೂ ಪ್ರೆಸಿಲ್ಲಾಳ ಫೋಟೊ ಕಳುಹಿಸಿ ಟಾರ್ಚರ್ ಕೊಡಲು ಶುರು ಮಾಡಿದ್ದ. ಪತ್ನಿಯ ಲವ್ವಿ ಡವ್ವಿ ವಿಚಾರ ತಿಳಿದು ಸ್ಟೀಫನ್ ರಾಜ್ ಆಕೆಯನ್ನು ಮನೆಯಿಂದ ಹೊರಹಾಕಿದ್ದ. ಈ ವೇಳೆ ಪತಿ ಸ್ಟೀಫನ್ ಗೆ ವಿಚ್ಛೇದನ ನೀಡಿ ಬಾ ನಾನು ಮದ್ವೆ ಆಗುತ್ತೇನೆ ಎಂದು ಕ್ಲಿಂಟನ್, ಪ್ರೆಸಿಲ್ಲಾಗೆ ಹೇಳಿದ್ದ ಎನ್ನಲಾಗಿದೆ.

ವಿಚ್ಛೇದನ ಬಳಿಕ ಮದುವೆ ಆಗದೆ ಪ್ರೆಸಿಲ್ಲಾ ಜೊತೆ ಕ್ಲಿಂಟನ್ 10 ತಿಂಗಳ ಸಂಸಾರ ಕೂಡ ನಡೆಸಿದ್ದ. ಪ್ರೆಸಿಲ್ಲಾ ಜೊತೆ ಲೈಂಗಿಕ ಸಂಪರ್ಕ ಬೆಳೆಸಿ 3 ಬಾರಿ ಅಬಾರ್ಷನ್ ಕೂಡ ಮಾಡಿಸಿದ್ದ ಎನ್ನಲಾಗಿದೆ. ಇದೆ ಫೆಬ್ರವರಿ 12 ರಂದು ಕೊಳ್ಳೇಗಾಲದಲ್ಲಿ ಕ್ಲಿಂಟನ್ ಹಾಗೂ ಪ್ರೆಸಿಲ್ಲಾಗೆ ರಿಜಿಸ್ಟರ್ ಮ್ಯಾರೇಜ್ ಫಿಕ್ಸ್ ಆಗಿತ್ತು. ಆದರೆ, ರಿಜಿಸ್ಟರ್ ಮ್ಯಾರೇಜ್ ಗೆ ಬಾರದೆ ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡು ಕ್ಲಿಂಟನ್ ಎಸ್ಕೇಪ್ ಆಗಿದ್ದಾನೆ. ಪರಾರಿಯಾದ ಕ್ಲಿಂಟನ್ ನ ಹುಡುಕಿಕೊಡಿ ಎಂದು ನೊಂದ ಪ್ರಿಯತಮೆಯ ಕಣ್ಣೀರಿಟ್ಟಿದ್ದಾಳೆ ಎಂದು ತಿಳಿದುಬಂದಿದೆ.

ಪ್ರೀತ್ಸೆ ಪ್ರೀತ್ಸೆ ಅಂತ ಹಿಂದೆ ಬಿದ್ದು ಪ್ರಿಯತಮೆಯ ಬಾಳಲ್ಲಿ ನರಕ ಮಾಡಿ ಪ್ರೀತಿ ಪ್ರೇಮಾ ಅಂತ ಹೇಳಿ ಮೂರು ಬಾರಿ ಪ್ರಿಯತಮೆಗೆ ಅಬಾರ್ಷನ್ ಕೂಡ ಮಾಡಿಸಿದ್ದು ಗರ್ಭಪಾತ ಮಾಡಿದ ವೈದ್ಯರ ಪ್ರಕ್ರಿಯೆಯೊ ಅಥವಾ ಅನದಿಕೃತವಾಗಿ ಗರ್ಭಪತದ ಮಾತ್ರೆಗಳನ್ನ ಕಾಟಾಚಾರಕ್ಕೆ ಮಾರಾಟ ಮಾಡಿದರ ಪರಿಣಾಮ ಈ ವಿಲಕ್ಷಣ ಘಟನೆ ನಡೆದಿದಿಯೆ ಎಂಬುದನ್ನ ಜಿಲ್ಲಾಡಳಿತ ಗಂಬೀರವಾಗಿ ಪರಿಗಣಿಸಬೇಕಿದೆ.

ಮಂಡ್ಯದ ಕೆಲವೆಡೆ ಭ್ರೂಣ ಹತ್ಯೆ ಪ್ರಕರಣ ಕಂಡುಬಂದು ಗಂಭೀರವಾಗಿ ಇಲಾಖೆ ಕ್ರಮಕೈಗೊಂಡಿದ್ದಾದರೂ ಗಡಿಜಿಲ್ಲೆ ಚಾಮರಾಜನಗರದಲ್ಲಿ ಎಗ್ಗಿಲ್ಲದೆ ವೈದ್ಯರ ಸಲಹೆ ಇಲ್ದೆ ಮಾತ್ರೆಗಳು ಸಿಗುತ್ತಿದಿಯೊ ಔಷದ ನಿಯಂತ್ರಕರು ತಮ್ಮ ಕರ್ತವ್ಯ ಮರೆತು ಇರುವ ಬೇಜವಬ್ದಾರಿತನವನ್ನೂ ಇಲ್ಲಿ ತೋರಿಸುತ್ತಿದೆ ಎಂದರೆ ತಪ್ಪಾಗಲಾರದು.

# ಸಂತ ಸೇವಾಲಾಲ್ ಜಯಂತಿ ಆಚರಣೆ



**ಕುಕನೂರು:** ಬಂಜಾರ ಸಮುದಾಯದ ಧರ್ಮ ಗುರು ಸಂತ ಶ್ರೀ ಸೇವಾಲಾಲ್ ಮಹಾರಾಜ್ ಅವರ 286 ನೇ ಜಯಂತಿಯನ್ನು ತಹಸೀಲ್ದಾರ್ ಕಚೇರಿಯಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಜಯಂತಿ ಆಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಉಪ ತಹಸೀಲ್ದಾರ್ ಮುರಳೀಧರ ಕುಲಕರ್ಣಿ ಅವರು, ಸಂತ ಶ್ರೀ ಸೇವಾಲಾಲ್ ಅವರು ನಾಡಿನ ಉದ್ದಗಲಕ್ಕೂ ಸಂಚರಿಸಿ ಧರ್ಮ ಬೋಧನೆ ಮೂಲಕ ಬಂಜಾರ ಸಮಾಜದ ಉದ್ದಾರಕ್ಕೆ ಕಾರಣರಾದರು. ಅಂತಹ ಮಹನೀಯ ಸಂತರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು. ಜಯಂತಿ ಪ್ರಯುಕ್ತ ಬಂಜಾರ ಸಮುದಾಯದ ಪ್ರಮುಖರಿಂದ ಸೇವಾಲಾಲ್ ವೃತ್ತದಲ್ಲಿ ವಿಶೇಷ ಪೂಜೆ, ಹವನ ಮಾಡಿ ಸಂತ ಶ್ರೀ ಸೇವಾಲಾಲ್ ಮಹಾರಾಜ್ ಅವರ ಸ್ಮರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಉಪ ತಹಸೀಲ್ದಾರ್ ಮುರಳೀಧರ ಕುಲಕರ್ಣಿ, ಶಿರಸ್ತೆದಾರ್ ಮುಸ್ತಫಾ, ಗೋರ ಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ಸುರೇಶ್ ಬಳೂಟಗಿ, ಗ್ರಾಮ ಪಂಚಾಯತ್ ಸದಸ್ಯ ಯಮನೂರಪ್ಪ ಕಟ್ಟಿಮನಿ, ಬಂಜಾರ ಸಮಾಜದ ಪ್ರಮುಖರಾದ ದೇವೇಂದ್ರಪ್ಪ ರಾಠೋಡ್, ಹಂಪಣ್ಣ ನಾಯಕ್, ಬಸವಂತಪ್ಪ ಕಟ್ಟಿಮನಿ, ಯಲ್ಲಪ್ಪ ಕಾರಭಾರಿ, ಯಮನೂರಪ್ಪ ಬಾನಾಪುರ, ಪರಸಪ್ಪ ಕಾರಭಾರಿ, ವಿಶ್ವನಾಥ್ ಕುಣಿಕೇರಿ, ಯಮನೂರಪ್ಪ ಕಾರಭಾರಿ, ಕಕ್ಕಿಹಳ್ಳಿ ತಾಂಡಾ ಭಜನಾ ಮಂಡಳಿಯವರು, ಇತರರು ಉಪಸ್ಥಿತರಿದ್ದರು.

# ರಜತ ಮಹೋತ್ಸವ, ಗಣ್ಯರಿಗೆ ಗೌರವ ಪ್ರಶಸ್ತಿ–ಸನ್ಮಾನ

**ಬೆಂಗಳೂರು:** ಬನಶಂಕರಿಯ ಶ್ರೀ ದೇವಗಿರಿ ಶ್ರೀ ವೆಂಕಟರಮಣನ ಸನ್ನಿಧಿಯಲ್ಲಿ ಫೆಬ್ರವರಿ 12ರಂದು ತಂಬಿಹಳ್ಳಿ ಮಾಧವತೀರ್ಥ ಮಠದ ಪರಮಪೂಜ್ಯ ಶ್ರೀ 108 ಶ್ರೀ ವಿದ್ಯಾಸಾಗರ ಮಾಧವತೀರ್ಥ ಶ್ರೀಪಾದರು ಮತ್ತು ಪರಮಪೂಜ್ಯ ಶ್ರೀ 108 ಶ್ರೀ ವಿದ್ಯಾವಲ್ಲಭ ಮಾಧವತೀರ್ಥ ಶ್ರೀಪಾದರು ಶ್ರೀ ರಾಘವೇಂದ್ರ ಸಂಗೀತ ಸೇವಾ ಪ್ರತಿಷ್ಠಾನದ ಸಂಸ್ಥಾಪಕರಾದ ಶ್ರೀಮತಿ ಗೌರಿ ನಾಗರಾಜ್ ಅವರ ನೇತೃತ್ವದಲ್ಲಿ ಗಣ್ಯರಿಗೆ ಪ್ರಶಸ್ತಿಯನ್ನು ಕೊಟ್ಟು ಗೌರವಿಸಲಾಯಿತು. ನಂತರ ಶ್ರೀಗಳು ಫಲ ಮಂತ್ರಾಕ್ಷತೆಯೊಂದಿಗೆ ಆಶೀರ್ವದಿಸಿದರು.

ವಿದ್ವಾನ್ ಡಾ॥ ಆರ್. ಕೆ. ಪದ್ಮನಾಭರವರಿಗೆ "ಜೀವಮಾನದ ಸಂಗೀತ ಸಾಧನಾ ಪ್ರಶಸ್ತಿ", ದಿ॥ ಪಿ. ಅನಂತ ಪದ್ಮನಾಭಾಚಾರ್ ಮತ್ತು ವಿದ್ವಾನ್ ಜಿ. ಶಿವರಾಮ ಅಗ್ನಿಹೋತ್ರಿ ಇವರಿಗೆ "ವ್ಯಾಸ ಪ್ರಶಸ್ತಿ", ಡಾ॥ ವಿದುಷಿ ಅರ್ಚನಾ ಕುಲಕರ್ಣಿ ಅವರಿಗೆ "ಗುರು ರಾಘವೇಂದ್ರ ಸಂಸ್ಕರಣ ಪ್ರಶಸ್ತಿ", ಶ್ರೀ ಪ್ರಸನ್ನ ವೆಂಕಟದಾಸರ ಚಲನಚಿತ್ರದಲ್ಲಿ ಅಭಿನಯಿಸಿದ ಉದಯೋನ್ಮುಖ ಪ್ರತಿಭೆ ಚಿರಂಜೀವಿ ದೇವರಾತ ಜೋಷಿ ಇವರಿಗೆ "ಧ್ರುವ ಪ್ರಶಸ್ತಿ" ಹಾಗೂ ಕು॥ ವೇದಾ ವಿ.ಎಸ್.



ಇವರಿಗೆ "ಪ್ರತಿಭಾ ಪುರಸ್ಕಾರ"ವನ್ನು ನೀಡಿ ಸನ್ಮಾನಿಸಲಾಯಿತು. ಈ ಕಾರ್ಯಕ್ರಮಕ್ಕೆ ಸಾನಿಧ್ಯ ವಹಿಸಿದ್ದ ಪೂಜ್ಯ ಗುರುಗಳಿಗೆ ಹಾಗೂ ಮುಖ್ಯ ಅತಿಥಿಗಳಾಗಿ ಆಗಮಿಸಿದ ಡಾ॥ ಎನ್. ಸಂತೋಷ್ ಹೆಗಡೆ, ಡಾ॥ ಎಸ್. ರಂಗನಾಥ್, ಡಾ॥ ರಾಯಚೂರು ಶೇಷಗಿರಿದಾಸ್ ಹಾಗೂ ಶ್ರೀ ಜಿ.ಎಚ್. ಮದನ್ ಇವರೆಗೆ ಶ್ರೀ ರಾಘವೇಂದ್ರ ಪ್ರತಿಷ್ಠಾನದ ಸಂಸ್ಥೆಯ ಅಧ್ಯಕ್ಷೆಯಾದ ಶ್ರೀಮತಿ ಬೆಳಗೆರೆ ಗೌರಿ ನಾಗರಾಜ್ ರವರು ಫಲ ಪುಷ್ಪಗಳೊಂದಿಗೆ ಗುರುಗಳಿಗೂ ಮತ್ತು ಎಲ್ಲಾ ಗಣ್ಯರಿಗೂ ಗೌರವ ಸಮರ್ಪಿಸಿದರು. ಈ ಕಾರ್ಯಕ್ರಮವು ದೇವಗಿರಿ ವರಪ್ರದ ಶ್ರೀ ಲಕ್ಷ್ಮಿ ವೆಂಕಟೇಶ್ವರ ಸನ್ನಿಧಿಯಲ್ಲಿ ನೆರವೇರಿತು, ಇದೇ ಸಂದರ್ಭದಲ್ಲಿ ಗುರುಗಳು ಮತ್ತು ಗಣ್ಯರು ಶ್ರೀಮತಿ ಗೌರಿ ನಾಗರಾಜ್ ರವರಿಗೆ ಆಶೀರ್ವದಿಸಿ ಅಭಿನಂದಿಸಿದರು . ಹಾಗೂ ವಿಶೇಷವಾಗಿ ಮಂತ್ರಾಲಯ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಶ್ರೀ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರು ಸಂಸ್ಥೆಯ ಕಾರ್ಯವೈಖರಿಗಳ ಬಗ್ಗೆ ಪ್ರಶಂಸಿಸಿ ಇದಕ್ಕೆ ಕಾರಣಕರ್ತರಾದ ಸಂಸ್ಥೆಯ ಗೌರವ ಅಧ್ಯಕ್ಷೆ ಶ್ರೀಮತಿ ಗೌರಿ ನಾಗರಾಜ್ ರವರನ್ನೂ ಮತ್ತಿತರರನ್ನೂ ಆಶೀರ್ವದಿಸಿ ಸಂಸ್ಥೆಯು ಇನ್ನೂ ಉತ್ತುಂಗಕ್ಕೆ ಏರಲಿ ಎಂದು ನಾವು ಶ್ರೀಮೂಲರಾಮನಲ್ಲಿ ಪ್ರಾರ್ಥಿಸುತ್ತೇವೆ ಎಂದು ತಿಳಿಸಿದರು.

# ಕೆರೆಗಳ ಅಭಿವೃದ್ಧಿಯಿಂದ ಅನುಕೂಲ ಹೆಚ್ಚಾಗುವುದು



**ಶಿಡ್ಲಘಟ್ಟ:** ಕೆರೆಗಳನ್ನು ಅಭಿವೃದ್ಧಿ ಮಾಡುವುದರಿಂದ ರೈತರಿಗೆ ಫಲವತ್ತತೆಯ ಮಣ್ಣು ಸಿಗುವ ಜತೆಗೆ ಕೆರೆಯಲ್ಲಿ ನೀರಿನ ಸಂಗ್ರಹಣೆ ಹೆಚ್ಚಾಗಿ ಸುತ್ತಮುತ್ತಲಿನ ರೈತರಿಗೆ ಅನುಕೂಲವಾಗುತ್ತದೆ ಪ್ರಾಣಿ, ಪಕ್ಷಿ ಹಾಗು ದನ ಕರುಗಳಿಗೆ ಕುಡಿಯುವ ನೀರು ಸಿಗುವಂತಾಗುತ್ತದೆ ಎಂದು ಶ್ರೀ ಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕರಾದ ಪ್ರಶಾಂತ್ ತಿಳಿಸಿದರು.

ತಾಲ್ಲೂಕಿನ ಗಂಜಿಗುಂಟೆ ವಲಯದ ಜಿ. ಕುರುಬರಹಳ್ಳಿ ಗ್ರಾಮದ ಕದರಿಪತ್ತಿನ ಕೆರೆಯನ್ನು ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ "ನಮ್ಮ ಊರು ನಮ್ಮ ಕೆರೆ " ಯೋಜನೆ ಅಡಿಯಲ್ಲಿ ಹೂಳೆತ್ತುವ ಕಾಮಗಾರಿಗೆ ಗುದ್ದಲಿ ಪೂಜೆಯನ್ನು ನೆರವೇರಿಸಿ ಅವರು ಮಾತನಾಡಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ತಾಲೂಕಿನಾದ್ಯಂತ ಕಳೆದ 11 ವರ್ಷಗಳಿಂದ ಚಾರಿಟೆಬಲ್ ಟ್ರಸ್ಟ್ ಆಕ್ಟ್ ಪ್ರಕಾರ ನೋಂದಾಯಿಸಲ್ಪಟ್ಟ ರಾಷ್ಟ್ರೀಕೃತ ಬ್ಯಾಂಕುಗಳ ಪ್ರತಿನಿಧಿಯಾಗಿ ಃಅ ಮಾದರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು ಸದಸ್ಯರಿಗೆ ನೇರವಾಗಿ ಬ್ಯಾಂಕುಗಳ ಮುಖಾಂತರ ಹಣಕಾಸಿನ ಸೌಲಭ್ಯ ಒದಗಿಸುತ್ತಿದೆ ಎಂದರು.

ಪೂಜ್ಯರ ಮಾರ್ಗದರ್ಶನದಲ್ಲಿ ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಾಡುತ್ತಿದ್ದು ನಮ್ಮ ಊರು ನಮ್ಮ ಕೆರೆ ಯೋಜನೆ ಅಡಿಯಲ್ಲಿ ರಾಜ್ಯದ್ಯಂತ ಒಟ್ಟು 800 ಕೆರೆಗಳನ್ನು ಪುನಶ್ಚೇತನಗೊಳಿಸಿದ್ದು ತಾಲ್ಲೂಕಿನಲ್ಲಿ 7 ನೇ ಕೆರೆಯಾಗಿ ಜಿ.ಕುರುಬರಹಳ್ಳಿ ಗ್ರಾಮದ ಕದರಿಪತ್ತಿನ ಕೆರೆಯನ್ನು ಆಯ್ಕೆ ಮಾಡಿದ್ದು ಶೀಘ್ರದಲ್ಲೇ ಪುನಶ್ಚೇತನಗೊಳಿಸಿ ಸಾರ್ವಜನಿಕರ ಸದುಪಯೋಗಪಡಿಸಿಕೊಳ್ಳಬೇಕೆಂದು ಮನವಿ ಮಾಡಿದರು.

ಮುಖಂಡರಾದ ಬಚ್ಚರೆಡ್ಡಿ ಮಾತನಾಡಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಉತ್ತಮ ಸಮಾಜಮುಖಿ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿದ್ದು ಗ್ರಾಮೀಣ ಪ್ರದೇಶದ ಜನರಿಗೆ ಅಭಿವೃದ್ಧಿ ಹೊಂದುವಲ್ಲಿ ಸಹಕಾರಿಯಾಗಿದೆ ಎಂದು ತಿಳಿಸಿದರು.

ಜೀವಿಕ.ಮುನಿಯಪ್ಪ ಮಾತನಾಡಿ ಸರ್ಕಾರಗಳು ಮಾಡುವಂತ ಕೆಲಸಗಳನ್ನು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಾಡುತ್ತಿದ್ದು ಗ್ರಾಮೀಣ ಪ್ರದೇಶದ ಮಹಿಳೆಯರಿಗೆ ಆತ್ಮವಿಶ್ವಾಸ ಹೆಚ್ಚಿಸಿ ಪ್ರಗತಿ ಹೊಂದುವಲ್ಲಿ ಮಾದರಿಯಾಗಿದೆ ಎಂದರು.

ಕೆರೆಯ ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ಕೆ.ಸಿ. ನಾರಾಯಣಸ್ವಾಮಿ ರವರು ಮಾತನಾಡಿ ಕೆರೆ ಹೂಳೆತ್ತುವ ಕಾಮಗಾರಿ ಯೋಜನಿಯಿಂದ ರೈತರಿಗೆ ಸಿಗುವ ಮಣ್ಣು ಉತ್ತಮ ಫಲವತ್ತತೆ ಹೊಂದಿದ್ದು ಮುಂದಿನ ಬೆಳೆಗಳಲ್ಲಿ ಉತ್ತಮ ಇಳುವರಿ ಪಡೆಯಲು ಅನುಕೂಲವಾಗಲಿದೆ ಎಂದರು. ಈ ಸಂದರ್ಭದಲ್ಲಿ ತಾಲ್ಲೂಕು ಯೋಜನಾ ಧಿಕಾರಿಗಳಾದ ಸುರೇಶ್ ಗೌಡ, ಗ್ರಾಪಂ. ಸದಸ್ಯರಾದ ಬೈರಾರೆಡ್ಡಿ, ಕೃಷಿ ಮೇಲ್ವಿಚಾರಕರಾದ ರಂಗನಾಥ್, ಗ್ರಾಮಸ್ಥರಾದ ವೆಂಕಟೇಶಪ್ಪ, ಲೋಕೇಶ್, ಮುನಿಯಪ್ಪ, ಮಂಜುನಾಥ್, ಪ್ರವೀಣ್, ಮುನಿರೆಡ್ಡಿ, ವೆಂಕಟರೆಡ್ಡಿ, ಸೇವಾ ಪ್ರತಿನಿಧಿ ನಾರಾಯಣಸ್ವಾಮಿ ಇನ್ನೀತರರು ಹಾಜರಿದ್ದರು.

# ಸಮಾಜ ಸೇವಕಿ ಅನುಗೆ ಅಭಿನಂದನಾ ಕಾರ್ಯಕ್ರಮ

**ಶಿಡ್ಲಘಟ್ಟ:** ಸುಮಾರು ಮೂರು ವರ್ಷಗಳ ಹಿಂದೆ ಅಪ್ಪೇಗೌಡನಹಳ್ಳಿ, ಮೇಲೂರು ಹಾಗು ಮುತ್ತೂರು ಗ್ರಾಮಗಳ ಶಾಲೆಗಳಲ್ಲಿ ಕೆಲಸ ಮಾಡಿದ್ದೇವೆ ನಂತರ ಎಂಟು ತಿಂಗಳ ಹಿಂದೆ ಚಿಂತಾಮಣಿ ತಾಲ್ಲೂಕಿನ ಮುನಗಾನಹಳ್ಳಿ ಗ್ರಾಮದಲ್ಲಿ ಕೆಲಸ ಮಾಡಿದ್ದೇವೆ ಎಂದು ಸಮಾಜ ಸೇವಕಿ ಕೆಚ್ಚೆದೆಯ ಕನ್ನಡತಿ ಅಕ್ಕಾಅನು ತಿಳಿಸಿದರು.

ತಾಲ್ಲೂಕು ಬಣ್ಣ ಪೈಂಟ್ ಕಾರ್ಮಿಕರ ಸಂಘದ ವತಿಯಿಂದ ನಗರದ ಅವರ ಕಛೇರಿಯಲ್ಲಿ ಸರ್ಕಾರಿ ಶಾಲೆಗಳ ಅಭಿವೃದ್ಧಿ ಹರಿಕಾರಣಿ ಸಮಾಜ ಸೇವಕಿ ಅಕ್ಕಾಅನು ಅವರಿಗೆ ಅಭಿನಂದನ ಕಾರ್ಯಕ್ರಮದಲ್ಲಿ ಬಾಗವಹಿಸಿ ಅವರು ಮಾತನಾಡಿದರು.

ಈಗ ತಾಲ್ಲೂಕಿನ ದಿಬ್ಬೂರಹಳ್ಳಿ ಹತ್ತಿರ ಬಚ್ಚನಹಳ್ಳಿ ಗ್ರಾಮಕ್ಕೆ ಬಂದಿದ್ದೇವೆ,ನಾನು ಮೂಲತಃ ಕಲ್ಯಾಣ ಕರ್ನಾಟಕ ಭಾಗದ ಹೆಣ್ಣು ಮಗು ನಾನು ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ ಚಿಕ್ಕಬೇರಿಗೆ ಗ್ರಾಮದ ಯುವತಿ ಈವರೆಗೆ ಸುಮಾರು 141 ಶಾಲೆಗಳಿಗೆ ಪೈಂಟ್ ಮಾಡಿದ್ದೇನೆ 25 ಜಿಲ್ಲೆಗಳಲ್ಲಿ ಕೆಲಸ ಮಾಡುತ್ತಾ ಶಾಲೆಗಳಿಗೆ ಸುಣ್ಣ ಬಣ್ಣ ಆಗಿರಬಹುದು,

ಮಕ್ಕಳಿಗೆ ಬೇಕಾಗಿರುವಂತಹ ಆಟೋಪಾಠಕರಣಗಳು ಪೀಠೋಪಕರಣಗಳು ಮತ್ತು ಗೋಶಾಲೆಗಳಿಗೆ ಭೇಟಿ ನೀಡಿರುವದಾಗಿರಬಹುದು, ಸ್ವಚ್ಛ ಭಾರತ ಅಭಿಯಾನದ ಅಡಿಯಲ್ಲಿ ಶುಚಿತ್ವದ ಬಗ್ಗೆ ಮತ್ತು ಗ್ರಾಮ ಸ್ವಚ್ಛತೆ ಅಭಿಯಾನಗಳು ವಿವಿಧ ರೀ ತಿಯ ಅಭಿಯಾನಗಳನ್ನು ಮಾಡುತ್ತಾ ಬಂದಿದ್ದು, ಪ್ಲಾಸ್ಟಿಕ್ ಮುಕ್ತ ಕರ್ನಾಟಕ,



ಧೂಳು ಮುಕ್ತ ಕರ್ನಾಟಕ, ಸುಮಾರು ಅಭಿಯಾನಗಳನ್ನು ಮಾಡಿದ್ದೇವೆ ಜೊತೆ ಜೊತೆಯಲಿ ಕಾಡ ಬೆಳೆಸಿ ನಾಡು ಉಳಿಸಿ ಎಂಬ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದೇವೆ ಎಂದು ಅವರ ತಂಡದ ಸಮಾಜ ಸೇವೆಯನ್ನು ವಿವರಿಸಿದರು.

ಮರಗೆಲಸ ಸಂಘದ ತಾಲ್ಲೂಕು ಅಧ್ಯಕ್ಷ ಪ್ರದೀಪ್(ದೀಪು) ಮಾತನಾಡಿ ಮನೆಯಿಂದ ಹೊರಗಡೆ ಬಂದು ತನ್ನದೇ ಆದ ಒಂದು ಸೈನ್ಯ ಕಟ್ಟಿಕೊಂಡು ರಾಜ್ಯದ ಸರ್ಕಾರಿ ಕನ್ನಡ ಶಾಲೆಗಳ ಅಭಿವೃದ್ಧಿಗೆ ಟೊಂಕ ಕಟ್ಟಿ ನಿಂತಿದ್ದಾಳೆ,ತಂಡದ ಯುವಕರನ್ನು "ಯೋಧ" ರೆಂದೇ ಸಂಬೋಧಿಸುವ ಈ ಹುಡುಗಿಯ ಹೆಸರು ಅನು ಇವರನ್ನು ಎಲ್ಲರೂ ಅಕ್ಕಾ ಅನು ಎಂದೇ ಕರೀತಾರೆ ಎಂದರು.

ಇದೇ ವೇಳೆ ಸಮಾಜ ಸೇವಕಿ ಕೆಚ್ಚೆದೆಯ ಕನ್ನಡತಿ ಅಕ್ಕಾ ಅನು ಹಾಗೂ ತಂಡದವರಾದ ಗಣೇಶ್ ಕುಮಾರ್,ನಂಜನಗೂಡು ಸುದೀಪ್, ಪ್ರಜ್ವಲ್ ಚೆಂದಶಾಲ್, ಅಕ್ಷಯ್ ಕುಮಾರ್,ಕೊಂಚಗೇರಿ ಶಿವು ,ಕೊಪ್ಪಳ ಬಸವರಾಜ ,ಕುರಗೋಡು ವಿವೇಕ್ ಇವರುಗಳನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಮಿಕ ನರೀಕ್ಷಕರಾದ ಶಬಾನಾ ಅಬ್ಬಿ,ತಾಲ್ಲೂಕು ಕಾರ್ಮಿಕ ನಿರೀಕ್ಷಕರಾದ ವಿಜಯಲಕ್ಷ್ಮಿ,ಬಣ್ಣ ಮತ್ತು ಗಾರೆ ಕಾರ್ಮಿಕರ ಸಂಘದ ಅಧ್ಯಕ್ಷ ವೆಂಕಟರಮಣಪ್ಪ,ಗೌರವಾಧ್ಯಕ್ಷ ಮುನಿರಾಜು, ಉಪಾಧ್ಯಕ್ಷ ನಟರಾಜು,ಪ್ರಧಾನ ಕಾರ್ಯದರ್ಶಿ ಬಾಬು,ಖಜಾಂಚಿ ಸುಬ್ರಮಣಿ, ಸದಸ್ಯರಾದ ಕುಪ್ಪೇನಹಳ್ಳಿ ಮಂಜುನಾಥ್, ಚಿಕ್ಕದಾಸರಹಳ್ಳಿ ಲೋಕೇಶ್ ಹಾಗೂ ಬಣ್ಣ ಪೈಂಟ್ ಕಾರ್ಮಿಕರ ಸಂಘದ ಪದಾಧಿಕಾರಿಗಳು ಹಾಜರಿದ್ದರು.

# ವಿದ್ಯಾರ್ಥಿಗಳಿಗೆ ಸಂಸ್ಕಾರ ಯುತ ಶಿಕ್ಷಣ ಬೇಕು

**ನಾಗಮಂಗಲ:** ವಿದ್ಯಾರ್ಥಿಗಳಿಗೆ ಶಿಕ್ಷಣದ ಸಮುದಾಯದಲ್ಲಿ ಸಂಸ್ಕಾರ ಶಿಕ್ಷಣ ನೀಡಿದಾಗ ಸಮಾಜದ ಭವಿಷ್ಯದ ಪ್ರಜೆಗಳಾಗಿ ರೂಪಿಸಲು ಸಾಧ್ಯವಾಗುತ್ತಿದೆ ಎಂದು ಶಾಲಾ ಸಂಸ್ಥಾಪಕ ಸೋಮಶೇಖರ್ ತಿಳಿಸಿದ್ದಾರೆ.

ಅವರು ತಾಲ್ಲೂಕಿನ ವಡೇರಪುರ ಶ್ರೀರಂಗನಾಥ ಸ್ವಾಮಿ ಪೌಢಶಾಲೆ ಶಾಲಾ ವಾರ್ಷಿಕೋತ್ಸವದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಉದ್ಘಾಟನೆ ಮಾಡಿ ಮಾತನಾಡಿದರು.

ಮಕ್ಕಳಿಗೆ ಬೋಧನಾ ಕೌಶಲ್ಯದ ಜೊತೆಗೆ ಜೀವನದ ಮೌಲ್ಯಗಳ ಹಾಗೂ ಸದೃಢ ಸಮಾಜ ನಿರ್ಮಾಣ ಮಾಡುವ ಭವ್ಯ ಭವಿಷ್ಯದ ಪ್ರಜೆಗಳನ್ನು ರೂಪಿಸುವ ಹೊಣೆ ಶಿಕ್ಷಕರಾಗಿದ್ದು ಅಂತಹ ಗುರುಗಳೊಂದಿಗೆ ಸಂಸ್ಕಾರಯುತ ಶಿಕ್ಷಣವನ್ನು ನೀಡುವುದರ ಜೊತೆಗೆ ಸಮಾಜದಲ್ಲಿ ಬದಲಾವಣೆ ತರುವ ಹೊಸ ಪ್ರಯತ್ನಕ್ಕೆ ಶಿಕ್ಷಣ ಭದ್ರಬುನಾದಿಯಾಗಿದೆ ಎಂದು ತಿಳಿಸಿದರು.

ಶಿಕ್ಷಣ ಇಂದು ಸ್ಪರ್ಧಾತ್ಮಕ ಪೈಪೋಟಿ ಯುಗದಲ್ಲಿ ಅತಿ ವೇಗವಾಗಿ ಬೆಳೆಯುತ್ತಿದ್ದು ಶಿಕ್ಷಣದ ಗುಣಮಟ್ಟ ಶೈಕ್ಷಣಿಕ ಶಿಕ್ಷಣದ ಜ್ಞಾನಮುಖಿ ವಿದ್ಯಾರ್ಥಿಗಳಲ್ಲಿ ಕಲಿಕೆಯ ಗುಣಮಟ್ಟವನ್ನು ನೀಡುವುದರ ಜೊತೆಗೆ ಅವರ ಉತ್ತೇಜನ ಪೋಷಕರು ಸಹಕಾರ ನೀಡುವುದು ಅಂದಿಗೆ ಶಿಕ್ಷಣದ ಸ್ಪರ್ಧಾತ್ಮಕ ಸಹಕಾರಕ್ಕೆ ತಾವುಗಳು ಸಹಕಾರ ನೀಡಬೇಕೆಂದು ಈ ಸಂದರ್ಭದಲ್ಲಿ ಶಿಕ್ಷಕರದ ದುರ್ಗೇಶ್ ತಿಳಿಸಿದರು.

ಸಮಾರಂಭದಲ್ಲಿ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಸಭೆಯಲ್ಲಿ ರಂಗನಾಥ ಪ್ರೌಢಶಾಲೆಯ ಕಾರ್ಯದರ್ಶಿ ಡಿ.ಎಂ.ಪದ್ಮಾವತಿ ಶಿಕ್ಷಕರಗಳಾದ ಮುರಳಿ. ವರದಪ್ಪ. ನಿವೃತ್ತಿ ಮುಖ್ಯ ಶಿಕ್ಷಕರಾದ ಮಹಾಲಿಂಗೇಗೌಡ ಶಾಲಾ ಶಿಕ್ಷಕ ವರ್ಗ ಹಾಗೂ ಗಣ್ಯರು ಉಪಸ್ಥಿತರಿದ್ದರು.

ಮುಖ್ಯ ಶಿಕ್ಷಕರಾದ ಹೊನ್ನಪ್ಪ ಶೆಟ್ಟಿ ಸ್ವಾಗತಿಸಿದರೆ ಶಿಕ್ಷಕರಾದ ಶಿವಕುಮಾರ್ ಪ್ರಸ್ತಾವಿಕ ಭಾಷಣ ಮಾಡಿದರು.



# ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ ಅರಿವು

**ಚಾಮರಾಜನಗರ:** ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹದ ಅಂಗವಾಗಿ ಸಾರಿಗೆ ಇಲಾಖೆ ವತಿಯಿಂದ ನಗರದ ಶ್ರೀ ಚಾಮರಾಜೇಶ್ವರ ದೇವಾಲಯದ ಮುಂಭಾಗದಲ್ಲಿಂದು ರಸ್ತೆ ಸುರಕ್ಷತೆ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸುವ ಜಾಥಾಗೆ ಚಾಲನೆ ದೊರೆಯಿತು.

ಜಾಥಾಗೆ ಹಸಿರು ನಿಶಾನೆ ತೋರಿ ಬಳಿಕ ಮಾತನಾಡಿದ ಪ್ರಾದೇಶಿಕ ಸಾರಿಗೆ ಅಧಿಕಾರಿ ಗಾಯತ್ರಿ ಅವರು ಜನಸಾಮಾನ್ಯರಿಗೆ ರಸ್ತೆ ಸುರಕ್ಷತೆಯ ಅರಿವು ಮೂಡಿಸಲು ಪ್ರತಿವರ್ಷದಂತೆ ಈ ಬಾರಿಯೂ ರಸ್ತೆ ಸುರಕ್ಷತಾ ಸಪ್ತಾಹವನ್ನು ಆಯೋಜಿಸಲಾಗಿದೆ. ದಿನೆದಿನೇ ಹೆಚ್ಚಾಗುತ್ತಿರುವ ಅಪಘಾತ ಪ್ರಮಾಣವನ್ನು ತಗ್ಗಿಸುವುದೇ ಸಪ್ತಾಹದ ಉದ್ದೇಶವಾಗಿದೆ. ರಸ್ತೆ ಸುರಕ್ಷತೆಯ ಬಗ್ಗೆ ನಾಗರಿಕರು, ವಿದ್ಯಾರ್ಥಿಗಳು ಸೇರಿದಂತೆ ಪ್ರತಿಯೊಬ್ಬರಿಗೂ ಜಾಗೃತಿ ಅಗತ್ಯವಾಗಿದೆ ಎಂದರು.

ರಸ್ತೆ ಸುರಕ್ಷತಾ ಸಪ್ತಾಹದ ಅಂಗವಾಗಿ ಸಾರ್ವಜನಿಕರಿಗೆ ಅರಿವು ಮೂಡಿಸಲು ವಿವಿಧ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ. ಜಿಲ್ಲೆಯಲ್ಲಿ ಅಪಘಾತ ಪ್ರಮಾಣ ಕಳೆದ ಬಾರಿಗಿಂತ ಪ್ರಸ್ತುತ ಸಾಲಿನಲ್ಲಿ ಹೆಚ್ಚಾಗಿದೆ. ಅಪಘಾತಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಜನರು ರಸ್ತೆ ಸಂಚಾರ




ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಈ ಮೂಲಕ ಚಾಮರಾಜನಗರವನ್ನು ಅಪಘಾತ ಮುಕ್ತ ಜಿಲ್ಲೆಯನ್ನಾಗಿಸಲು ಎಲ್ಲರು ಸಹಕರಿಸಬೇಕು ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ಗಾಯತ್ರಿ ಅವರು ತಿಳಿಸಿದರು.

ಪ್ರಾದೇಶಿಕ ಸಾರಿಗೆ ನಿರೀಕ್ಷಕರಾದ ದಿನೇಶ್‌ಕುಮಾರ್ ಅವರು ಮಾತನಾಡಿ ಸಾರ್ವಜನಿಕರು, ವಿದ್ಯಾರ್ಥಿಗಳು ರಸ್ತೆ ಸುರಕ್ಷತೆಯ ಮಹತ್ವವನ್ನು ಅರಿಯಬೇಕು. ಅಪಘಾತ ಪ್ರಮಾಣಗಳನ್ನು ಕಡಿಮೆ ಮಾಡಲು ವಾಹನ ಚಲಾಯಿಸುವ ಪ್ರತಿಯೊಬ್ಬರು ಚಾಲನಾ ಪರವಾನಗಿ ಪಡೆದಿರಬೇಕು. 18 ವರ್ಷ ಮೇಲ್ಪಟ್ಟವರು ಮಾತ್ರ ವಾಹನ ಚಾಲನೆ ಮಾಡಬೇಕು. ಅಪ್ರಾಪ್ತರು ವಾಹನ ಚಾಲಿಸಿದರೆ ಅವರ ಪೋಷಕರಿಗೆ 25 ಸಾವಿರ ರೂ. ದಂಡ ವಿಧಿಸಲಾಗುವುದು. ಅಪಘಾತದಲ್ಲಿ ಸಿಲುಕಿದ ವ್ಯಕ್ತಿ ಮರಣ ಹೊಂದಿದರೆ ಅಪ್ರಾಪ್ತರನ್ನು ಬಾಲಮಂದಿರಕ್ಕೆ ಕಳುಹಿಸಲಾಗುವುದು. ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಯುವಕರು ಬೈಕ್ ವೀಲಿಂಗ್ ಮಾಡಬಾರದು. ಕುಡಿದು ವಾಹನ ಚಾಲಿಸಬಾರದು ಎಂದರು. ಶಾಲಾ ಶಿಕ್ಷಣ (ಪದವಿ ಪೂರ್ವ) ಇಲಾಖೆಯ ಉಪನಿರ್ದೇಶಕರಾದ ಮಂಜುನಾಥ ಪ್ರಸನ್ನ, ಸಂಚಾರಿ ನಿರೀಕ್ಷಕರಾದ ಮಹದೇವಸ್ವಾಮಿ, ಇತರರು ಇದೇ ಸಂದರ್ಭದಲ್ಲಿ ಇದ್ದರು.

# ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಕಲಿಕಾ ಹಬ್ಬ ಸಹಕಾರಿ

**ಮುಳಬಾಗಿಲು:** ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಕಲಿಕಾ ಹಬ್ಬ ಸಹಕಾರಿಯಾಗಿದೆ ಎಂದು ಬಯಲು ಗ್ರಾಮ ಅಧ್ಯಕ್ಷ ಅಶೋಕ್ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ.

ತಾಲೂಕಿನ ಬೈರಕೂರು ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಕ್ಲಸ್ಟರ್ ಮಟ್ಟದ ಕಲಿಕಾ ಹಬ್ಬ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಲಾಖೆ ಸರ್ಕಾರಿ ಶಾಲೆಗಳ ಅಭಿವೃದ್ಧಿಗಾಗಿ ಮತ್ತು ಮಕ್ಕಳ ಕಲಿಕಾ ಗುಣಮಟ್ಟವನ್ನು ಹೆಚ್ಚಿಸಲು ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದು ಬಹಳ ಉತ್ತಮವಾಗಿದೆ. ಆದರೆ ಪ್ರತಿಯೊಬ್ಬರಿಗೂ ಸರ್ಕಾರಿ ಉದ್ಯೋಗ ಬೇಕು ಆದರೆ ಸರ್ಕಾರಿ ಶಾಲೆ ಎಂದರೆ ಬಡವರ ಶಾಲೆ ಎಂದು ನೋಡುತ್ತಾರೆ. ಇದು ತಪ್ಪು ಕಲ್ಪನೆ, ಸರ್ಕಾರಿ ಶಾಲೆಗಳಲ್ಲಿ ವಿವಿಧ ಸೌಲಭ್ಯಗಳು ಮತ್ತು ಉತ್ತಮ ಶಿಕ್ಷಕರು ಕಾರ್ಯ ನಿರ್ವಹಿಸುತ್ತಿದ್ದಾರೆ ಪ್ರತಿ ಶಾಲೆಯ ಮುಖ್ಯ ಶಿಕ್ಷಕರು ಹಾಗೂ ಪೋಷಕರು



ಸರ್ಕಾರಿ ಶಾಲೆಗಳ ಮಹತ್ವ ಮತ್ತು ತಮ್ಮ ಶಾಲೆಗಳಲ್ಲಿ ಓದಿ ಉನ್ನತ ಹುದ್ದೆಗಳಲ್ಲಿರುವ ಹೆಸರುಗಳನ್ನು ಅವರ ಭಾವಚಿತ್ರವನ್ನು ಪ್ರಮುಖ ಬೀದಿಗಳಲ್ಲಿ ಪ್ಲೆಕ್ಸ್ ನಲ್ಲಿ ಹಾಕುವ ಮುಖಾಂತರ ಊರಿನ ಸಾರ್ವಜನಿಕರಿಗೆ ತಿಳಿಸಬೇಕು ಎಂದು ಹೇಳಿದರು.

ವಿದ್ಯಾರ್ಥಿಗಳಿಗೆ ಓದುವುದು ಒಂದೇ ಮುಖ್ಯವಲ್ಲ ಹಲವಾರು ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ಭಾಗವಹಿಸಿ ತಮ್ಮ ತಮ್ಮ ಪ್ರತಿಭೆಯನ್ನು ವ್ಯಕ್ತಪಡಿಸಿದಾಗ ನಿಮ್ಮ ಪ್ರತಿಭೆಯನ್ನು ಗುರುತಿಸಲು ಸಾಧ್ಯವಾಗುತ್ತದೆ ಎಂದರು.

ಕ್ಷೇತ್ರ ಸಮನ್ವಯ ಅಧಿಕಾರಿ ಪಿ ಸೋಮೇಶ್ ಮಾತನಾಡಿ, ಈ ಕಾರ್ಯಕ್ರಮ ಒಂದರಿಂದ ಐದನೇ ತರಗತಿ ಸರ್ಕಾರಿ ಶಾಲೆ ಮಕ್ಕಳಿಗೆ ಮಾತ್ರ , ಕಲಿಕೆಯಲ್ಲಿ ನಿಧಾನಗತಿ ಮಕ್ಕಳು ಮುಖ್ಯ ವಾಹಿನಿಗೆ ಬರಲು ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅಂತಹ ವಿದ್ಯಾರ್ಥಿಗಳಲ್ಲಿ ಕಲಿಕೆಯ ವೇಗ ಮತ್ತು ವೈವಿಧ್ಯಮಯ ವಿಧಾನಗಳಿಂದ ಚಟುವಟಿಕೆಗಳನ್ನು ಈ ಕಲಿಕಾ ಹಬ್ಬದಲ್ಲಿ ಹಮ್ಮಿಕೊಳ್ಳಲಾಗುವುದು. ಇಲ್ಲಿ ಕಥೆ ಹೇಳುವುದು, ಕೈಬರಹ ಸಂತೋಷದಾಯಕ ಗಣಿತ, ಮೆಮೊರಿ ಪರೀಕ್ಷೆ, ರಸಪ್ರಶ್ನೆ, ಪೋಷಕರು ಮತ್ತು ಮಕ್ಕಳ ಸಹ ಸಂಬಂಧ ವಲಯ ಈ ಚಟುವಟಿಕೆಗಳನ್ನು ಈ ದಿನ ಹಮ್ಮಿಕೊಳ್ಳಲಾಗಿದೆ. ವಿದ್ಯಾರ್ಥಿಗಳೆಲ್ಲರೂ ಸಕ್ರಿಯವಾಗಿ ಪಾಲ್ಗೊಂಡು ತಮ್ಮ ಪ್ರತಿಭೆಯನ್ನು ತೋರಿಸಬೇಕು ಎಂದು ಹೇಳಿದರು.

ಈ ಚಟುವಟಿಕೆಗಳು ವಿದ್ಯಾರ್ಥಿಗಳ ಭಾವನಾತ್ಮಕ ಮತ್ತು ದೈಹಿಕವಾದ ಕೌಶಲ್ಯ ಗಳನ್ನು ಮಕ್ಕಳಲ್ಲಿ ಅಭಿವೃದ್ಧಿಪಡಿಸಲು ಒಂದು ಸಾಧನವಾಗಿ ಕೆಲಸ ಮಾಡುತ್ತದೆ ಎಂದರು.

ತಾಲೂಕು ಗ್ರಾಮ ಪಂಚಾಯಿತಿ ಸದಸ್ಯರ ಒಕ್ಕೂಟದ ಅಧ್ಯಕ್ಷ ಪೆತ್ತಾಂಡ್ಲಹಳ್ಳಿ ಶಂಕರ್ ಮಾತನಾಡಿ ಇಂದಿನ ಆಧುನಿಕ ಯುಗದಲ್ಲಿ ಮೊಬೈಲುಗಳ ಹಾವಳಿ ಹೆಚ್ಚಾಗಿದೆ ಪೋಷಕರು ಒಂದು ಹಂತದವರೆಗೆ ಮೊಬೈಲಗಳನ್ನು ವಿದ್ಯಾರ್ಥಿಗಳ ನೀಡಬೇಡಿ ಅದರಿಂದ ಬಹಳಷ್ಟು ಅನಾನುಕೂಲವಾಗುತ್ತಿದೆ ಎಂಬ ಕಿವಿ ಮಾತನ್ನು ಹೇಳಿದರು.

ಈ ಕಲಿಕಾ ಬಹು ವಿದ್ಯಾರ್ಥಿಗಳಲ್ಲಿ ಸಹೋದರತ್ವ ಮತ್ತು ಸಮಾನತೆಯನ್ನು ಬೆಳೆಸುತ್ತದೆ ಎಂದರು.

ಈ ಕಾರ್ಯಕ್ರಮದಲ್ಲಿ ಏಳು ಚಟುವಟಿಕೆಗಳನ್ನು ಹಮ್ಮಿಕೊಂಡು ವಿಜೇತರಾದ ವಿದ್ಯಾರ್ಥಿಗಳಿಗೆ ಸೂಕ್ತವಾದ ಬಹುಮಾನ ಮತ್ತು ಪ್ರಶಸ್ತಿ ಪತ್ರಗಳು ಮತ್ತು ಸಮಾಧಾನಕರ ಬಹುಮಾನಗಳನ್ನು ನೀಡಲಾಯಿತು ಇಸಿಓ ಮುನಿಸ್ವಾಮಿ, ಸಿ ಆರ್ ಪಿ ವರದರಾಜ್, ಮುಖ್ಯ ಶಿಕ್ಷಕ ನಾಗರಾಜ್ ,ಹಿರಿಯ ಶಿಕ್ಷಕರಾದ ಸರೋಜಮ್ಮ, ಉದಯ್ ಕುಮಾರ್ ಮಂಜುನಾಥ್ , ವೆಂಕಟರತ್ನಯ್ಯ, ಚಂದ್ರ ಪ್ರಮೀಳಮ್ಮ, ಆಂಜಮ್ಮ, ಮತ್ತು ತೀರ್ಪುಗಾರರು ಪೋಷಕರು ಇದ್ದರು.



# ಫಲಾನುಭವಿಗಳಿಗೆ ಯೋಜನೆ ತಲುಪಿಸಿ

**ಶಿಡ್ಲಘಟ್ಟ:** ಜನರು ಕಟ್ಟುವ ತೆರಿಗೆ ಹಣದಿಂದ ಸರ್ಕಾರ ರೂಪಿಸುವ ಯೋಜನೆಗಳು ಯಶಸ್ವಿಯಾಗಬೇಕಾದರೆ ಅರ್ಹ ಫಲಾನುಭವಿಗಳಿಗೆ ಯೋಜನೆ ತಲುಪುವಂತೆ ಮಾಡುವ ಕೆಲಸ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಮಾಡಬೇಕು ಎಂದು ಶಾಸಕರಾದ ಬಿ.ಎನ್.ರವಿಕುಮಾರ್ ತಿಳಿಸಿದರು.

ನಗರದ ಪ್ರವಾಸಿ ಮಂದಿರದ ಆವರಣದಲ್ಲಿ ಹಮ್ಮಿಕೊಂಡಿದ್ದ ಗಂಗಾ ಕಲ್ಯಾಣ ಯೋಜನೆಯ ಅರ್ಹ ಫಲಾನುಭವಿಗಳಿಗೆ ಪಂಪು ಮೋಟಾರ್ ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಕ್ಷೇತ್ರದ ದಿಬ್ಬೂರಹಳ್ಳಿ, ಚಿಲಕಲನೇರ್ಪು ಭಾಗದಲ್ಲಿ ತೀರಾ ಬಡವರು ಇರುವುದರಿಂದ ಅವರನ್ನು ಗಮನದಲ್ಲಿಟ್ಟುಕೊಂಡು ಅಧಿಕಾರಿಗಳು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಿ ಸರ್ಕಾರದ ಸೌಲಭ್ಯಗಳು ಹಾಗೂ ಅನುದಾನಗಳು ನೇರವಾಗಿ ಅರ್ಹ ಫಲಾನುಭವಿಗಳಿಗೆ ಸಿಗುವಂತೆ ಮಾಡಲು ಅಧಿಕಾರಿಗಳು ಪ್ರಾಮಾಣಿಕವಾಗಿ ಕರ್ತವ್ಯವನ್ನು ನಿರ್ವಹಿಸಬೇಕು ಎಂದು ಕಿವಿಮಾತು ಹೇಳಿದರು.



ಸರ್ಕಾರದಿಂದ ಸವಲತ್ತುಗಳನ್ನು ಸದುಪಯೋಗ ಮಾಡಿಕೊಂಡು ನೂತನ ತಂತ್ರಜ್ಞಾನಗಳನ್ನು ಅಳವಡಿಸಿ ಕೊಳ್ಳುವ ಜತೆಗೆ ರೈತರು ಕೃಷಿ ಕ್ಷೇತ್ರದಲ್ಲಿ ಮತ್ತಷ್ಟು ಸಾಧನೆ ಮಾಡಬೇಕು ಎಂದರು.

ಈ ಹಿಂದೆ ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಆಗಿರುವ ಲೋಪದೋಷಗಳನ್ನು ಕೆದಕುತ್ತಾ ಹೋದರೆ ಅಭಿವೃದ್ಧಿ ಸಾಧ್ಯವಿಲ್ಲ, ಹಾಗಾಗಿ ನನ್ನ ಅವಧಿಯಲ್ಲಿ ಯಾವುದೇ ಅವ್ಯವಹಾರ ನಡೆಯದಂತೆ ಅಧಿಕಾರಿಗಳು ಎಚ್ಚರವಹಿಸಿ ಕಾರ್ಯ ನಿರ್ವಹಿಸಿ ಎಂದು ಎಚ್ಚರಿಕೆ ನೀಡಿದರು.ಇದೇ ವೇಳೆ ಸುಮಾರು 20 ಅರ್ಹ ಫಲಾನುಭವಿಗಳಿಗೆ ಪಂಪು ಮೋಟರ್, ಕೇಬಲ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಪಿ.ಎಲ್.ಡಿ. ಬ್ಯಾಂಕ್ ಅಧ್ಯಕ್ಷ ಬಂಕ್ ಮುನಿಯಪ್ಪ, ಜಿಲ್ಲಾ ಪಂಚಾಯತಿ ಮಾಜಿ ಸದಸ್ಯ ನಂದನವನಂ ಶ್ರೀರಾಮರೆಡ್ಡಿ, ತಾದೂರು ರಘು, ಮೇಲೂರು ಮಂಜುನಾಥ್,ಎಂ.ನಂಜಪ್ಪ, ಕೊತ್ತನೂರು ಲಕ್ಷ್ಮಿಪತಿ ,ಭಕ್ತರಹಳ್ಳಿ ಗ್ರಾಮ ಪಂಚಾಯತಿ ಉಪಾಧ್ಯಕ್ಷ ಮಂಜುನಾಥ್, ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಅಂಜನ್‌ಕುಮಾರ್, ಗುತ್ತಿಗೆದಾರ ಮುನಿರಾಜು ಇನ್ನಿತರರು ಹಾಜರಿದ್ದರು.

# ಬೆಳೆಗೆ ದೃಷ್ಟಿಯಾಗದಿರಲು ನಟಿಯ ಬ್ಯಾನರ್ ಅಳವಡಿಕೆ

**ಮುಳಬಾಗಿಲು:** ರೈತನೊಬ್ಬ ತಮ್ಮ ಸಮೃದ್ಧವಾಗಿ ಬೆಳೆದಿರುವ ಆಲೂಗಡ್ಡೆ ತೋಟದಲ್ಲಿ, ಬೆಳೆಗೆ ದೃಷ್ಟಿಯಾಗದೆ ಇರಲಿ ಎಂದು ಸಿನಿಮಾ ನಟಿಯರ ಭಾವಚಿತ್ರ ಬ್ಯಾನರ್‌ಗಳನ್ನುಅಳವಡಿಸಿ ರೈತ ಹೊಸ ತಂತ್ರಜ್ಞಾನ ಮಾಡಿದ್ದಾನೆ.

ನಗರದಿಂದ ತಾಯಲೂರು ಕಡೆಗೆ ಹೋಗುವ ಖಾದ್ರಿಪುರ ಗೇಟ್ ನಲ್ಲಿ ರೈತನೊಬ್ಬ ಆಲೂಗಡ್ಡೆ ಬೆಳೆಯನ್ನು ಸಮೃದ್ಧವಾಗಿ ಬೆಳೆದಿದ್ದು, ದಾರಿಯಲ್ಲಿ ಹೋಗಿ ಬರುವವರು ಬೆಳೆಗಳನ್ನು ನೋಡಿ ಖುಷಿ ಪಡುತ್ತಾ, ಬೆಳೆಗಳ ಬಗ್ಗೆ ಶಬ್ಬಾಸ್ ಗಿರಿ ವ್ಯಕ್ತ ಪಡಿಸುತ್ತಿದ್ದಾರೆ.ಇದನ್ನು ಗಮನಿಸಿದ ರೈತ ಹೋಗಿ ಬರುವವರಿಂದ ತಮ್ಮ ಬೆಳೆಗಳಿಗೆ ದೃಷ್ಟಿ ಆಗಬಹುದು ಎಂದು ತೋಟದಲ್ಲಿ ನಾನಾ ಬಗೆಯ ಸಿನಿಮಾ ನಾಯಕಿಯರ ಅರೆಬರೆ ಬಟ್ಟೆಗಳನ್ನು ತೊಟ್ಟಿರುವ ಸ್ವಲ್ಪಮಟ್ಟಿಗೆ ನಗ್ನ ಚಿತ್ರಗಳಂತೆ ಕಾಣುವ ಆಕರ್ಷಕ ಬ್ಯಾನರುಗಳನ್ನು ಅಳವಡಿಸಿ ನೋಡುಗರ ಕಣ್ಣು ಬೆಳೆಗಳ ಮೇಲೆ ಬೀಳದೆ ತೋಟದ ಕಡೆಗೆ ನೋಡಿದ ತಕ್ಷಣ ಬ್ಯಾನರುಗಳು ಕಾಣುವಂತೆ ಮಾಡಿ ಬೆಳೆಗಳಿಗೆ ದೃಷ್ಟಿ ಬೀಳದಂತಹ ತಂತ್ರಗಾರಿಕೆಯನ್ನು ಕಂಡುಕೊಂಡಿರುವುದು



ನೂತನ ಚಿಂತನೆಯಾದರೂ ಅರೆ ಬರೆ ಬಟ್ಟೆಗಳ ಬ್ಯಾನರುಗಳನ್ನು ಕೆಲವರು ಕುಟುಂಬ ಸಮೇತ ರಸ್ತೆಯಲ್ಲಿ ಸಂಚರಿಸುವವರು ಪತ್ನಿ, ಅಪ್ಪ,ಅಮ್ಮ ಹಾಗೂ ಮಕ್ಕಳ ಜೊತೆಯಲ್ಲಿ ಪ್ರಯಾಣ ಮಾಡುವವರಿಗೆ ಇರುಸು ಮುರುಸು ಉಂಟು ಮಾಡುತ್ತಿದ್ದು ಬ್ಯಾನರುಗಳನ್ನು ನೋಡಲಾರದೆ ತಲೆತಗ್ಗಿಸಿಕೊಂಡು ಹೋಗುವಂತಹ ವಾತಾವರಣ ಏರ್ಪಟ್ಟಿರುವುದು ಆಶ್ಚರ್ಯಕರ ಸಂಗತಿಯಗಿದೆ.

ಇನ್ನು ರೈತರು ತಮ್ಮ ಬೆಳೆಗಳ ಮೇಲೆ ಯಾರ ಕಣ್ಣೂ ಬೀಳದಂತೆ ಮಡಿಕೆಯ ಮೇಲೆ ಮನುಷ್ಯನ ಹಾಗೂ ದೆವ್ವ, ಭೂತ, ಪಿಶಾಚಿಗಳ ಚಿತ್ರಣಗಳನ್ನು ಅಳವಡಿಸುತ್ತಾ ದೃಷ್ಟಿಯಿಂದ ತಪ್ಪಿಸಿಕೊಳ್ಳಲು ಪ್ರಯತ್ನಿಸುವುದು ಸಾಮಾನ್ಯ ಸಂಗತಿ.ಆದರೆ ಇಲ್ಲಿನ ರೈತ ಏಕಾಏಕಿ ಸಿನಿಮಾ ನಟಿಯರಾದ ಸಮಂತಾ, ಅನುಷ್ಕಾ ಶೆಟ್ಟಿ , ಶೃತಿ ಹಾಸನ್ ಅವರ ಅರೆಬರೆ ನಗ್ನ ದೇಹದ ಚಿತ್ರಗಳನ್ನು ಅಳವಡಿಸಿ ವಿಶಿಷ್ಟವಾದ ದಾರಿಯನ್ನು ಕಂಡುಕೊಂಡಿರುವುದು ಹೊಸ ಪ್ರಯತ್ನದಂತೆ ಕಂಡರೂ, ದಾರಿಯಲ್ಲಿ ಸಂಚರಿಸುವ ಮಹಿಳೆಯರು ಹಾಗೂ ಹೆಣ್ಣು ಮಕ್ಕಳಿಗೆ ಚಿತ್ರಗಳಿಂದಾಗಿ ತಾವು ನಾಚಿಕೆಯಿಂದ ತಲೆ ತಗ್ಗಿಸಿ ಓಡಾಡುತ್ತಿರುವುದು ಬೇಸರದ ವಿಚಾರವಾಗಿದೆ. ಕೆಲವು ಪೋಷಕರು ತಮ್ಮ ಮಕ್ಕಳನ್ನು ದ್ವಿಚಕ್ರ ಮತ್ತಿತರ ವಾಹನಗಳಲ್ಲಿ ಜೊತೆಯಲ್ಲಿ ಕೂರಿಸಿಕೊಂಡು ಹೋಗಿ ಬರುವಾಗ ಅಸಹ್ಯಕರ ಬ್ಯಾನರುಗಳಿಂದ ಪೋಷಕರು ಹಾಗೂ ಹೆಣ್ಣು ಮಕ್ಕಳಿಗೆ ಅಸಹ್ಯ ಉಂಟಾಗುವಂತೆ ಆಗುತ್ತಿರುವುದು ವಿಪರ್ಯಾಸದ ಸಂಗತಿಯಾಗಿ ಬದಲಾಗಿದೆ. ಕೆಲವರು ಅರೆಬರೆ ಬಟ್ಟೆಗಳ ಬ್ಯಾನರುಗಳನ್ನು ರೈತರು ತಮ್ಮ ತೋಟಗಳಲ್ಲಿ ಅಳವಡಿಸಿರುವುದನ್ನು ತೆಗೆದು ಇನ್ನಿತರೆ ದೃಷ್ಟಿ ಬೊಂಬೆಗಳನ್ನು ಅಳವಡಿಸಿದರೆ ಚೆನ್ನಾಗಿರುತ್ತದೆ ಎಂದು ಕೆಲವು ಸಾರ್ವಜನಿಕರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ..

## ಕಸ ಸಂಗ್ರಹಿಸುವ ಆಟೋ ಟಿಪ್ಪರ್‌ಗಳಿಗೆ ಚಾಲನೆ

**ಚಾಮರಾಜನಗರ:** ನಗರದ ಸ್ವಚ್ಚತೆ ಹಾಗೂ ಘನತ್ಯಾಜ್ಯ ವಸ್ತುಗಳ ಸಂಗ್ರಹಣೆ, ವಿಲೇವಾರಿ ಮಾಡುವ ನೂತನ ಐದು ಆಟೋ ಟಿಪ್ಪರ್‌ಗಳಿಗೆ ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಚಾಲನೆ ನೀಡಿದರು.

ನಗರದ ನಗರಸಭೆ ಕಾರ್ಯಾಲಯದ ಮುಂಭಾಗದಲ್ಲಿ ಸ್ವಚ್ಛಭಾರತ ಅಭಿಯಾನ 1.0 ಯೋಜನೆಯಡಿ ಚಾಮರಾಜನಗರ ನಗರಸಭೆ ವತಿಯಿಂದ 46.50 ಲಕ್ಷ ರೂ. ಗಳ ವೆಚ್ಚದಲ್ಲಿ ಖರೀದಿಸಲಾಗಿರುವ 3.0 ಕ್ಯೂಬಿಕ್ ಸಾಮರ್ಥ್ಯದ ಐದು ಆಟೋ ಟಿಪ್ಪರ್‌ಗಳನ್ನು ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಸೇವೆಗೆ ಸಮರ್ಪಿಸಿ ಶುಭ ಹಾರೈಸಿದರು.

ಇದೇ ವೇಳೆ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಮಾತನಾಡಿ, ಸ್ವಚ್ಚಭಾರತ ಅಭಿಯಾನದಡಿ ನಗರಸಭಾ ವ್ಯಾಪ್ತಿಯ ಮನೆಮನೆ ಕಸ ಸಂಗ್ರಹಣೆಗಾಗಿ ನೂತನ ಐದು ಆಟೋ ಟಿಪ್ಪರ್‌ಗಳನ್ನು ನಗರಸಭೆಗೆ ನೀಡಲಾಗಿದೆ.ನಗರದ ನೈರ್ಮಲ್ಯಕ್ಕಾಗಿ ಎಲ್ಲರು ಸಹಕರಿಸಬೇಕು ಎಂದರು.

ನಗರಸಭೆಯ ಅಧ್ಯಕ್ಷರಾದ ಎಸ್. ಸುರೇಶ್ ಅವರು ಮಾತನಾಡಿ ನಗರದ ಸ್ವಚ್ಚತೆಯನ್ನು ಕಾಪಾಡುವ ಸಲುವಾಗಿ ಕಸ ಸಂಗ್ರಹಣೆ ವಾಹನಗಳಿಗೆ ಇಂದು ಚಾಲನೆ ಸಿಕ್ಕಿದೆ. ಜನರು ಕಸವನ್ನು ಎಲ್ಲೆಂದರಲ್ಲಿ ಬಿಸಾಡದೇ ನಗರಸಭೆ ಸಿಬ್ಬಂದಿಗೆ ನೀಡಬೇಕು. ಕಸವನ್ನು ಹಸಿಕಸ ಹಾಗೂ ಒಣಕಸವಾಗಿ ಬೇರ್ಪಡಿಸುವುದರಿಂದ ಘನತ್ಯಾಜ್ಯ ವಿಂಗಡಣೆ ಸುಲಭವಾಗಲಿದೆ. ಈ ನಿಟ್ಟಿನಲ್ಲಿ ಜನರು ನಗರಸಭೆಗೆ ಸಹಕಾರ ನೀಡಬೇಕು ಎಂದು ತಿಳಿಸಿದರು.

## ಆಕಸ್ಮಿಕ ಫೈರಿಂಗ್: ಮಗು ಸಾವು, ತಾಯಿ ಗಾಯ

**ನಾಗಮಂಗಲ:** ಕೋಳಿ ಫಾರಂನಲ್ಲಿ ಆಕಸ್ಮಿಕ ಫೈರಿಂಗ್ ಆಗಿದ್ದು, ಘಟನೆಯಲ್ಲಿ ನಾಲ್ಕು ವರ್ಷದ ಮಗು ಸಾವನ್ನಪ್ಪಿ ತಾಯಿ ಗಾಯಗೊಂಡಿರುವ ಘಟನೆ ತಾಲ್ಲೂಕಿನ ದೊಂದೆ ಮಾದನಹಳ್ಳಿ ಗ್ರಾಮದಲ್ಲಿ ಭಾನುವಾರ ಸಂಜೆ ಸಂಭವಿಸಿದೆ.

ತಾಲೂಕಿನ ದೇವಲಾಪುರ ಹೋಬಳಿ ದೊಂದೆ ಮಾದನಹಳ್ಳಿ ಗ್ರಾಮದ ನರಸಿಂಹಮೂರ್ತಿ ಎಂಬುವರವರ ಕೋಳಿ ಫಾರಂನಲ್ಲಿ ಈ ದುರ್ಘಟನೆ ಸಂಭವಿಸಿದ್ದು, ಅಭಿಜಿತ್ (04) ಸಾವನ್ನಪ್ಪಿರುವ ಬಾಲಕನಾಗಿದ್ದು, ತಾಯಿ ಲಿಪಿಕಾ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಪಶ್ಚಿಮ ಬಂಗಾಳ ಮೂಲದ ಈ ಕುಟುಂಬದವರು ಸುಮಾರು ಐದು ವರ್ಷದಿಂದ ಇಲ್ಲಿನ ಕೋಳಿ ಫಾರಂನಲ್ಲಿ ಕೆಲಸ ಮಾಡಿಕೊಂಡಿದ್ದರು ಎನ್ನಲಾಗಿದ್ದು, ಅಕ್ಕ ಪಕ್ಕದ ಕೋಳಿ ಫಾರಂನ ಸುದೀಪ್ ದಾಸ್ (15) ಎಂಬ ಹುಡುಗನೊಂದಿಗೆ ಅಭಿಜಿತ್ ಭಾನುವಾರ ಸಂಜೆ ಆಟವಾಡುತ್ತಿದ್ದ ವೇಳೆ ಈ ಘಟನೆ ಸಂಭವಿಸಿದೆ. ಕೋಳಿ ಫಾರಂ ಮಾಲೀಕರು ಇರಿಸಿದ್ದ ಸಿಂಗಲ್ ಬ್ಯಾರೆಲ್ ಗನ್ ನೊಂದಿಗೆ ಆಟವಾಡುವಾಗ ಗೊತ್ತಿಲ್ಲದೆ ಸುದೀಪ್ ದಾಸ್ ಫೈರ್ ಮಾಡಿರುವುದರಿಂದ ಮಗು ಮೃತ ಪಟ್ಟಿರುತ್ತದೆ ಎನ್ನಲಾಗಿದ್ದು, ಈ ವೇಳೆ ಪಕ್ಕದಲ್ಲೇ ಇದ್ದ ಅಭಿಜಿತ್ ತಾಯಿ ಲಿಪಿಕಾ ಕೂಡ ಗಾಯಗೊಂಡಿರುವುದಾಗಿ ತಿಳಿದು ಬಂದಿದೆ. ಈ ಸಂಬಂಧ ನಾಗಮಂಗಲ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲುಗೊಂಡಿದೆ.

# ಪದಾಧಿಕಾರಿಗಳ ನೇಮಕ ಮತ್ತು ಸದಸ್ಯರ ಸೇರ್ಪಡೆ ಕಾರ್ಯಕ್ರಮ

**ದೇವನಹಳ್ಳಿ:** ತಾಲೂಕಿನ ಬೊಮ್ಮವಾರ ಗ್ರಾಮಸ್ಥರು ಪ್ರಜಾ ವಿಮೋಚನಾ ಚಳುವಳಿ –ಸಮತಾವಾದದ ಸಂಘಟನೆಯ ಸಿದ್ಧಾಂತಗಳನ್ನ ಸ್ವ ಇಚ್ಛೆಯಿಂದ ಒಪ್ಪಿಕೊಂಡು ಸಂಘಟನೆಗೆ ಸೇರ್ಪಡೆಯಾಗಿದ್ದಾರೆ ಎಂದು ಪಿವಿಸಿ –(ಎಸ್)ರಾಜ್ಯ ಕಾರ್ಯಾಧ್ಯಕ್ಷ ದಾಸರ ಬೀದಿ ಮುರುಳಿ .ಎಸ್ ತಿಳಿಸಿದ್ದಾರೆ. ಪಟ್ಟಣದ ಪ್ರವಾಸಿ ಮಂದಿರದಲ್ಲಿ ಪ್ರಜಾ ವಿಮೋಚನಾ ಚಳವಳಿ ಸಮತಾವಾದ ವತಿಯಿಂದ ಪದಾಧಿಕಾರಿಗಳ ಆಯ್ಕೆ ಮತ್ತು ಸೇರ್ಪಡೆ ಕಾರ್ಯಕ್ರಮ ದಲ್ಲ ಪದಾಧಿಕಾರಿಗಳಿಗೆ ಆಯ್ಕೆ ಪತ್ರವನ್ನು ರಾಜ್ಯ ಕಾರ್ಯಾಧ್ಯಕ್ಷ ದಾಸರಬೀದಿ ಮುರಳಿ ವಿತರಣೆ ಮಾಡಿ ಮಾತನಾಡಿದರು.

ಪಿವಿಸಿ ಸಮತಾವಾದ ಸಂಘಟನೆ ವತಿಯಿಂದ ಬಡವರಿಗಾಗಿ ನಡೆಯುತ್ತಿದ್ದ ಹಲವಾರು ಹೋರಾಟಗಳು ಮತ್ತು ಕಾರ್ಯಕ್ರಮಗಳು ನಡೆಸುವುದನ್ನು ಗಮನದಲ್ಲಿಟ್ಟುಕೊಂಡು ಯಾವುದೇ ಬೇಡಿಕೆಗಳಿಲ್ಲದೆ ಜನರು ಸಂಘಟನೆಗೆ ಸೇರ್ಪಡೆಯಾಗುತ್ತಿದ್ದಾರೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಪ್ರಜಾ ವಿಮೋಚನಾ ಚಳುವಳಿ ಸಮತಾವಾದ ಸಂಘಟನೆಯ ಗೌರವಾಧ್ಯಕ್ಷ ಬೈಲಪ್ಪ, ತಾಲೂಕು ಅಧ್ಯಕ್ಷ ಕಾಂತರಾಜು, ಉಪಾಧ್ಯಕ್ಷ ರಮೇಶ್. ಬಿ .ಎಂ, ಪ್ರಧಾನ ಕಾರ್ಯದರ್ಶಿ ಸಿ. ಮುನಿಕೃಷ್ಣ, ಕಾರ್ಯದರ್ಶಿ ಶಿವಕುಮಾರ್ ,ಜಂಟಿ ಕಾರ್ಯದರ್ಶಿ ಓಬಳೇಶ್ ಸೇರಿದಂತೆ ಬೊಮ್ಮಾವಾರ ಗ್ರಾಮ ಶಾಖೆಯ ಪದಾಧಿಕಾರಿಗಳು ಹಾಗೂ ಸದಸ್ಯರು ,ತಾಲೂಕು ಸಮಿತಿಯ ಪದಾಧಿಕಾರಿಗಳು ಭಾಗಿಯಾಗಿದ್ದರು.




# ಕನ್ನಡ ಭಾಷೆ ಸಾರ್ವಭೌಮತೆ ಪಡೆಯುವಲ್ಲಿ ವಿಫಲ: ರಮೇಶ್ ಬೇಸರ

**ಶಿಡ್ಲಘಟ್ಟ:** ಕನ್ನಡ ರಾಜ್ಯ ಸ್ಥಾಪನೆಯಾಗಿ ಸುಮಾರು 70 ವರ್ಷಗಳಾದರೂ ನೆಲ, ಜಲ, ನುಡಿ, ರಕ್ಷಣೆಗಾಗಿ ಇಂದಿಗೂ ಸಹ ಹೋರಾಟ ಮಾಡಬೇಕಾದ ಸ್ಥಿತಿ ನಿರ್ಮಾಣವಾಗಿರುವುದು ಶೋಚನೀಯ, ಕರ್ನಾಟಕ ರಾಜ್ಯ ರಚನೆಯಾದರು ಕನ್ನಡ ಭಾಷೆ ಸಾರ್ವಭೌಮತೆಯನ್ನು ಪಡೆಯಲು ವಿಫಲವಾಯಿತು ಎಂದು ಸಮ್ಮೇಳನಾಧ್ಯಕ್ಷ ರೂಪಸಿ ರಮೇಶ್ ಬೇಸರ ವ್ಯಕ್ತಪಡಿಸಿದರು.

ನಗರದ ವಾಸವಿ ಶಾಲೆಯ ಆವರಣದಲ್ಲಿ 10ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಸರ್ವಾದ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ಕನ್ನಡ ಭಾಷಾ ಕಲಿಕೆ ಮನೆಯಿಂದಲೇ ಆರಂಭವಾಗಬೇಕು ಶಾಲೆಯಲ್ಲಿ ಮಕ್ಕಳು ಇಂಗ್ಲೀಷ್ ಕಲಿತರೂ ಸಹ ಮನೆಯೇ ಮೊದಲ ಪಾಠಶಾಲೆ ಎಂಬಂತೆ ಮನೆಯಲ್ಲಿ ಎಲ್ಲಾ ಮಾತುಕತೆ ,ವ್ಯವಹಾರಗಳೂ ಕನ್ನಡ ಭಾಷೆಯಲ್ಲೇ ನಡೆದಲ್ಲಿ ಬಹುತೇಕ



ಸಮಸ್ಯೆಗಳು ದೂರ ಸರಿಯುವುದರಲ್ಲಿ ಸಂಶಯವಿಲ್ಲ ಎಂದು ಹೇಳಿದರು.

ಶಾಸಕರಾದ ಬಿ.ಎನ್.ರವಿಕುಮಾರ್ ಮಾತನಾಡಿ, ಜಗತ್ತಿನಲ್ಲಿ ನಮ್ಮ ದೇಶ, ದೇಶದಲ್ಲಿ ನಮ್ಮ ರಾಜ್ಯ ಸುಭಿಕ್ಷವಾಗಿದೆ ಈ ನಾಡಿನಲ್ಲಿ ಹುಟ್ಟಿದ ಅನೇಕ ಮಹನೀಯರು ನಾಡನ್ನು ಕಟ್ಟಿ ಬೆಳೆಸಲು ಬದುಕನ್ನು ಅರ್ಪಿಸಿದ್ದಾರೆ ವರನಟ ಡಾ.ರಾಜ್‌ಕುಮಾರ್ ಹೇಳಿದಂತೆ ಹುಟ್ಟಿದರೆ ಈ ನಾಡಿನಲ್ಲಿ ಹುಟ್ಟಬೇಕೆನ್ನುವ ಮಾತು ಅಕ್ಷರಃ ಸತ್ಯ ಎಂದರು.



ಈ ರಾಜ್ಯದಲ್ಲಿ ಹುಟ್ಟಿದ ನಾವು ಪುಣ್ಯವಂತರು, ಭಾಗ್ಯವಂತರು, ನಮ್ಮ ಮುಂದಿನ ಪೀಳಿಗೆಗೆ ಉತ್ತಮ ಬದುಕನ್ನು ನಾವು ಕೊಡುಗೆಯಾಗಿ ನೀಡಬೇಕು ಎಂದು ಮನವಿ ಮಾಡಿದರು.

ಈ ನಾಡಿನಲ್ಲಿ ಹುಟ್ಟಿದ ಪ್ರತಿಯೊಬ್ಬರೂ ಕನ್ನಡ ನಾಡು ನುಡಿ ಭಾಷೆ ನೆಲ ಜಲದ ಮೇಲೆ ಅಭಿಮಾನ ಮೂಡಿಸಿಕೊಂಡು ಕನ್ನಡ ನಾಡನ್ನು, ಕನ್ನಡಿಗರ ಬದುಕನ್ನು ಕಟ್ಟುವಂತ ಕೆಲಸ ಮಾಡಬೇಕು, ಅದಕ್ಕೆ ಇಂತಹ ಸಮ್ಮೇಳನಗಳು ಪೂರಕವಾಗಲಿ ಎಂದು ಆಶಿಸಿದರು.

ಈ ನೆಲದಲ್ಲಿ ಹುಟ್ಟಿದ ನಮ್ಮೆಲ್ಲರ ಮೇಲೆ ಈ ನಾಡಿನ ನೀರು ಗಾಳಿ ನೆಲದ ಋಣ ಇದೆ ಅದನ್ನು ತೀರಿಸುವ ನಿಟ್ಟಿನಲ್ಲಿ ನಾವು ಈ ನೆಲದ ಸಂಸ್ಕೃತಿ ಆಚಾರ ವಿಚಾರವನ್ನು ಗೌರವಿಸಬೇಕಿದೆ ಎಂದರು.

ಮುಖ್ಯ ಭಾಷಣಗಾರರಾದ ಗುಡಿಬಂಡೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕ ಡಾ.ನಯಾಜ್ ಅಹ್ಮದ್ ಮಾತನಾಡಿ, ಸಾಹಿತ್ಯ ಮತ್ತು ಶ್ರಮಿಕರ ಬೆವರು ಒಂದಾಗಬೇಕು, ಸಾಹಿತಿಗಳ ಸಾಹಿತ್ಯವು ಶ್ರಮಿಕರ ಬೆವರ ಹನಿಗಳಿಂದ ಬರೆಯುಂತಾಗಬೇಕು ಅಂತಹ ಸಾಹಿತ್ಯಕ್ಕೆ ಈ ನಾಡನ್ನು ಕಟ್ಟುವ ಶಕ್ತಿ ಇರಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಬಿ.ಎನ್.ಸ್ವಾಮಿ, ಇಒ ಹೇಮಾವತಿ, ಬಿಇಒ ನರೇಂದ್ರಕುಮಾರ್,ನಗರಸಭೆ ಆಯುಕ್ತ ಮಂಜುನಾಥ್,ನಿಕಟಪೂರ್ವ ಸಮ್ಮೇಳನಾಧ್ಯಕ್ಷ ಭಕ್ತರಹಳ್ಳಿ ಸಂತೆ ನಾರಾಯಣಸ್ವಾಮಿ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೆ.ಎನ್.ಸುಬ್ಬಾರೆಡ್ಡಿ, ನಗರಸಭೆ ಅದ್ಯಕ್ಷ ಎಂ.ವಿ.ವೆಂಕಟಸ್ವಾಮಿ, ಬಿಜೆಪಿ ಮುಖಂಡ ಸೀಕಲ್ ಆನಂದಗೌಡ, ತಾ.ಪಂ.ಮಾಜಿ ಅಧ್ಯಕ್ಷ ಅಪ್ಪೇಗೌಡನಹಳ್ಳಿ ಕೆ.ಲಕ್ಷ್ಮಿನಾರಾಯಣರೆಡ್ಡಿ, ತಾದೂರು ರಘು,ಮೇಲೂರು ಮಂಜುನಾಥ್ ,ಕಸಾಪ ಜಿಲ್ಲಾಧ್ಯಕ್ಷ ಪ್ರೊ.ಕೋಡಿರಂಗಪ್ಪ, ಮಾಜಿ ಅಧ್ಯಕ್ಷ ಎಸ್.ವಿ.ನಾಗರಾಜ್ ರಾವ್ ,ಕಸಾಪ ತಾಲ್ಲೂಕು ಅಧ್ಯಕ್ಷ ಪಟೇಲ್ ನಾರಾಯಣಸ್ವಾಮಿ,ಮಾಜಿ ಅಧ್ಯಕ್ಷರಾದ ವಿ.ಕೃಷ್ಣ, ಬಿ.ಆರ್. ಅನಂತಕೃಷ್ಣ,ಎ.ಎಂ.ತ್ಯಾಗರಾಜ್, ಕಸಾಪ ಪದಾದಿಕಾರಿಗಳಾದ ಸುಂದರಾಚಾರಿ,ಈಧರೆ ಪ್ರಕಾಶ್ ,ಟಿ.ಟಿ.ನರಸಿಂಹಪ್ಪ,ಖಾಸಗಿ ಶಾಲೆಗಳ ಸಂಘದ ಅದ್ಯಕ್ಷರಾದ ವಿಸ್ಡಂ ನಾಗರಾಜ್ ಮುಂತಾದವರು ಹಾಜರಿದ್ದರು.

ಹತ್ತನೇ ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನವನ್ನು ವಿಜೃಂಭಣೆಯಿಂದ ಆಚರಿಸಲಾಯಿತು,ನಗರದ ಶ್ರೀ ವಾಸವಿ ವಿದ್ಯಾಸಂಸ್ಥೆಯ ಆವರಣದಲ್ಲಿ ಬೆಳಿಗ್ಗೆ ತಹಸೀಲ್ದಾರ್ ಬಿ.ಎನ್.ಸ್ವಾಮಿ ರಾಷ್ಟ್ರ ಧ್ವಜಾರೋಹಣ, ನಗರಸಭೆ ಅಧ್ಯಕ್ಷ ವೆಂಕಟಸ್ವಾಮಿ ನಾಡಧ್ವಜಾರೋಹಣ, ಕಸಾಪ ತಾಲ್ಲೂಕು ಅಧ್ಯಕ್ಷ ಪಟೇಲ್ ನಾರಾಯಣಸ್ವಾಮಿ ಪರಿಷತ್ತಿನ ಧ್ವಜಾರೋಹಣ ಮಾಡುವುದರೊಂದಿಗೆ ಸಮ್ಮೇಳನ ಪ್ರಾರಂಭವಾಯಿತು. ಸಮ್ಮೇಳನಾಧ್ಯಕ್ಷ ರೂಪಸಿ ರಮೇಶ್ ಅವರನ್ನು ತೆರೆದ ಜೀಪಿನಲ್ಲಿ ಸಮ್ಮೇಳನಕ್ಕೆ ಕರೆತರುವ ಮೆರವಣಿಗೆಗೆ ಶಾಸಕ ಬಿ.ಎನ್. ರವಿಕುಮಾರ್ ಚಾಲನೆ ನೀಡಿದರು.

ಎಲ್ಲೆಂದರಲ್ಲಿ ಕನ್ನಡ ನಾಡ ಧ್ವಜಗಳು, ಕಿವಿಗೆ ಬೀಳುತ್ತಿದ್ದ ಕನ್ನಡ ನಾಡು ನುಡಿ ಜಲದ ಹಿರಿಮೆ ಸಾರುವ ಕನ್ನಡ ಗೀತೆಗಳು,ಕಳಶ ಹೊತ್ತ ಮುತ್ತೈದೆಯರ ಸಾಲು, ನಾದಸ್ವರ ಇನ್ನಿತರೆ ಜಾನಪದ ಕಲಾತಂಡದೊಂದಿಗೆ ಸಾಗಿದ ತಾಯಿ ಭುವನೇಶ್ವರಿ ಹಾಗೂ ಸಮ್ಮೇಳನಾಧ್ಯಕ್ಷರ ಮೆರವಣಿಗೆ ರೇಷ್ಮೆನಗರಿ ನಗರದಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್‌ನಿಂದ ನಡೆದ 10 ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ತಾಯಿ ಭುವನೇಶ್ವರಿ ಹಾಗೂ ಸಮ್ಮೇಳನಾಧ್ಯಕ್ಷರ ಮೆರವಣಿಗೆಯು ನಗರದ ಸಲ್ಲಾಪುರಮ್ಮ ದೇವಾಲಯದಿಂದ ಕೋಟೆ ವೃತ್ತದ ಮೂಲಕ ವಾಸವಿ ಶಾಲೆವರೆಗೂ ಸಾಗಿ ಬಂದ ಕನ್ನಡ ಸಮ್ಮೇಳನದ ವೈಭವವನ್ನು ಭಾಷಾಭಿಮಾನಿಗಳು ಕಣ್ತುಂಬಿಕೊಂಡರು. ಸರ್ವ ಸಮ್ಮೇಳನಾಧ್ಯಕ್ಷ ರೂಪಸಿ ರಮೇಶ್ ಅವರನ್ನು ತೆರೆದ ವಾಹನದಲ್ಲಿ ಹೊತ್ತು ಸಾಗಿದ ಮೆರವಣಿಗೆಯಲ್ಲಿ ನಗರದ ಹಲವು ಶಾಲಾ ಮಕ್ಕಳು, ಬ್ಯಾಂಡ್‌ಸೆಟ್ ತಂಡ, ಮಹಿಳಾ ಸ್ವ ಸಹಾಯ ಸಂಘಗಳ ಸದಸ್ಯರು ಮೆರವಣಿಗೆಗೆ ಇನ್ನಷ್ಟು ಮೆರಗು ನೀಡಿದು.

ಶ್ರೀಭುವನೇಶ್ವರಿ, ಸರ್.ಎಂ.ವಿಶ್ವೇಶ್ವರಯ್ಯ ಹಾಗೂ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಭಾವಚಿತ್ರಗಳನ್ನು ಅನಾವರಣಗೊಳಿಸಲಾಯಿತು.

ನಾನಾ ಕ್ಷೇತ್ರಗಳ ಸಾಧಕರಿಗೆ ಸನ್ಮಾನ ಮಾಡಲಾಯಿತು. ನಿವೃತ್ತ ಶಿಕ್ಷಕ ಶ್ಯಾಮಸುಂದರ್ ಅವರ ಶ್ಯಾಮಲಹರಿ ಕವನ ಸಂಕಲನವನ್ನು ಬಿಡುಗಡೆ ಮಾಡಲಾಯಿತು. ನಿಕಟಪೂರ್ವ ಸಮ್ಮೇಳನಾಧ್ಯಕ್ಷ ಸಂತೆ ನಾರಾಯಣಸ್ವಾಮಿ ಅವರು ಸಮ್ಮೇಳನಾಧ್ಯಕ್ಷ ರೂಪಸಿ ರಮೇಶ್ ಅವರಿಗೆ ಪರಿಷತ್ ಧ್ವಜ ಹಸ್ತಾಂತರ ಮಾಡಿದರು.

ಸಮ್ಮೇಳನದಲ್ಲಿ ಸಭಿಕರ ಕೊರತೆ ಎದ್ದು ಕಾಣುತ್ತಿತ್ತು, ಹಾಕಿದ್ದ ಚೇರುಗಳಲ್ಲಿ ಅರ್ಧಕ್ಕೆ ಅರ್ಧದಷ್ಟು ಖಾಲಿ ಇದ್ದವು,ಶಾಸಕರು ಉದ್ಘಾಟನಾ ಭಾಷಣ ಮಾಡಿ ತುರ್ತು ಕಾರ್ಯನಿಮಿತ್ತ ಕಾರ್ಯಕ್ರಮದಿಂದ ಹೊರಡುತ್ತಿದ್ದಂತೆ ಸಭಿಕರ ಸಂಖ್ಯೆ ಇನ್ನಷ್ಟು ಕಡಿಮೆ ಆಯಿತು. ಕನ್ನಡ ಸಾಹಿತ್ಯ ಪರಿಷತ್‌ನ ಪದಾಕಾರಿಗಳು, ಒಂದಷ್ಟು ಸಂಘ ಸಂಸ್ಥೆಗಳ ಪದಾಕಾರಿಗಳು, ವಾಸವಿ ಶಾಲಾ ಸಿಬ್ಬಂದಿ ಹೊರತುಪಡಿಸಿ ಮಿಕ್ಕವರ ಹಾಜರಿಯ ಕೊರತೆ ಎದ್ದು ಕಾಣುತ್ತಿತ್ತು.

# ಭಾರತ–ಜಪಾನ್ ಜಂಟಿ ಸಮರಾಭ್ಯಾಸ ಫೆ.25ರಿಂದ

**ನವದೆಹಲಿ:** ಭಾರತ ಮತ್ತು ಜಪಾನ್ ನಡುವಿನ 'ಧರ್ಮ ಗಾರ್ಡಿಯನ್' ಆರನೇ ಆವೃತ್ತಿಯ ಜಂಟಿ ಸಮರಾಭ್ಯಾಸವು ಫೆಬ್ರವರಿ 25 ರಿಂದ ಮಾರ್ಚ್ 9 ರವರೆಗೆ ಜಪಾನ್ ನ ಮೌಂಟ್ ಫ್ಯೂಜಿಯಲ್ಲಿ ನಡೆಯಲಿದೆ ಎಂದು ಭಾರತೀಯ ಸೇನೆ ಭಾನುವಾರ ತಿಳಿಸಿದೆ.

ವಿಶ್ವಸಂಸ್ಥೆಯ ಸೂಚನೆಯ ಅಡಿಯಲ್ಲಿ ಜಂಟಿ ನಗರ ಯುದ್ಧ ಮತ್ತು ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳ ಸಂದರ್ಭಗಳಲ್ಲಿ ಉಭಯ ಪಡೆಗಳ ನಡುವೆ ಪರಸ್ಪರ ಕಾರ್ಯಸಾಧ್ಯತೆಯನ್ನು ಹೆಚ್ಚಿಸುವ ಗುರಿಯನ್ನು ಈ ಸಮರಾಭ್ಯಾಸ ಹೊಂದಿದೆ ಎಂದು ರಕ್ಷಣಾ ಸಚಿವಾಲಯದ (ಸೇನೆ) ಐಎಚ್‌ಕ್ಯೂನ ಸಾರ್ವಜನಿಕ ಮಾಹಿತಿಯ ಹೆಚ್ಚುವರಿ ಮಹಾನಿರ್ದೇಶಕರು ಸಾಮಾಜಿಕ ಮಾಧ್ಯಮ ಪೋಸ್ಟ್?ನಲ್ಲಿ ತಿಳಿಸಿದ್ದಾರೆ.

"2024 ರ ಅಕ್ಟೋಬರ್ 14 ರಿಂದ 17 ರವರೆಗೆ ಸೇನಾ ಮುಖ್ಯಸ್ಥರ (ಸಿಒಎಎಸ್) ಜಪಾನ್ ಭೇಟಿಯ ಸಮಯದಲ್ಲಿ ಸಾಧಿಸಲಾದ ಪ್ರಗತಿಯನ್ನು ಆಧರಿಸಿ, ಧರ್ಮ ಗಾರ್ಡಿಯನ್ 2025 ಸಮರಾಭ್ಯಾಸವು ಭಾರತ ಮತ್ತು ಜಪಾನ್ ನಡುವಿನ ದ್ವಿಪಕ್ಷೀಯ ರಕ್ಷಣಾ



ಸಹಕಾರವನ್ನು ಮತ್ತಷ್ಟು ಬಲಪಡಿಸಲಿದೆ" ಎಂದು ಅದು ಹೇಳಿದೆ.

**ಸೈಕ್ಲೋನ್ ಸಮರಾಭ್ಯಾಸ:** ಇದಕ್ಕೂ ಮುನ್ನ ಫೆಬ್ರವರಿ 11 ರಂದು ಭಾರತ ಮತ್ತು ಈಜಿಪ್ಟ್?ನ ವಿಶೇಷ ಪಡೆಗಳು ರಾಜಸ್ಥಾನದ ಮಹಾಜನ್ ಫೀಲ್ಡ್ ಫೈರಿಂಗ್ ರೇಂಜ್?ಗಳಲ್ಲಿ 'ಸೈಕ್ಲೋನ್ 3' ಸಮರಾಭ್ಯಾಸವನ್ನು ಪ್ರಾರಂಭಿಸಿವೆ. ಸಮರಾಭ್ಯಾಸ ಫೆಬ್ರವರಿ 23 ರಂದು ಕೊನೆಗೊಳ್ಳಲಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

'ಸೈಕ್ಲೋನ್' ಸಮರಾಭ್ಯಾಸವು ಭಾರತ ಮತ್ತು ಈಜಿಪ್ಟ್‌ನಲ್ಲಿ ಪರ್ಯಾಯವಾಗಿ ನಡೆಸಲಾಗುವ ವಾರ್ಷಿಕ ಕಾರ್ಯಕ್ರಮವಾಗಿದೆ. ಈ ಹಿಂದೆ ಈ ಯೋಜನೆಯಡಿಯ ಸಮರಾಭ್ಯಾಸವು 2024 ರ ಜನವರಿಯಲ್ಲಿ ಈಜಿಪ್ಟ್?ನಲ್ಲಿ ನಡೆದಿತ್ತು" ಎಂದು ಅಧಿಕಾರಿ ಹೇಳಿದರು.

25 ಜನ ಸಿಬ್ಬಂದಿಯನ್ನು ಒಳಗೊಂಡ ಭಾರತೀಯ ತುಕಡಿಯನ್ನು ಎರಡು ವಿಶೇಷ ಪಡೆಗಳ ಬೆಟಾಲಿಯನ್ ಗಳ ಸೈನಿಕರು ಪ್ರತಿನಿಧಿಸುತ್ತಿದ್ದಾರೆ. 25 ಸಿಬ್ಬಂದಿಯನ್ನು ಒಳಗೊಂಡ ಈಜಿಪ್ಟ್ ತುಕಡಿಯನ್ನು ವಿಶೇಷ ಪಡೆಗಳ ಗುಂಪು ಮತ್ತು ಈಜಿಪ್ಟ್ ವಿಶೇಷ ಪಡೆಗಳ ಕಾರ್ಯಪಡೆ ಪ್ರತಿನಿಧಿಸುತ್ತಿದೆ.

ವಿಶೇಷ ಕಾರ್ಯಾಚರಣೆ ತಂತ್ರಗಳ ಪರಸ್ಪರ ಕಾರ್ಯಸಾಧ್ಯತೆ, ಜಂಟಿ ಕಾರ್ಯಾಚರಣೆ ಮತ್ತು ಪರಸ್ಪರ ಮಾಹಿತಿ ವಿನಿಮಯವನ್ನು ಹೆಚ್ಚಿಸುವ ಮೂಲಕ ಉಭಯ ದೇಶಗಳ ನಡುವಿನ ಮಿಲಿಟರಿ ಸಂಬಂಧವನ್ನು ಉತ್ತೇಜಿಸುವ ಗುರಿಯನ್ನು ಈ ಸಮರಾಭ್ಯಾಸ ಹೊಂದಿದೆ ಎಂದು ಅಧಿಕಾರಿ ಹೇಳಿದರು.

ಮರುಭೂಮಿ ಮತ್ತು ಅರೆ ಮರುಭೂಮಿ ಭೂಪ್ರದೇಶದಲ್ಲಿ ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಾಗಿ ಯುದ್ಧತಂತ್ರದ ಅಭ್ಯಾಸಗಳನ್ನು ಪೂರ್ವಾಭ್ಯಾಸ ಮಾಡಲು 48 ಗಂಟೆಗಳ ಸುದೀರ್ಘ ಮೌಲ್ಯಮಾಪನದೊಂದಿಗೆ ಈ ಸಮರಾಭ್ಯಾಸವು ಕೊನೆಗೊಳ್ಳಲಿದೆ. ಈ ಸಮರಾಭ್ಯಾಸವು ಸ್ಥಳೀಯ ಮಿಲಿಟರಿ ಉಪಕರಣಗಳ ಪ್ರದರ್ಶನ ಮತ್ತು ಈಜಿಪ್ಟ್ ಕಡೆಯ ರಕ್ಷಣಾ ಉತ್ಪಾದನಾ ಉದ್ಯಮದ ಅವಲೋಕನವನ್ನು ಸಹ ಒಳಗೊಂಡಿರುತ್ತದೆ ಎಂದು ಅವರು ತಿಳಿಸಿದರು.

# 112 ಮಂದಿ ಭಾರತೀಯರ 3ನೇ ಬ್ಯಾಚ್ ಅಮೃತಸರಕ್ಕೆ ಆಗಮನ



**ಅಮೃತಸರ:** ಅಮೆರಿಕದಿಂದ ಗಡೀಪಾರಾದ ಅಕ್ರಮ ವಲಸಿಗರನ್ನು ಹೊತ್ತ ಮತ್ತೊಂದು ಸೇನಾ ವಿಮಾನ ಕಳೆದ ರಾತ್ರಿ ಅಮೃತಸರದ ಶ್ರೀ ಗುರುರಾಮ್ ದಾಸ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಂದಿಳಿಯಿತು. ಗಖ ಏರ್‌ಫೋರ್ಸ್ ಅ–17೦ ಗ್ಲೋಬ್ ಮಾಸ್ಟರ್ ವಿಮಾನದಲ್ಲಿ 112 ಭಾರತೀಯರಿದ್ದರು.

ಗಡೀಪಾರಾದವರಲ್ಲಿ ಹರಿಯಾಣದ 44, ಪಂಜಾಬ್‌ನ 31, ಗುಜರಾತ್‌ನ 33, ಉತ್ತರ ಪ್ರದೇಶದ ಇಬ್ಬರು, ಹಿಮಾಚಲ ಪ್ರದೇಶದಿಂದ ಓರ್ವರು ಮತ್ತು ಉತ್ತರಾಖಂಡದ ಓರ್ವ ವ್ಯಕ್ತಿ ಇದ್ದಾರೆ. ಇದುವರೆಗೆ ಒಟ್ಟು 335 ಭಾರತೀಯರನ್ನು ಗಡೀಪಾರು ಮಾಡಲಾಗಿದೆ.

ಈ ಕುರಿತು ಮಾಹಿತಿ ನೀಡಿದ ಅಮೃತಸರ ಡೆಪ್ಯುಟಿ ಕಮಿಷನರ್ ಸಾಕ್ಷಿ ಸಾಹ್ನಿ, "ಗಡೀಪಾರು ಮಾಡಲಾದ ಭಾರತೀಯರು ಕ್ಷೇಮವಾಗಿದ್ದಾರೆ. ಆಹಾರ ನೀಡಿದ ಬಳಿಕ ಅವರ ಮನೆಗಳಿಗೆ ಕಳುಹಿಸಲಾಗುವುದು. ನಂತರವೇ ಮುಂದಿನ ಕ್ರಮ ತೆಗೆದುಕೊಳ್ಳಲಾಗುತ್ತದೆ. ಈ ಪೈಕಿ ಮಹಿಳೆಯರು ಮತ್ತು ಕೆಲವು ಮಕ್ಕಳಿದ್ದಾರೆ. ಪಂಜಾಬ್ ಮತ್ತು ಹರಿಯಾಣದ ಜನರನ್ನು ರಸ್ತೆ ಮೂಲಕ ಕಳುಹಿಸಲಾಗುವುದು. ಉಳಿದವರನ್ನು ದೇಶೀಯ ವಿಮಾನದಲ್ಲಿ ದೆಹಲಿಗೆ ಕಳುಹಿಸಲಾಗುವುದು" ಎಂದು ಮಾಹಿತಿ ನೀಡಿದರು.

# ಕೊನೆಗೂ ಬೋನಿಗೆ ಬಿದ್ದ ಚಿರತೆ

**ಕುಕನೂರು:** ತಾಲೂಕಿನ ಗವರಾಳ್ ಗ್ರಾಮದ ಸುತ್ತ ಮುತ್ತಲು ಪ್ರದೇಶದಲ್ಲಿ ಸಾರ್ವಜನಿಕರಿಗೆ ಭಯ ಹುಟ್ಟಿಸಿದ್ದ ಚಿರತೆಯನ್ನು ಅರಣ್ಯ ಇಲಾಖೆ ಅಧಿಕಾರಿಗಳು ಬೋನಿಗೆ ಬೀಳಿಸುವಲ್ಲಿ ಕೊನೆಗೂ ಯಶಸ್ವಿಯಾಗಿದ್ದಾರೆ.

ಸುಮಾರು ಎರಡು ವರ್ಷಗಳಿಂದ ಇಲ್ಲಿನ ಗವರಾಳ್ ಸೀಮೆಯಲ್ಲಿ ಎರಡು ಚಿರತೆಗಳು ಕಾಣಿಸಿಕೊಂಡಿದ್ದವು. ಚಿರತೆ ಹಾವಳಿಯಿಂದ ಸಾರ್ವಜನಿಕರು ಭಯದಲ್ಲಿ ಓಡಾಡುತ್ತಿದ್ದರು. ಗವರಾಳ್ ಗ್ರಾಮದ ಸುತ್ತಲಿನ ಕಲ್ಲುಗಣಿ ಪ್ರದೇಶ ಇದ್ದುದರಿಂದ ಚಿರತೆ ಕಣ್ಣಿಗೆ ಕಂಡಿದ್ದರೂ ಕೂಡಾ ಹಲವು ಬಾರಿ ಅರಣ್ಯ



ಇಲಾಖೆ ಅಧಿಕಾರಿಗಳು ಹಿಡಿಯಲು ಪ್ರಯತ್ನಿಸಿದ್ದರು ಬೋನಿಗೆ ಬಿದ್ದಿರಲಿಲ್ಲ. ಅರಣ್ಯ ಇಲಾಖೆಯವರು ಚಿರತೆ ಹಿಡಿಯಲು ಎರಡು ಮೂರು ಸ್ಥಳಗಳಲ್ಲಿ ಬೋನಗಳನ್ನು ಇಟ್ಟಿದ್ದರು. ಅದರಲ್ಲಿ ಒಂದು ಚಿರತೆ ಇಂದು ಸೋಮವಾರ ಬೆಳಗಿನ ಜಾವ ಬೋನಿಗೆ ಬಿದ್ದಿದೆ ಎಂದು ಉಪ ವಲಯ ಅರಣ್ಯಾಧಿಕಾರಿ ಅಂದಪ್ಪ ಕುರಿ ತಿಳಿಸಿದರು.

# ಕಡಿಮೆ ಆಲ್ಕೋಹಾಲ್‌ಯುಕ್ತ ಬಾರ್ ತೆರೆಯಲು ನಿರ್ಧಾರ

**ಭೋಪಾಲ್:** ಇದೇ ಮೊದಲ ಬಾರಿಗೆ ಮಧ್ಯ ಪ್ರದೇಶದಲ್ಲಿ ಕಡಿಮೆ ಆಲ್ಕೋಹಾಲ್‌ಯುಕ್ತ ಪಾನೀಯಗಳ ಬಾರ್‌ಗಳು ತಲೆ ಎತ್ತಲು ಸಜ್ಜಾಗಿವೆ. ಹೊಸ ಆರ್ಥಿಕ ವರ್ಷದಿಂದ (ಏಪ್ರಿಲ್ 1) ಹೊಸ ಮದ್ಯ ನೀತಿ ಅಡಿಯಲ್ಲಿ ಇವುಗಳನ್ನು ಕಾಣಬಹುದು. ಇದೇ ವೇಳೆ, 17 ಪವಿತ್ರ ನಗರಗಳೂ ಸೇರಿದಂತೆ 19 ಸ್ಥಳಗಳಲ್ಲಿ ಮದ್ಯ ಮಾರಾಟಕ್ಕೆ ಸಂಪೂರ್ಣ ನಿರ್ಬಂಧ ವಿಧಿಸಲಾಗಿದೆ.

ಭಾನುವಾರ ಹೊಸ ಮದ್ಯ ನೀತಿಯನ್ನು ಬಿಡುಗಡೆ ಮಾಡಿದ ಮಧ್ಯ ಪ್ರದೇಶ ಸರ್ಕಾರ, ಕಡಿಮೆ ಆಲ್ಕೋಹಾಲ್‌ಯುಕ್ತ ಪಾನೀಯಗಳ ಬಾರ್?ಗಳಲ್ಲಿ ಕೇವಲ ಬಿಯರ್, ವೈನ್ ಮತ್ತು ಗರಿಷ್ಠ ಶೇ.10ರಷ್ಟು ವಿ/ವಿ ಆಲ್ಕೋಹಾಲ್ ಅಂಶ ಹೊಂದಿರುವ ರೆಡಿ–ಟು ಡ್ರಿಂಕ್ ಆಲ್ಕೋಹಾಲಿಕ್ ಪಾನೀಯಗಳನ್ನು ಮಾರಾಟ ಮಾಡಲು ಅನುಮತಿಸಿದೆ. ಇಂತಹ ಬಾರ್‌ಗಳಲ್ಲಿ ಹೆಚ್ಚಿನ ಆಲ್ಕೋಹಾಲ್‌ಯುಕ್ತ ಮದ್ಯಗಳ ಮಾರಾಟವನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ.

ಸದ್ಯ ಮಧ್ಯ ಪ್ರದೇಶದೆಲ್ಲೆಡೆ 460ರಿಂದ 470 ಲಿಕ್ಕರ್, ಬಿಯರ್ ಬಾರ್‌ಗಳಿವೆ. ಈ ಹೊಸ ಬಾರ್‌ಗಳಿಂದಾಗಿ ಈ ಸಂಖ್ಯೆ ಮತ್ತಷ್ಟು ಹೆಚ್ಚಲಿದೆ ಎಂದು ಅಬಕಾರಿ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಮದ್ಯ ಮಾರಾಟ ನಿರ್ಬಂಧದ ಅಡಿಯಲ್ಲಿ ಏಪ್ರಿಲ್ 1ರಿಂದ 17 ಪವಿತ್ರ ನಗರಗಳು ಸೇರಿದಂತೆ 19 ಸ್ಥಳಗಳಲ್ಲಿ 47 ಮದ್ಯದಂಗಡಿಯನ್ನು ಮುಚ್ಚಲಾಗುವುದು. ಇವುಗಳಲ್ಲಿ ಭಾರತ ನಿರ್ಮಿತ ವಿದೇಶಿ ಮದ್ಯ ಮತ್ತು ಕಂಟ್ರಿ ಲಿಕ್ಕರ್ ಅಂಗಡಿಗಳೂ ಇವೆ. ಉಜ್ಜೈನಿ, ಓಂಕಾರೇಶ್ವರ, ಮಹೇಶ್ವರ್, ಮಂಡ್ಲೇಶ್ವರ್, ಓರ್ಚಾ, ಮೈಹಾರ್, ಚಿತ್ರಕೂಟ, ದಾತಿಯಾ, ಅಮರಕಂಟಕ್ ಮತ್ತು ಸಲ್ಕನ್‌ಪುರನಂತಹ ಕೆಲವು ಪುಣ್ಯ ಕ್ಷೇತ್ರಗಳಲ್ಲಿ ಮಾರಾಟವನ್ನು ಬಂದ್



ಮಾಡಲಾಗಿದೆ.

ಈ ಕುರಿತು ಮಾತನಾಡಿರುವ ಸಿಎಂ ಮೋಹನ್ ಯಾದವ್, "ಜನವರಿ 23ರ ಬಳಿಕ ಹೊಸ ನೀತಿಗೆ ಅಂಕಿತ ಸಿಕ್ಕ ಬಳಿಕ ಮದ್ಯ ಮಾರಾಟ ಬಂದ್ ಮಾಡಲಾಗುವುದು. ಇದರಿಂದಾಗಿ ರಾಜ್ಯ ಸರ್ಕಾರ 450 ಕೋಟಿ ರೂ ಅಬಕಾರಿ ಆದಾಯ ನಷ್ಟ ಅನುಭವಿಸಲಿದೆ. ಹೊಸ ಅಬಕಾರಿ ನೀತಿಯ ಹಿನ್ನೆಲೆಯಲ್ಲಿ ಮುಂದಿನ ಆರ್ಥಿಕ ವರ್ಷದಿಂದ ಲಿಕ್ಕರ್ ಶಾಪ್ ನವೀಕರಣ ಶುಲ್ಕವನ್ನು ಶೇ.20ರಷ್ಟು ಹೆಚ್ಚಿಸಲಾಗುವುದು" ಎಂದು ಹೇಳಿದ್ದಾರೆ.

ಮದ್ಯ ನಿಷೇಧದ ಹಿನ್ನೆಲೆಯಲ್ಲಿ ನಿರ್ಬಂಧಿತ ಸ್ಥಳಗಳಲ್ಲಿ ಹೊರಗಿನಿಂದ ಮದ್ಯ ತಂದು ಕುಡಿಯುವುದಕ್ಕೆ ಯಾವುದೇ ದಂಡವನ್ನು ವಿಧಿಸಿಲ್ಲ. ಈ ರೀತಿಯ ಯಾವುದೇ ನಿರ್ಬಂಧ ಕಾನೂನನ್ನು ಜಾರಿಗೆ ತಂದಿಲ್ಲ. ಬಾರ್‌ನಲ್ಲಿ ಮದ್ಯ ಮಾರಾಟ ಮತ್ತು ಸೇವನೆಗೆ ಅವಕಾಶವಿಲ್ಲ. ಆದರೆ, ಯಾವುದೇ ವೈಯಕ್ತಿಕ ನಿರ್ಬಂಧವನ್ನು ವಿಧಿಸದ ಹಿನ್ನೆಲೆಯಲ್ಲಿ ಜನರು ವೈಯಕ್ತಿಕವಾಗಿ ಮದ್ಯ ಸೇವಿಸಬಹುದು. ಇದರ ಹೊರತು ಜೊತೆಗೂಡಿ ಸೇವಿಸುವಂತಿಲ್ಲ. ಹೆರಿಟೇಜ್ ಲಿಕ್ಕರ್ ಮತ್ತು ವೈನ್ ಉತ್ಪಾದನೆ ನೀತಿಯಲ್ಲಿ ಯಾವುದೇ ಬದಲಾವಣೆಯಿಲ್ಲ. ಹೆರಿಟೇಜ್ ಲಿಕ್ಕರ್ ಉತ್ಪಾದನೆಯಲ್ಲಿ ವ್ಯಾಟ್ ವಿನಾಯಿತಿ ಇದೆ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

# ಪ್ರತ್ಯೇಕ ಅಪಘಾತ: ಐವರ ಸಾವು

ಫತೇಪುರ/ಅಲಿಗಢ: ಉತ್ತರ ಪ್ರದೇಶದ ಫತೇಪುರ ಮತ್ತು ಅಲಿಗಢದಲ್ಲಿ ನಡೆದ ಎರಡು ಪ್ರತ್ಯೇಕ ಅಪಘಾತಗಳಲ್ಲಿ ಐವರು ಸಾವನ್ನಪ್ಪಿದ್ದಾರೆ. ಮೃತರೆಲ್ಲರೂ ಮಹಾ ಕುಂಭಮೇಳದ ಯಾತ್ರಿಗಳಾಗಿದ್ದರು ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಫತೇಪುರ ಘಟನೆಯಲ್ಲಿ, ಕಾನ್ಪುರ–ಪ್ರಯಾಗರಾಜ್ ಹೆದ್ದಾರಿಯ ಬಹಾಲ್ಪುರ ತಿರುವಿನಲ್ಲಿ ರಸ್ತೆಬದಿಯಲ್ಲಿ ನಿಲ್ಲಿಸಿದ್ದ ಕಾರಿಗೆ ವೇಗವಾಗಿ ಬಂದ ಎಸ್?ಯುವಿ ಡಿಕ್ಕಿ ಹೊಡೆದಿದೆ. ಪರಿಣಾಮ ಇಬ್ಬರು ಸಾವನ್ನಪ್ಪಿದ್ದು, ಇತರ 9 ಮಂದಿ ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಭಾನುವಾರ ಬೆಳಿಗ್ಗೆ 8 ಗಂಟೆ ಸುಮಾರಿಗೆ ರಾಜಸ್ಥಾನದ ಕರೌಲಿ ನಗರದಿಂದ ಮಹಾಕುಂಭ ಮೇಳಕ್ಕೆ ತೆರಳಿದ್ದ ಭಕ್ತರ ಕಾರು ಹೆದ್ದಾರಿಯ ಬದಿಯಲ್ಲಿ ನಿಂತಿತ್ತು. ಪ್ರಯಾಗರಾಜ್ ಕಡೆಗೆ ಹೋಗುತ್ತಿದ್ದ ಎಸ್?ಯುವಿ ಹಿಂದಿನಿಂದ ಬಂದು ಕಾರಿಗೆ ಡಿಕ್ಕಿ ಹೊಡೆದಿದೆ. ಅಪಘಾತದ ರಭಸಕ್ಕೆ ಕಾರು ಹೊಲಕ್ಕೆ ಪಲ್ಟಿಯಾಗಿ, ನಂತರ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದಿದೆ. ಅಪಘಾತದಲ್ಲಿ, ಕಾರು ಚಾಲಕ ಕೃಷ್ಣ ಕಾಂತ್ ಸೋನಿ (45) ಮತ್ತು ಅವರ ಅತ್ತಿಗೆ ರಾಧಾ ಸೋನಿ (58) ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ದೃಢಪಡಿಸಿದ್ದಾರೆ.

ಸುದ್ದಿ ತಿಳಿದ ಕೂಡಲೇ ಪೊಲೀಸ್ ತಂಡ ಸ್ಥಳಕ್ಕೆ ಧಾವಿಸಿ ಗಾಯಾಳುಗಳನ್ನು ಜಿಲ್ಲಾ ಆಸ್ಪತ್ರೆಗೆ ಸಾಗಿಸಿದೆ. ಎರಡೂ ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದ್ದು, ಈ ಬಗ್ಗೆ ತನಿಖೆ ಆರಂಭಿಸಲಾಗಿದೆ.

ಕಾರಿನಲ್ಲಿದ್ದ ಸುಮನ್ ದೇವಿ, ಗಿರಿರಾಜ್ ಸೋನಿ



ಮತ್ತು ಅನ್ನಾ ಸೋನಿ, ಚಾಲಕ ಹರಿ ಸಿಂಗ್ ಮೀನಾ, ಹಾಗೂ ಎಸ್‌ಯುವಿನಲ್ಲಿ ಪ್ರಯಾಣಿಸುತ್ತಿದ್ದ ಅಜ್ಮೀರ್ ನಿವಾಸಿಗಳಾದ ಬಾಲಚಂದ್ರ ಜಾಖರ್, ನರೇಶ್ ಜಾಖರ್, ಗೀತಾ ದೇವಿ, ಜ್ಯೋತಿ ಜಾಖರ್ ಮತ್ತು ಕಾಮತಾ ಜಾಖರ್ ಕೂಡ ಗಾಯಗೊಂಡವರು.

ಕಾರಿಗೆ ಬಸ್ ಡಿಕ್ಕಿ: ಅಲಿಗಢ ಘಟನೆಯಲ್ಲಿ, ಕಾರಿಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಮಹಾ ಕುಂಭಮೇಳದಿಂದ ಹಿಂದಿರುಗುತ್ತಿದ್ದ ಮೂವರು ಸಾವನ್ನಪ್ಪಿದ್ದು, ಇಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ಸ್ಥಳೀಯ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಭಾನುವಾರ ಯಮುನಾ ಎಕ್ಸ್‌ಪ್ರೆಸ್‌ವೇಯ ಟಪ್ಪಲ್ ಇಂಟರ್‌ಚೇಂಜ್ ಬಳಿ ಘಟನೆ ಸಂಭವಿಸಿದೆ. ಡಿಕ್ಕಿ ಹೊಡೆದ ಪರಿಣಾಮ ಕಾರು ನಜ್ಜುಗುಜ್ಜಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮೃತರನ್ನು ಪದಮ್ (67), ಯುದ್ಧವೀರ್ (50) ಮತ್ತು ಸವಿತಾ (65) ಎಂದು ಗುರುತಿಸಲಾಗಿದೆ. ಬಿ.ಆರ್. ಶರ್ಮಾ (71) ಮತ್ತು ರಿತು ಗುಪ್ತಾ (48) ಎಂಬವರಿಗೆ ಗಾಯಾಗಳಾಗಿದೆ. ಇವರೆಲ್ಲರೂ ಜಮ್ಮು ನಿವಾಸಿಗಳು ಎಂದು ಪೊಲೀಸರು ದೃಢಪಡಿಸಿದ್ದಾರೆ.

# ಆಂಧ್ರದಲ್ಲಿ ಜಿಬಿಎಸ್ ಸೋಂಕಿಗೆ ಇಬ್ಬರ ಸಾವು

**ಅಮರಾವತಿ:** ಗಿಲೆನ್ ಬರೆ ಸಿಂಡ್ರೋಮ್ ಕಾಯಿಲೆ (ಜಿಬಿಎಸ್)ಗೆ ಆಂಧ್ರ ಪ್ರದೇಶದಲ್ಲಿ ಇಬ್ಬರು ಸಾವನ್ನಪ್ಪಿದ್ದಾರೆ. ಕಳೆದ 10 ದಿನಗಳಲ್ಲಿ 45 ವರ್ಷದ ಮಹಿಳೆ ಮತ್ತು ಓರ್ವ ಬಾಲಕ ಪ್ರಾಣ ಕಳೆದುಕೊಂಡಿದ್ದಾರೆ ಎಂದು ಆರೋಗ್ಯ ಸಚಿವ ಸತ್ಯ ಕುಮಾರ್ ಯಾದವ್ ತಿಳಿಸಿದ್ದಾರೆ.

ಭಾನುವಾರ ಗುಂಟೂರಿನ ಸರ್ಜಾರಿ ಜನರಲ್ ಆಸ್ಪತ್ರೆಯಲ್ಲಿ ಕಮಲಮ್ಮ ಎಂಬವರು ಸಾವನ್ನಪ್ಪಿದ್ದರು. ಇದಕ್ಕೂ ಹತ್ತು ದಿನಗಳ ಹಿಂದೆ 10 ವರ್ಷದ ಬಾಲಕ ಶ್ರೀಕಾಕುಳಂನ ಖಾಸಗಿ ವೈದ್ಯಕೀಯ ಕಾಲೇಜ್‌ನಲ್ಲಿ ಸಾವನ್ನಪ್ಪಿದ್ದ ಎಂದು ಅವರು ಮಾಹಿತಿ ನೀಡಿದರು.

ಸದ್ಯ ರಾಜ್ಯದಲ್ಲಿ 17 ಜಿಬಿಎಸ್ ಪ್ರಕರಣಗಳಿವೆ. ಇದು ಸಾಂಕ್ರಾಮಿಕವಲ್ಲದ ರೋಗವಾಗಿದ್ದು, ಲಕ್ಷ ಜನಸಂಖ್ಯೆಯಲ್ಲಿ ಶೇ.2ರ ಪ್ರಮಾಣದಲ್ಲಿರುತ್ತದೆ. ಇದರಿಂದ ಹಠಾತ್ ಸಾವು ಸಂಭವಿಸುವುದಿಲ್ಲ. ಸಾಮಾನ್ಯ ರೋಗವಾಗಿದೆ ಎಂದಿದ್ದಾರೆ.

2024ರಲ್ಲಿ 267 ಪ್ರಕರಣಗಳು ದಾಖಲಾಗಿದ್ದು,




ವರ್ಷದ ಮೊದಲ ಅವಧಿಯಲ್ಲಿ 141 ಹಾಗೂ ಎರಡನೇ ಅವಧಿಯಲ್ಲಿ 126 ಪ್ರಕರಣಗಳು ವರದಿಯಾಗಿದ್ದವು. ತಿಂಗಳಲ್ಲಿ ಸರಾಸರಿ 25 ಪ್ರಕರಣಗಳು ದಾಖಲಾಗಿದ್ದು, ನಿಯಮಿತ ಚಿಕಿತ್ಸೆಗಳ ಮೂಲಕ ನಿರ್ವಹಿಸಲಾಗಿದೆ. ಗಂಭೀರ ಪ್ರಕರಣದಲ್ಲಿ ಹಿಮೋಗ್ಲೋಬಿನ್ ಇಂಜೆಕ್ಷನ್ ಮತ್ತು ಐಸಿಯು ದಾಖಲಾತಿ ನಡೆಸಲಾಗಿದೆ ಎಂದು ಸಚಿವರು ಹೇಳಿದರು.

ಜಿಬಿಎಸ್‌ಗೆ ಕಳೆದೆರಡು ದಿನದ ಹಿಂದೆ ನಾಗ್ಪುರ ಮತ್ತು ಕೊಲ್ಹಾಪುರದಲ್ಲಿ ತಲಾ ಓರ್ವ ವ್ಯಕ್ತಿ ಮೃತಪಟ್ಟಿದ್ದರು. ಮಹಾರಾಷ್ಟ್ರ, ಅಸ್ಸಾಂ, ಪಶ್ಚಿಮ ಬಂಗಾಳ ಸೇರಿದಂತೆ ಹಲವು ರಾಜ್ಯದಲ್ಲಿ ಈ ಸೋಂಕು ವರದಿಯಾಗಿದೆ.


ಗಿಲೆನ್ ಬರೆ ಸಿಂಡ್ರೋಮ್ ಕಾಯಿಲೆ ಈ ವರ್ಷದ ಆರಂಭದಿಂದ ದೇಶದಲ್ಲಿ ಕಂಡು ಬರುತ್ತಿದೆ. ಮಹಾರಾಷ್ಟ್ರದಲ್ಲಿ ಹೆಚ್ಚಿನ ಪ್ರಕರಣಗಳು ದಾಖಲಾಗಿವೆ. ಇದೊಂದು ರೀತಿಯ ವಿಭಿನ್ನ ಬಗೆಯ ಪಾರ್ಶ್ವವಾಯುವಿಗೆ ಕಾರಣವಾಗುತ್ತದೆ. ಚಲನಶೀಲ ನರಗಳ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಪ್ರತಿರೋಧಕ ವ್ಯವಸ್ಥೆಯ ನರಗಳ ಮೇಲೆ ದಾಳಿ ಮಾಡಬಲ್ಲದು. ಇದರಿಂದಾಗಿ ರೋಗಿ ಓಡಾಡುವುದು ಮತ್ತು ಉಸಿರಾಡುವುದು ಕಷ್ಟವಾಗುತ್ತದೆ. ಮಕ್ಕಳಿಗೆ ಮತ್ತು ಹಿರಿಯ ನಾಗರಿಕರಿಗೆ ಅಪಾಯಕಾರಿ. ಈ ಲಕ್ಷಣಗಳು ಕಂಡು ಬಂದಾಕ್ಷಣ ವೈದ್ಯರ ಬಳಿ ಕರೆತರುವುದು ಅಗತ್ಯ.

# ಅಮೆರಿಕದಿಂದ ಇಸ್ರೇಲ್‌ಗೆ ಬಾಂಬ್‌ಗಳ ಪೂರೈಕೆ ಪುನಾರಂಭ

**ಜೆರುಸಲೇಂ:** ಅಮೆರಿಕವು ಇತ್ತೀಚೆಗೆ ಎಂಕೆ–84 ಬಾಂಬ್‌ಗಳ ಪೂರೈಕೆಯ ಮೇಲಿನ ತಾತ್ಕಾಲಿಕ ನಿಷೇಧವನ್ನು ತೆಗೆದುಹಾಕಿದ ನಂತರ, ಅಮೆರಿಕವು ಇಸ್ರೇಲ್‌ಗೆ ಭಾರಿ ತೂಕದ ಎಂಕೆ–84 ಬಾಂಬ್‌ಗಳನ್ನು ಕಳುಹಿಸಿಕೊಟ್ಟಿದೆ ಎಂದು ಇಸ್ರೇಲ್ ರಕ್ಷಣಾ ಸಚಿವಾಲಯ ತಿಳಿಸಿದೆ. ಎಂಕೆ–84 ಇದು 907 ಕೆಜಿ ತೂಕದ ಮಾರ್ಗದರ್ಶಿಯಲ್ಲದ ಬಾಂಬ್ ಆಗಿದ್ದು, ರಿ ಇನ್‌ಫೋರ್ಸ್‌ಡ್ ಗುರಿಗಳನ್ನು ಭೇದಿಸುವ ಸಾಮರ್ಥ್ಯವನ್ನು ಹೊಂದಿದೆ ಮತ್ತು ತನ್ನ ಬಲವಾದ ಸ್ಫೋಟಕ ಶಕ್ತಿಯಿಂದ ವ್ಯಾಪಕ ಹಾನಿಯನ್ನುಂಟು ಮಾಡುತ್ತದೆ.

ಈ ಶಸ್ತ್ರಾಸ್ತ್ರಗಳನ್ನು ಹೊತ್ತ ಹಡಗು ಶನಿವಾರ ತಡರಾತ್ರಿ ಇಸ್ರೇಲಿನ ಅಶ್ಡೋಡ್ ಬಂದರಿಗೆ ತಲುಪಿದೆ. ರಾತ್ರಿಯಿಡೀ ಈ ಹಡಗಿನಿಂದ ಶಸ್ತ್ರಾಸ್ತ್ರಗಳನ್ನು ಇಳಿಸಲಾಯಿತು ಎಂದು ರಕ್ಷಣಾ ಸಚಿವಾಲಯದ ವಕ್ತಾರರು ಭಾನುವಾರ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಸಚಿವಾಲಯ ಬಿಡುಗಡೆ ಮಾಡಿದ



ವೀಡಿಯೊ ದೃಶ್ಯಾವಳಿಗಳಲ್ಲಿ ಹಡಗು ಕಂಟೇನರ್‌ಗಳನ್ನು ಡಜನ್‌ಗಟ್ಟಲೆ ಟ್ರಕ್‌ಗಳಲ್ಲಿ ಲೋಡ್ ಮಾಡುತ್ತಿರುವುದು ಕಾಣಿಸಿದೆ. ಅವುಗಳನ್ನು ಇಸ್ರೇಲ್‌ನ ವಾಯು ಪಡೆಯ ನೆಲೆಗಳಿಗೆ ಸಾಗಿಸಲಾಗಿದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಗಾಜಾ ಪಟ್ಟಿಯ ಜನನಿಬಿಡ ಪ್ರದೇಶಗಳಲ್ಲಿ ಈ ಬಾಂಬ್‌ಗಳ ಸಂಭಾವ್ಯ ಬಳಕೆಯಿಂದಾಗಬಹುದಾದ ಹಾನಿಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಅಮೆರಿಕದ ಮಾಜಿ ಅಧ್ಯಕ್ಷ ಜೋ ಬೈಡನ್ ಆಡಳಿತಾವಧಿಯಲ್ಲಿ ಇಸ್ರೇಲ್‌ಗೆ ಈ ಬಾಂಬ್‌ಗಳ ಪೂರೈಕೆಯನ್ನು ನಿಲ್ಲಿಸಲಾಗಿತ್ತು.

ಈ ಬಾಂಬ್‌ಗಳು ಇಸ್ರೇಲಿ ವಾಯುಪಡೆ ಮತ್ತು ಐಡಿಎಫ್‌ಗಳ ಮಹತ್ವದ ಶಸ್ತ್ರಾಸ್ತ್ರಗಳಾಗಿವೆ ಎಂದು ಇಸ್ರೇಲ್ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಹೇಳಿದ್ದಾರೆ. ಬಾಂಬ್‌ಗಳನ್ನು ಪೂರೈಕೆ ಮಾಡಿದ್ದಕ್ಕಾಗಿ ಮತ್ತು ಇಸ್ರೇಲ್‌ಗೆ ಅಚಲ ಬೆಂಬಲ ನೀಡಿದ್ದಕ್ಕಾಗಿ ಅವರು ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಅವರ ಆಡಳಿತಕ್ಕೆ ಧನ್ಯವಾದ ಅರ್ಪಿಸಿದರು.

ಫೆಬ್ರವರಿ 18ರ ಗಡುವಿನೊಳಗೆ ಇಸ್ರೇಲಿ ಪಡೆಗಳು ಲೆಬನಾನ್ ಭೂಪ್ರದೇಶದಿಂದ ಸಂಪೂರ್ಣವಾಗಿ ಹಿಂದೆ ಸರಿಯಬೇಕು ಎಂದು ಲೆಬನಾನ್‌ನ ಉಗ್ರಗಾಮಿ ಗುಂಪು ಹಿಜ್ಬುಲ್ಲಾ ಮುಖ್ಯಸ್ಥರು ಭಾನುವಾರ ಹೇಳಿದ್ದಾರೆ. ದಕ್ಷಿಣ ಲೆಬನಾನ್ ನ ಯಾವುದೇ ಪೋಸ್ಟ್ ನಲ್ಲಿ ಮಿಲಿಟರಿ ನಿಯೋಜನೆಯನ್ನು ಮುಂದುವರೆಸಲು ಇಸ್ರೇಲ್‌ಗೆ ಯಾವುದೇ ಕಾರಣಗಳಿಲ್ಲ ಎಂದು ಅವರು ಹೇಳಿದರು.

ನವೆಂಬರ್‌ನಲ್ಲಿ ವಾಷಿಂಗ್ಟನ್ ಮಧ್ಯಸ್ಥಿಕೆಯಲ್ಲಿ ನಡೆದ ಕದನ ವಿರಾಮದ ಅಡಿಯಲ್ಲಿ, ದಕ್ಷಿಣ ಲೆಬನಾನ್?ನಿಂದ ಹಿಂದೆ ಸರಿಯಲು ಇಸ್ರೇಲ್ ಪಡೆಗಳಿಗೆ 60 ದಿನಗಳ ಕಾಲಾವಕಾಶ ನೀಡಲಾಗಿದೆ. ಆ ಗಡುವನ್ನು ನಂತರ ಫೆಬ್ರವರಿ 18ರವರೆಗೆ ವಿಸ್ತರಿಸಲಾಯಿತು. ಆದರೆ ಇಸ್ರೇಲ್ ಮಿಲಿಟರಿ ದಕ್ಷಿಣ ಲೆಬನಾನ್‌ನ ಐದು ಪೋಸ್ಟ್‌ಗಳಲ್ಲಿ ಸೈನ್ಯವನ್ನು ಉಳಿಸಿಕೊಳ್ಳಲು ವಿನಂತಿಸಿದೆ ಎಂದು ಮೂಲಗಳು ಕಳೆದ ವಾರ ರಾಯಿಟರ್ಸ್‌ಗೆ ತಿಳಿಸಿವೆ.

# ದೆಹಲಿ ರೈಲು ನಿಲ್ದಾಣದಲ್ಲಿ ಜನದಟ್ಟಣೆ ನಿರ್ವಹಣೆಗೆ ಸಿಆರ್‌ಪಿಎಫ್ ನಿಯೋಜನೆ



**ನವದೆಹಲಿ:** ನವದೆಹಲಿಯ ರೈಲು ನಿಲ್ದಾಣದಲ್ಲಿ ಸಂಭವಿಸಿದ ಭೀಕರ ಕಾಲ್ತುಳಿತದ ಬಳಿಕ ಜನದಟ್ಟಣೆ ನಿರ್ವಹಣೆಗೆ ಇದೀಗ ದೆಹಲಿ ಪೊಲೀಸರೊಂದಿಗೆ ಕೇಂದ್ರ ಮೀಸಲು ಪೊಲೀಸ್ ಪಡೆ (ಸಿಆರ್‌ಪಿಎಫ್) ಯನ್ನು ನಿಯೋಜಿಸಲಾಗಿದೆ. ಹಿರಿಯ ಸಿಆರ್‌ಪಿಎಫ್ ಅಧಿಕಾರಿಗಳು ಮೇಲ್ವಿಚಾರಣೆ ನಡೆಸಲಿದ್ದಾರೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

ಜನಸಂದಣಿ ನಿರ್ವಹಣೆ ಹೆಚ್ಚಿಸಲು ಮತ್ತು ಪ್ರಯಾಣಿಕರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ದೆಹಲಿ ಪೊಲೀಸರು 6 ಇನ್ಸ್‌ಪೆಕ್ಟರ್ ಶ್ರೇಣಿಯ ಅಧಿಕಾರಿಗಳನ್ನು ನಿಲ್ದಾಣದಲ್ಲಿ ನಿಯೋಜಿಸಿದ್ದಾರೆ. ವಿವಿಧ ಜಿಲ್ಲೆಗಳಿಂದ ಬಂದಿರುವ ಈ ಅಧಿಕಾರಿಗಳನ್ನು ವಿಶೇಷವಾಗಿ ದೇಶದ ಅತ್ಯಂತ ಜನನಿಬಿಡ ಸಾರಿಗೆ ಕೇಂದ್ರಗಳ ಪೈಕಿ ಒಂದಾದ ನವದೆಹಲಿ ರೈಲು ನಿಲ್ದಾಣದಲ್ಲಿ ಕಾರ್ಯಾಚರಣೆಗೆ ನಿಯೋಜಿಸಲಾಗಿದೆ.

ಈಗಾಗಲೇ ದಟ್ಟಣೆ ನಿರ್ವಹಣೆಯಲ್ಲಿ ಅನುಭವ ಹೊಂದಿರುವ, ಯಶಸ್ವಿಯಾಗಿ ನಿರ್ವಹಿಸಿರುವ ವಿವಿಧ ಜಿಲ್ಲೆಗಳ ಅಧಿಕಾರಿಗಳು ಇವರಾಗಿದ್ದಾರೆ. ಇವರಲ್ಲಿ ಕೆಲವರು ನಿಲ್ದಾಣಗಳಲ್ಲಿ ಎಸ್‌ಎಚ್‌ಒ ಆಗಿ ಕಾರ್ಯನಿರ್ವಹಿಸಿದ್ದು, ಜನಸಂದಣಿಯಲ್ಲಿ ಲಾಜಿಸ್ಟಿಕ್ ಮತ್ತು ಭದ್ರತಾ ಸವಾಲುಗಳನ್ನು ಅರ್ಥೈಸಿಕೊಂಡು ಕೆಲಸ ಮಾಡಲಿದ್ದಾರೆ.

# ಭಾರತದ ಮತದಾನ ಪ್ರಮಾಣಕ್ಕಾಗಿ ಮೀಸಲಿಟ್ಟಿದ್ದ ನಿಧಿ ರದ್ದುಗೊಳಿಸಿದ ಅಮೆರಿಕ

**ವಾಷಿಂಗ್ಟನ್:** ಅಮೆರಿಕದಲ್ಲಿ ನೂತನವಾಗಿ ಅಧಿಕಾರಕ್ಕೆ ಬಂದಿರುವ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನೇತೃತ್ವದ ಹೊಸ ಸರ್ಕಾರವು ಹಲವಾರು ದೇಶಗಳ ವಿವಿಧ ಯೋಜನೆಗಳಿಗಾಗಿ ನೀಡಲಾಗುತ್ತಿದ್ದ ಧನಸಹಾಯವನ್ನು ನಿಲ್ಲಿಸುವುದಾಗಿ ಘೋಷಿಸಿದೆ. ಸದ್ಯ ಇಂಥ ಅನೇಕ ಯೋಜನೆಗಳಿಗೆ ಧನಸಹಾಯ ಸ್ಥಗಿತಗೊಳಿಸಲಾಗುತ್ತಿರುವುದನ್ನು ಎಲೋನ್ ಮಸ್ಕ್ ನೇತೃತ್ವದ ಯುಎಸ್ ಡಿಪಾರ್ಟ್‌ಮೆಂಟ್ ಆಫ್ ಗವರ್ನಮೆಂಟ್ ಎಫಿಷಿಯೆನ್ಸಿ ಪ್ರಕಟಿಸಿದೆ.

ಆದರೆ, "ಭಾರತದಲ್ಲಿ ಮತದಾನದ ಪ್ರಮಾಣ"ಕ್ಕಾಗಿ ನಿಗದಿಪಡಿಸಲಾಗಿದ್ದ 22 ಮಿಲಿಯನ್ ಡಾಲರ್ ಧನಸಹಾಯವನ್ನು ನಿಲ್ಲಿಸುವುದಾಗಿ ಹೇಳಿದ್ದು ಹಲವಾರು ಪ್ರಶ್ನೆಗಳನ್ನು ಹುಟ್ಟು ಹಾಕಿದೆ. ಭಾರತದಲ್ಲಿನ ಮತದಾನ ಪ್ರಮಾಣಕ್ಕಾಗಿ ಇಷ್ಟೊಂದು ದೊಡ್ಡ ಮೊತ್ತದ ಹಣವನ್ನು ಅಮೆರಿಕ ಮೀಸಲಿಟ್ಟಿದ್ದು ಏಕೆ ಎಂಬ ಪ್ರಶ್ನೆ ಸಹಜವಾಗಿಯೇ ಮೂಡಿದೆ. ಇನ್ನು "ಭಾರತದಲ್ಲಿ ಮತದಾನದ ಪ್ರಮಾಣ"ಕ್ಕೆ ಹಣ ಮೀಸಲಿಟ್ಟಿದ್ದು ಭಾರತದಲ್ಲಿನ ಚುನಾವಣೆಗಳಲ್ಲಿ ಹಸ್ತಕ್ಷೇಪ ಮಾಡುವುದಕ್ಕಾ ಎಂಬ ಗಂಭೀರ ಪ್ರಶ್ನೆಯೂ ಮೂಡಿದೆ.

ಈ ಪ್ರಕಟಣೆಯ ಬಗ್ಗೆ ಬಿಜೆಪಿಯ ಅಮಿತ್ ಮಾಳವೀಯ ಪ್ರತಿಕ್ರಿಯಿಸಿದ್ದು, "ಮತದಾನದ ಪ್ರಮಾಣಕ್ಕೆ 21 ಮಿಲಿಯನ್ ಡಾಲರ್ ಇಡಲಾಗಿತ್ತಾ ಇದು ಖಂಡಿತವಾಗಿಯೂ ಭಾರತದ ಚುನಾವಣಾ ಪ್ರಕ್ರಿಯೆಯಲ್ಲಿ ಬಾಹ್ಯ ಹಸ್ತಕ್ಷೇಪವಾಗಿದೆ. ಇದರಿಂದ ಯಾರಿಗೆ ಲಾಭ ಖಂಡಿತವಾಗಿಯೂ ಇದರ ಲಾಭ ಆಡಳಿತ ಪಕ್ಷಕ್ಕೆ ಸಿಗಲಾರದು" ಎಂದು ಅವರು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಯುಎಸ್ ಇಲಾಖೆ ರದ್ದುಗೊಳಿಸಿದ ಇತರ ಧನಸಹಾಯದಲ್ಲಿ, "ಮೊಜಾಂಬಿಕ್ ಸ್ವಯಂಪ್ರೇರಿತ ವೈದ್ಯಕೀಯ ಪುರುಷ ಸುನ್ನತಿ"ಗಾಗಿ 10 ಮಿಲಿಯನ್ ಯುಎಸ್‌ಡಿ ಸೇರಿದೆ. ಮೊಲ್ಡೊವಾದಲ್ಲಿ 'ಅಂತರ್ಗತ ಮತ್ತು ಭಾಗವಹಿಸುವಿಕೆಯ ರಾಜಕೀಯ ಪ್ರಕ್ರಿಯೆ'ಗಾಗಿ 22 ಮಿಲಿಯನ್ ಡಾಲರ್ ಮತ್ತು ಭಾರತದಲ್ಲಿ ಮತದಾನದ ಪ್ರಮಾಣಕ್ಕಾಗಿ 21 ಮಿಲಿಯನ್ ಡಾಲರ್ ಸೇರಿದಂತೆ 'ಚುನಾವಣೆ ಮತ್ತು ರಾಜಕೀಯ ಪ್ರಕ್ರಿಯೆ ಬಲಪಡಿಸುವ ಒಕ್ಕೂಟ'ಕ್ಕೆ 486 ಮಿಲಿಯನ್ ಡಾಲರ್ ದೇಣಿಗೆ ನೀಡಲಾಗಿದೆ ಎಂದು ಡಿಒಜಿಇ ತಿಳಿಸಿದೆ.

ಬಾಂಗ್ಲಾದೇಶದಲ್ಲಿ ರಾಜಕೀಯ ಸ್ಥಿರತೆಯನ್ನು ಬಲಪಡಿಸಲು ಉದ್ದೇಶಿಸಲಾಗಿದ್ದ 29 ಮಿಲಿಯನ್ ಡಾಲರ್ ಮತ್ತು ನೇಪಾಳದಲ್ಲಿ "ಹಣಕಾಸಿನ ಒಕ್ಕೂಟ ವ್ಯವಸ್ಥೆ" ಮತ್ತು "ಜೀವವೈವಿಧ್ಯ ಸಂರಕ್ಷಣೆ" ಗಾಗಿ 39 ಮಿಲಿಯನ್ ಡಾಲರ್ ಅನ್ನು ಸಹ ರದ್ದುಪಡಿಸಲಾಗಿದೆ.

# ಅಭಿಮಾನಿಗಳ ಪ್ರೀತಿಗೆ ಬೆಲೆ ಕಟ್ಟಲು ಸಾಧ್ಯವಿಲ್ಲ







ಮದುವೆ ನಾವಂದುಕಂಡಿದ್ದಕ್ಕಿಂತ ಚೆನ್ನಾಗಿ ಆಗಿದೆ. ಅಭಿಮಾನಿಗಳ ಪ್ರೀತಿಗೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಕನ್ನಡ ಚಿತ್ರರಂಗ ನನ್ನ ಕುಟುಂಬ ಇದ್ದ ಹಾಗೆ. ನನ್ನ ಪ್ರಾರಂಭದ ದಿನಗಳಿಂದಲೂ ನನ್ನ ಕೈ ಹಿಡಿದಿದ್ದಾರೆ. ಅವರ ಆಶೀರ್ವಾದ ನನ್ನ ಮೇಲೆ ಇದೆ. ನಾನು ಕೂಡ ಎಲ್ಲರಿಗೂ ಧನ್ಯವಾದ ತಿಳಿಸುತ್ತೇನೆ. ನಾವು ಎಲ್ಲವನ್ನ ಗೌರವಿಸಬೇಕು ಎಂದು ನಟ ಡಾಲಿ ಧನಂಜಯ ಹೇಳಿದರು.

ಮೈಸೂರು ವಸ್ತು ಪ್ರದರ್ಶನ ಮೈದಾನದಲ್ಲಿ ಮದುವೆ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, "ಮೊದಲಿಗೆ ಎಲ್ಲಾರಿಗೂ ಧನ್ಯವಾದಗಳನ್ನು ತಿಳಿಸುತ್ತೇನೆ. ಮದುವೆ ಸಂಭ್ರಮ ಚೆನ್ನಾಗಿ ನಡೆದಿದೆ. ಯಾವುದಾದರೂ ಸಣ್ಣ ಪುಟ್ಟ ತೊಂದರೆಗಳು ಆಗಿದ್ದರೆ ಕ್ಷಮೆ ಇರಲಿ. ವಿದ್ಯಾಪತಿ ದ್ವಾರದಿಂದ ಅಭಿಮಾನಿಗಳು ಬಂದು ಆಶೀರ್ವಾದ ಮಾಡಿದ್ದಾರೆ. ಎಲ್ಲವೂ ಅಂದುಕೊಂಡಂತೆ ಆಗಿದೆ. ನಮ್ಮ ಮನೆಯವರು ಖುಷಿಯಾಗಿದ್ದಾರೆ. ಅಭಿಮಾನಿಗಳು ದೊಡ್ಡ ಸಂಖ್ಯೆಯಲ್ಲೇ ಮದುವೆಗೆ ಬಂದಿದ್ದಾರೆ. ತುಂಬಾ ಸಮಯ ನಮಗಾಗಿ ಕಾದಿದ್ದಾರೆ. ಅಭಿಮಾನಿಗಳ ಪ್ರೀತಿ ದೊಡ್ಡದು" ಎಂದರು.

ಇಡೀ ಕನ್ನಡ ಚಿತ್ರರಂಗವೇ ನನ್ನ ಕುಟುಂಬ. ಅಭಿಮಾನಿಗಳ ಪ್ರೀತಿಗೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಅವರ ಆಶೀರ್ವಾದ ನನ್ನ ಮೇಲಿದೆ. ನನ್ನ ಮದುವೆ ಅದ್ದೂರಿಯಾಗಿ, ಸುಸೂತ್ರವಾಗಿ ನಡೆಯಲು ಕಾರಣಕರ್ತರಾದ ಎಲ್ಲರಿಗೂ ಧನ್ಯವಾದ ಅರ್ಪಿಸುತ್ತೇನೆ ಎಂದು ತಿಳಿಸಿದರು.

ಮೈಸೂರಿನಲ್ಲಿ ಬೆಳೆದ ಪ್ರತಿಯೊಬ್ಬರಿಗೂ, ಮೈಸೂರು ಒಂದು ಎಮೋಷನಲ್. ನನ್ನ ತಾಯಿಯ ನಂಬಿಕೆಯನ್ನು ಉಳಿಸಿಕೊಂಡಿದ್ದೇನೆ. ನನಗೆ ಜೀವನ ಕಟ್ಟಿಕೊಟ್ಟ ಮೈಸೂರಿನಲ್ಲೇ ಮದುವೆಯಾಗಿದ್ದಕ್ಕೆ ಬಹಳ ಖುಷಿಯಾಗಿದೆ. ಮೈಸೂರಿನ ಸ್ನೇಹಿತರೆಲ್ಲರೂ ಬಂದು ಶುಭ ಹಾರೈಸಿದಕ್ಕೆ ಡಬಲ್ ಖುಷಿಯಾಗಿದೆ" ಎಂದು ದಾಂಪತ್ಯ ಜೀವನಕ್ಕೆ ಕಾಲಿಟ್ಟ ನಟ ಡಾಲಿ ಧನಂಜಯ್ ಹೇಳಿದರು.

"ಅಭಿಮಾನಿಗಳಿಗೆ ಸಾಕಷ್ಟು ಗೌರವ ಕೊಡಬೇಕು. ನಾವು ನಿಗದಿಪಡಿಸಿದ ಸ್ಥಳದಲ್ಲಿ ಅವರನ್ನು ನೋಡಿ ಬಹಳ ಖುಷಿಯಾಯಿತು. ಚಿತ್ರರಂಗದ ಗೆಳೆಯರಿಗೂ ಧನ್ಯವಾದಗಳು. ಮದುವೆಯಿಂದ ನನಗೆ ಸಾಕಷ್ಟು ಜವಾಬ್ದಾರಿ ಹೆಚ್ಚಾಗಿದೆ. ಅಭಿಮಾನಿಗಳ ಮೇಲೆ ಗೌರವ ಇನ್ನೂ ಹೆಚ್ಚಿದೆ. ಈ ಜವಾಬ್ದಾರಿ ನಿಭಾಯಿಸಲೇಬೇಕು ಎಂದು ಕೆಲಸ ಮಾಡಬೇಕು. ತಾಳಿ ಕಟ್ಟುವಾಗ ಭಯವಾಗಲಿಲ್ಲ. ಅಪ್ಪ-ಅಮ್ಮ ಬಹಳ ಖುಷಿಯಾಗಿದ್ದಾರೆ. ಶಿವಣ್ಣ ಪ್ರೀತಿ ದೊಡ್ಡದು. ಅವರು ಬಂದು ನಮಗೆ ಶಕ್ತಿ ತುಂಬಿ ಹೋಗಿದ್ದಾರೆ" ಎಂದು ಹೇಳಿದರು.

"ಆಸ್ತಿಕತೆ - ನಾಸ್ತಿಕತೆ ನನ್ನ ಬಾಲ್ಯದ ದಿನಗಳಿಂದಲೂ ನೋಡಿದ್ದೇನೆ. ನಮ್ಮೂರ ಜಾತ್ರೆಯಲ್ಲಿ ಭಾಗಿಯಾಗಿದ್ದೇನೆ. ಇದೆಲ್ಲವೂ ನಮ್ಮೂರಲ್ಲಿ ನಡೆಯುತ್ತಿರುವ ಜಾತ್ರೆಯ ಬಗ್ಗೆ ತಿಳಿಸುತ್ತದೆ. ವಿಜ್ಞಾನವು ಬೇಕು, ನಂಬಿಕೆಯೂ ಬೇಕು. ನನ್ನ ಹೆಂಡತಿ ವಿಜ್ಞಾನದಲ್ಲಿದ್ದಾರೆ. ನಮ್ಮ ತಾಯಿ ಆಸ್ಪತ್ರೆಗೆ ಒಳ ಹೋಗುವ ಮುನ್ನ ದೇವರಿಗೆ ಕೈ ಮುಗಿಯುತ್ತಾರೆ. ಅದನ್ನು ನಾನು ಗೌರವಿಸಬೇಕು. ನಾನು ಒಬ್ಬ ಕಲಾವಿದ, ಎಲ್ಲಾದರ ಅನುಭವ ನನಗೆ ಬೇಕು. ಹೀಗಾಗಿ ಪ್ರಶ್ನೆ ಮಾಡುವವರು ಕೂಡಾ ಇರಬೇಕು. ಮದುವೆ ಸಮಯದಲ್ಲಿ ಮಾಡಿದ ಎಲ್ಲಾ ಸಂಪ್ರದಾಯಗಳನ್ನು ನಾನು ಮಗುವಿನಂತೆ ಸಂಭ್ರಮಿಸಿದ್ದೇನೆ. ನನ್ನ ತಾಯಿಯ ನಂಬಿಕೆಯನ್ನು ನಾನು ಗೌರವಿಸಬೇಕು. ಮದುವೆ ಬಳಿಕ ಸ್ವಲ್ಪ ವಿರಾಮ ಇದ್ದೇ ಇರುತ್ತದೆ. ನಂತರ ಅವರವರು ಅವರ ವೃತ್ತಿ ಮಾಡ್ತಾರೆ. ನಾನು ಚಿತ್ರರಂಗದಲ್ಲಿ ಭಾಗಿಯಾಗುತ್ತೇನೆ" ಎಂದು ತಿಳಿಸಿದರು.

ಮುದವೆ ಬಗ್ಗೆ ಇದೇ ಮೊದಲ ಬಾರಿಗೆ ಮಾತನಾಡಿದ ಡಾಲಿ ಧನಂಜಯ ಅವರ ಹೆಂಡ್ತಿ ಧನ್ಯತಾ ಅವರು, ಅಭಿಮಾನಿಗಳ ಪ್ರೀತಿಗೆ ಏನು ಮಾತನಾಡಬೇಕೋ ನನಗೆ ಮಾತುಗಳೇ ಬರುತ್ತಿಲ್ಲ. ಅಭಿಮಾನಿಗಳ ಪ್ರೀತಿ ಕಂಡು ನಾನು ತುಂಬಾ ಬಾವುಕಳಾದೆ. ನಮ್ಮಲ್ಲಿ ಯಾವುದೇ ಬದಲಾವಣೆ ಇಲ್ಲ. ನಮ್ಮ ಕುಟುಂಬ ಅವರ ಕುಟುಂಬ ಎರಡು ಒಂದೇ. ಇಬ್ಬರು ತುಂಬಾ ಅನ್ಯುನತೆಯಿಂದ ಇರುತ್ತೇವೆ. ಎಲ್ಲವು ಚನ್ನಾಗಿ ಆಗಿದೆ ಎಂದು ಹೇಳಿದರು.



## ಪತ್ನಿನ ಸ್ಟೇಜ್ ಮೇಲೆ ಕರ್ಕೊಂಡ್ ಬಂದು ಅಭಿಮಾನಿಗಳ ಕಾಲಿಗೆ ಬಿದ್ದ ಡಾಲಿ



## ದಿ ಡೆವಿಲ್ ಟೀಸರ್ ಬಿಡುಗಡೆ

ಫೆ.16 ನಟ ದರ್ಶನ್ ಅವರ ಜನ್ಮ ದಿನ. ಅನಾರೋಗ್ಯದ ಕಾರಣ ಅವರು ಫ್ಯಾನ್ಸ್ ಜೊತೆ ಸೆಲೆಬ್ರೇಟ್ ಮಾಡುತ್ತಿಲ್ಲ. ಹಾಗಂತ ಅಭಿಮಾನಿಗಳ ವಲಯದಲ್ಲಿ ಸಡಗರ ಕಮ್ಮಿ ಆಗಿಲ್ಲ.

ಖ ಬಾಸ್‌ಫ್ಯಾನ್ಸ್ ತಮ್ಮದೇ ಆದ ವಿಶಿಷ್ಟ ರೀತಿಗಳಲ್ಲಿ ತಮ್ಮ ಆರಾಧ್ಯ ದೈವ ದರ್ಶನ್ ಅವರ ಹುಟ್ಟುಹಬ್ಬವನ್ನು ಸರಳವಾಗಿ, ವಿಜೃಂಭಣೆಯಿಂದ ಆಚರಿಸುತ್ತಿದ್ದಾರೆ. ಅವರ ಆ ಸಂಭ್ರಮವನ್ನು ಜಾಸ್ತಿ ಮಾಡಲು 'ದಿ ಡೆವಿಲ್' ಸಿನಿಮಾದ ಟೀಸರ್ ರಿಲೀಸ್ ಆಗಿದೆ.

ಮಿಲನ ಪ್ರಕಾಶ್ ಅವರು ನಿರ್ದೇಶನ ಮಾಡುತ್ತಿರುವ ಈ ಸಿನಿಮಾದ ಮೇಲೆ ಅಭಿಮಾನಿಗಳಿಗೆ ಇರುವ ನಿರೀಕ್ಷೆ ದೊಡ್ಡದು. ಟೀಸರ್ ಮೂಲಕ ಆ ನಿರೀಕ್ಷೆಯನ್ನು ಡಬಲ್ ಮಾಡಲಾಗಿದೆ. ದರ್ಶನ್ ಹುಟ್ಟುಹಬ್ಬದ ಪ್ರಯುಕ್ತ ಬಿಡುಗಡೆ ಆಗಿರುವ ಈ ಟೀಸರ್ ವೈರಲ್ ಆಗುತ್ತಿದೆ.

'ಕಾಟೇರ' ಸಿನಿಮಾದ ಬಿಗ್ ಸಕ್ಸಸ್ ನಂತರ ದರ್ಶನ್ ಶುರು ಮಾಡಿದ ಸಿನಿಮಾ 'ದಿ ಡೆವಿಲ್'. ಹಾಗಾಗಿ ಈ ಸಿನಿಮಾ ಮೇಲೆ ಇರುವ ನಿರೀಕ್ಷೆ ದೊಡ್ಡದು. ಶೂಟಿಂಗ್ ನಡೆಯುತ್ತಿರುವಾಗಲೇ ದರ್ಶನ್ ಅವರು ಕೊಲೆ ಪ್ರಕರಣದಲ್ಲಿ ಆರೋಪಿ ಆಗಿ ಜೈಲು ಸೇರಿದ್ದರು. ಹಾಗಾಗಿ ಹಲವು ತಿಂಗಳ ಕಾಲ 'ದಿ ಡೆವಿಲ್' ಸಿನಿಮಾದ ಚಿತ್ರೀಕರಣಕ್ಕೆ ಬ್ರೇಕ್ ಹಾಕಲಾಗಿತ್ತು. ಚಿತ್ರತಂಡದಿಂದ ಯಾವುದೇ ಅಪ್‌ಡೇಟ್ ಕೂಡ ಸಿಕ್ಕಿರಲಿಲ್ಲ. ಈಗ ಟೀಸರ್ ನೋಡಿ ಫ್ಯಾನ್ಸ್ ಖುಷಿಪಟ್ಟಿದ್ದಾರೆ.

'ದಿ ಡೆವಿಲ್' ಸಿನಿಮಾದ ಟೀಸರ್‌ನ ಅವಧಿ 1 ನಿಮಿಷ 4 ಸೆಕೆಂಡ್ ಇದೆ. ಇಡೀ ಟೀಸರ್‌ನಲ್ಲಿ 'ಚಾಲೆಂಜ್' ಎಂಬ ಪದ ಬಿಟ್ಟರೆ ಬೇರೆ ಯಾವುದೇ ಡೈಲಾಗ್ ಇಲ್ಲ. ಕೇವಲ ಆ್ಯಕ್ಷನ್ ಮೂಲಕವೇ ದರ್ಶನ್ ಅವರು ಅಬ್ಬರಿಸಿದ್ದಾರೆ. ಗನ್ ಹಿಡಿದು ಅವರು ಗತ್ತು ತೋರಿಸಿದ್ದಾರೆ. ಅವರ ಖದರ್ ನೋಡಿ ಅಭಿಮಾನಿಗಳಿಗೆ ಥ್ರಿಲ್ ಹೆಚ್ಚಿದೆ. ಬಿಡುಗಡೆಯಾದ ಕೆಲವೇ ನಿಮಿಷಗಳಲ್ಲಿ ಈ ಟೀಸರ್ ಲಕ್ಷಾಂತರ ಬಾರಿ ವೀಕ್ಷಣೆ ಕಂಡಿದೆ. ಚಿತ್ರತಂಡದವರು ಅಂದುಕೊಂಡಂತೆಯೇ ಆಗಿದ್ದರೆ 2024ರಲ್ಲೇ 'ದಿ ಡೆವಿಲ್' ಸಿನಿಮಾ ಬಿಡುಗಡೆ ಆಗಬೇಕಿತ್ತು. ಆದರೆ ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ದರ್ಶನ್ ಅವರು 2ನೇ ಆರೋಪಿಯಾಗಿ ಜೈಲಿಗೆ ಹೋಗಿದ್ದರಿಂದ ಸಿನಿಮಾದ ಎಲ್ಲ ಕೆಲಸಗಳು ನಿಂತಿದ್ದವು. ಜಾಮೀನು ಸಿಕ್ಕ ನಂತರವೂ ದರ್ಶನ್ ಅವರು ಕೂಡಲೇ ಚಿತ್ರೀಕರಣದಲ್ಲಿ ಭಾಗಿಯಾಗಲು ಸಾಧ್ಯವಾಗಿಲ್ಲ. ಯಾಕೆಂದರೆ ಅವರಿಗೆ ಬೆನ್ನು ನೋವು ಇದೆ. ಅದಕ್ಕಾಗಿ ಅವರು ಚಿಕಿತ್ಸೆ ಪಡೆಯುತ್ತಿದ್ದಾರೆ. ಆದಷ್ಟು ಬೇಗ 'ದಿ ಡೆವಿಲ್' ಸಿನಿಮಾವನ್ನು ನೋಡಬೇಕು ಎಂದು ಫ್ಯಾನ್ಸ್ ಕಾಯುತ್ತಿದ್ದಾರೆ.

# ಮುತ್ತು ಕೊಟ್ಟಿದ್ರು ಇಂದಿರಾ ಗಾಂಧಿ







ತೆರೆಯ ಮೇಲೆ ಸ್ಲಿವ್ ಸ್ಯೂಟ್ ಧರಿಸಿದ ಮೊದಲ ನಟಿ ಅಂದ್ರೆ ಅದು ಜಯಂತಿ. ಆಗೆಲ್ಲಾ, ಅಂದ್ರೆ 60-70 ಹಾಗೂ 80 ದಶಕದಲ್ಲಿ ಚಿತ್ರರಂಗದಲ್ಲಿ ಕೂಡ ತುಂಬಾ ಮಡಿವಂತಿಕೆ ಇತ್ತು. ಸ್ವಿಮ್ ಸ್ಯೂಟ್ ಧರಿಸುವುದು ಹಾಗಿರಲಿ, ಆಗಿನ ಕಾಲದ ನಟಿಯರು ಕಾಲು ಕಾಣುವಂತಹ ಡ್ರೆಸ್ ಹಾಕುವುದು ಕೂಡ ಅಪರಾಧ ಎನ್ನವಂತಿತ್ತು ಅಂದಿನ ಸಮಾಜ. ಆದರೆ, ನಟಿ ಜಯಂತಿ ಅವರು ಮೊಟ್ಟಮೊದಲ ಬಾರಿಗೆ ಸಿನಿಮಾದಲ್ಲಿ 'ಈಜುಡೆಗೆ' ಧರಿಸಿ ಎಲ್ಲರ ಹುಬ್ಬು ಮೇಲೇರುವಂತೆ ಮಾಡಿದ್ದರು.

1965ರಲ್ಲಿ ತೆರೆ ಕಂಡಿದ್ದ 'ಮಿಸ್ ಲೀಲಾವತಿ' ಚಿತ್ರದಲ್ಲಿ ನಟಿ ಜಯಂತಿ ಅವರು ಅಂದಿನ ಕಾಲದಲ್ಲಿ ಯಾರೂ ಧರಿಸಿ ನಟನೆ ಮಾಡದಿದ್ದ ಸ್ವಿಮ್ ಸ್ಯೂಟ್ ಧರಿಸಿದ್ದರು. ಆ ಚಿತ್ರಕ್ಕೆ ಅದರ ಅಗತ್ಯವಿತ್ತು ಅನ್ನೋದು ಬೇರೆ ಮಾತು! ಯಾವುದೇ ಸಿನಿಮಾದಲ್ಲಿ ಸ್ವಿಮ್ ಸ್ಯೂಟ್ ಅಥವಾ ಕಿಸ್ ಅಗತ್ಯವಿದ್ದರೂ ಅದನ್ನು ಮಾಡಲು ಅಂದು ಎಲ್ಲಾ ನಟಿಯರೂ ಹಿಂದೇಟು ಹಾಕುತ್ತಿದ್ದರು. ಆದರೆ, ಸಿನಿಮಾಕ್ಕೆ ಅಗತ್ಯವಿದ್ದ ಸ್ವಿಮ್ ಸ್ಯೂಟ್ ಧರಿಸಿ ಜಯಂತಿ ನಟಿಸಿ ಸೈ ಎನ್ನಿಸಿಕೊಂಡು ಹೊಸ ದಾಖಲೆ ನಿರ್ಮಿಸಿದ್ದರು.

ಉದಯ್ ಕುಮಾರ್ ನಾಯಕತ್ವದ ಮಿಸ್ ಲೀಲಾವತಿ ಚಿತ್ರದಲ್ಲಿ ನಟಿ ಜಯಂತಿಯವರ ಅಮೋಘ ನಟನೆಗೆ 'ಪ್ರಧಾನಿ ಪುರಸ್ಕಾರ' ಕೂಡ ಸಿಕ್ಕಿತ್ತು. ಅಂದು ಪ್ರಧಾನಿ ಆಗಿದ್ದ ಇಂದಿರಾ ಗಾಂಧಿಯವರು ನಟಿ ಜಯಂತಿಗೆ ಈ ಚಿತ್ರಕ್ಕೆ ಪ್ರಶಸ್ತಿ ಕೊಟ್ಟಿದ್ದು ಮಾತ್ರವಲ್ಲ, ವೇದಿಕೆಯ ಮೇಲೆ ಮುತ್ತು ಕೊಟ್ಟು ಶುಭ ಹಾರೈಸಿದ್ದರು. ಈ ಚಿತ್ರದಲ್ಲಿ ನಟಿ ಜಯಂತಿ ಸ್ವಿಮ್ ಸ್ಯೂಟ್ ಮಾತ್ರವಲ್ಲ, ನೈಟಿ, ಟೀಶರ್ಟ್ ಹಾಗೂ ಸ್ಕರ್ಟ್ ಕೂಡ ಹಾಕಿ ಮಿಂಚಿದ್ದರು. ಸಂಪ್ರದಾಯವನ್ನು ಬದಿಗೊತ್ತಿ ನಟಿಸಿದ್ದರು.

ನಟಿ ಜಯಂತಿಯವರು ಅಂದು ಬೋಲ್ಡ್ ಪಾತ್ರಗಳನ್ನು ಮಾಡುವುದರಲ್ಲಿ ತುಂಬಾ ಪ್ರಸಿದ್ಧಿ ಪಡೆದಿದ್ದರು. ಜೊತೆಗೆ, ಡಾ ರಾಜ್‌ಕುಮಾರ್ ಸೇರಿದಂತೆ ಹಲವು ನಾಟಕನಟರಿಗೆ ಹಲವು ಸಮಾರಂಭಗಳಲ್ಲಿ ವೇದಿಕೆ ಮೇಲೆಯೇ ಅಪ್ಪಿಕೊಂಡು ಚುಂಬಿಸುತ್ತಿದ್ದರು ಕೂಡ. ಅವರಿಗೆ ಮುತ್ತು ಕೊಡುವ ಹವ್ಯಾಸ ಇತ್ತು ಎಂಬುದು ಸೀಕ್ರೆಟ್ ಏನೂ ಅಲ್ಲ. ಅದನ್ನು ಹಲವರು ಸ್ವತಃ ಅನುಭವಿಸಿದ್ದಾರೆ, ನೋಡಿದ್ದಾರೆ ಕೂಡ..!

ಒಟ್ಟಿನಲ್ಲಿ, 1965ರಲ್ಲೇ ನಟಿ ಜಯಂತಿಯವರು ಈಜುಡೆಗೆ ಧರಿಸಿದ್ದು ಮಾತ್ರವಲ್ಲ, ದೇಶದ ಪ್ರಧಾನಿ ಇಂದಿರಾ ಗಾಂಧಿ ಅವರಿಂದಲೇ ಮೆಚ್ಚುಗೆ ಪಡೆದಿದ್ದರು. ಬರೀ ಮೆಚ್ಚುಗೆ ಮಾತ್ರವಲ್ಲ, ಮುತ್ತು ಕೂಡ ಪಡೆದು ಎಲ್ಲರಿಗೂ ಅಚ್ಚರಿ ಹುಟ್ಟಿಸಿದ್ದರು. ಇಂದು ನಟಿ ಜಯಂತಿ ನಮ್ಮೊಂದಿಗೆ ಇಲ್ಲ. ಆದರೆ, ಅವರು ನಟಿಸಿದ ಸಿನಿಮಾಗಳು, ಅವರ ಸಾಧನೆಗಳು, ವಿವಾದಗಳು ಹೀಗೆ ಎಲ್ಲವೂ ನಮ್ಮೊಂದಿಗೆ ನೆನಪಾಗಿ, ದಾಖಲೆಗಳಾಗಿ ಇವೆ.

ಪ್ರಕಾಶಕ- ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು-560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು-562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: 9448074878